22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 335 | ನವದೆಹಲಿ | ಬೆಲೆ ₹10 | ಜೂನ್ 13, 2025, ಶುಕ್ರವಾರ

## ಒಳಪುಟಗಳಲ್ಲಿ

ಅಕ್ರಮ ವಲಸಿಗರ ಹೆಸರು ಎನ್‌ಆರ್‌ಸಿಯಲ್ಲಿದ್ದರೂ ಗಡೀಪಾರು: ಅಸ್ಸಾಂ ಸಿಎಂ ಹಿಮಂತ ಬಿಸ್ವಾ - ಪು.4

ಆಂಧ್ರಪ್ರದೇಶಕ್ಕೆ ಮಾವು ಸಾಗಾಟ ನಿಷೇಧ ತೆರವುಗೊಳಿಸಿ: ನಾಯ್ಡುಗೆ ಸಿದ್ದರಾಮಯ್ಯ ಪತ್ರ - ಪು.5

50 ಕೋಟಿ ಸಾಲ ಕೊಡಿಸುವುದಾಗಿ ಮಹಿಳೆಗೆ 60 ಲಕ್ಷ ವಂಚನೆ: ಆರೋಪಿ ಬಂಧನ- ಪು.6

# ಘೋರ ವಿಮಾನ ದುರಂತ: ಮಾಜಿ ಸಿಎಂ ರೂಪಾನಿ ಸೇರಿದಂತೆ 241 ಜನರ ಬಲಿ

## ಅಹಮದಾಬಾದ್ ವಿಮಾನ ನಿಲ್ದಾಣದಿಂದ ಮೇಲೇರಿದ ೩೦ ಸೆಕೆಂಡ್‌ನಲ್ಲೇ ವಿಮಾನ ಪತನ, ಮೆಡಿಕಲ್ ಕಾಲೇಜ್‌ಗೆ ಅಪ್ಪಳಿಸಿ ಭಾರಿ ಸಾವು-ನೋವು





**ಅಹಮದಾಬಾದ್, ಜೂ.12:** ಅಹಮದಾಬಾದ್ ವಿಮಾನ ನಿಲ್ದಾಣದಿಂದ 241 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಏರ್ ಇಂಡಿಯಾ ವಿಮಾನ ಟೇಕ್ ಆಫ್ ಆದ ಐದೇ ನಿಮಿಷಕ್ಕೆ ಅಪಘಾತಕ್ಕೀಡಾಗಿದೆ. ಏರ್‌ಇಂಡಿಯಾ ವಿಮಾನ, ಬೋಯಿಂಗ್ ಡ್ರೀಮ್‌ಲೈನರ್ 787, ಟೇಕ್ ಆಫ್ ಆದ ಕೆಲವೇ ನಿಮಿಷಗಳಲ್ಲಿ ಸಂಪರ್ಕವನ್ನು ಕಳೆದುಕೊಂಡಿತು ಮತ್ತು ವಿಮಾನ ನಿಲ್ದಾಣದ ಸಮೀಪವಿರುವ ಜನನಿಬಿಡ ಪ್ರದೇಶವಾದ ಮೇಘನಿ ನಗರ ಪ್ರದೇಶದಲ್ಲಿ ಪತನಗೊಂಡಿತು.

ಸೀಟ್ ನಂ. 11 ಎ ನಲ್ಲಿ ಕುಳಿತಿದ್ದ ಒಬ್ಬ ವ್ಯಕ್ತಿ, 40 ವರ್ಷ ವಯಸ್ಸಿನ ರಮೇಶ್ ವಿಶ್ವಾಸ್‌ಕುಮಾರ್ ಎಂಬ ವ್ಯಕ್ತಿ ವಿಮಾನದಿಂದ ಹಾರಿ, ಪ್ರಾಣವನ್ನು ಉಳಿಸಿಕೊಂಡಿದ್ದಾರೆ ಎಂದು ಹೇಳಿಕೊಂಡಿದ್ದಾರೆ.

ಎಚ್ಚರವಾದಗ ಹೆಣದ ರಾಶಿಗಳ ಮಧ್ಯೆ ಬಿದ್ದಿದ್ದೆ ಎಂದು ಭಯಾನಕತೆ ಬಿಚ್ಚಿಟ್ಟಿದ್ದಾರೆ. ಭಯದಿಂದ ರಮೇಶ್ ವಿಶ್ವಕ್ಕುಮಾರ್ ಓಡುತ್ತಾ ಬರುತ್ತಿರುವುದನ್ನು ನೋಡಿದ ಸ್ಥಳೀಯರು ವಿಚಾರಿಸಿದಾಗ, ಘಟನೆ ಬೆಳಕಿಗೆ ಬಂದಿದೆ. ಕೂಡಲೇ ಅವರನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ರಕ್ಷಣಾ ಕಾರ್ಯಾಚರಣೆಗಳು ನಡೆಯುತ್ತಿವೆ. ಗಾಂಧಿನಗರದಿಂದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ತಂಡಗಳನ್ನು ಕರೆತರಲಾಯಿತು. ಸ್ಥಳೀಯ ನಿವಾಸಿಗಳು ರಕ್ಷಣಾ ಕಾರ್ಯಗಳಿಗೆ ಸಹಾಯ ಮಾಡಲು ಪ್ರದೇಶಕ್ಕೆ ಧಾವಿಸಿದರು. ವಿಮಾನದಲ್ಲಿ 169 ಭಾರತೀಯರು, 53 ಬ್ರಿಟಿಷ್, ಒಬ್ಬ ಕೆನಡಾ ಮತ್ತು ಏಳು ಪೋರ್ಚುಗೀಸ್ ಪ್ರಜೆಗಳು ಇದ್ದರು. 12 ಸಿಬ್ಬಂದಿ ಇದ್ದರು.

ಅಹಮದಾಬಾದ್‌ನಲ್ಲಿ ಸಂಭವಿಸಿದ ವಿಮಾನ ಪತನದಲ್ಲಿ ಬಿಜೆಪಿ ನಾಯಕ, ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಸೇರಿದಂತೆ 242 ಜನರು ಪ್ರಕಟಿಸಿದ್ದಾರೆ ಎಂದು ಅಹಮದಾಬಾದ್ ನಗರ ಪೊಲೀಸ್ ಕಮಿಷನರ್ ಮಾಹಿತಿ ನೀಡಿದ್ದಾರೆ. ಮಾಜಿ ಸಿಎಂ ವಿಜಯ್ ರೂಪಾನಿ ತಮ್ಮ ಮಗಳನ್ನು ಭೇಟಿ ಮಾಡಲು ಇದೇ ವಿಮಾನದಲ್ಲಿ ಲಂಡನ್‌ಗೆ ತೆರಳಿದ್ದಾಗ ದುರದೃಷ್ಟವಶಾತ್ ದುರಂತದಲ್ಲಿ ಅಸುನೀಗಿದ್ದಾರೆ.

**ಸ್ಥಳದಲ್ಲಿ ಅವಶೇಷಗಳಡಿಯಿಂದ ರಕ್ಷಣಾ ತಂಡಗಳು ಈ ವರೆಗೆ 265 ಮೃತದೇಹಗಳನ್ನು ಹೊರತೆಗೆದು ಆಸ್ಪತ್ರೆಗೆ ರವಾನಿಸಿದ್ದಾರೆ. ವಿಮಾನ ದುರಂತದಲ್ಲಿ ಸತ್ತವರ ಸಂಖ್ಯೆ 241, ಹಾಸ್ಟೆಲ್‌ನಲ್ಲಿ 24 ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ.**



ವಿಮಾನ ಅಪಘಾತದ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ, ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಅವರೊಂದಿಗೆ ಪರಿಸ್ಥಿತಿಯನ್ನು ಪರಿಶೀಲಿಸಿದರು.



ಏರ್ ಇಂಡಿಯಾ ಬೋಯಿಂಗ್ 787–8 ಡ್ರೀಮ್‌ಲೈನರ್ A ನಿಂದ ಹೊರಟ ಸ್ವಲ್ಪ ಸಮಯದ ನಂತರ ಅಪಘಾತಕ್ಕೀಡಾಗಿದೆ



ಏರ್ ಇಂಡಿಯಾ ವಿಮಾನದ ಅವಶೇಷಗಳು ಘಟನೆ ನಡೆದ ಸ್ಥಳದಲ್ಲಿ ಹರಡಿಕೊಂಡಿವೆ



ವಿಮಾನ ಅಪಘಾತದ ಸ್ಥಳದಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಪಡೆ ಕಾರ್ಯಪ್ರವೃತ್ತರಾಗಿದ್ದಾರೆ..

## ರೈಲ್ವೆ ತತ್ಕಾಲ್ ಟಿಕೆಟ್ ಬುಕ್ಕಿಂಗ್‌ಗೆ ಜು.1 ರಿಂದ ಆಧಾರ್ ಕಡ್ಡಾಯ




ನವದೆಹಲಿ, ಜೂ.12: ತತ್ಕಾಲ್ ಟಿಕೆಟ್ ಬುಕ್ಕಿಂಗ್ ನಲ್ಲಾಗುತ್ತಿರುವ ದುರ್ಬಳಕೆ ತಡೆಯಲು ಭಾರತೀಯ ರೈಲ್ವೆ ಇಲಾಖೆ ಹೊಸ ನಿಯಮ ತರುತ್ತಿದ್ದು, ಇದೇ ಜುಲೈ 1ರಿಂದ ಜಾರಿಯಾಗಲಿದೆ.

ಈ ಕುರಿತು ರೈಲ್ವೆ ಇಲಾಖೆ ಹೊರಡಿಸಿದ ಸುತ್ತೋಲೆ ಪ್ರಕಾರ, ತತ್ಕಾಲ್ ಟಿಕೆಟ್ ಬುಕ್ಕಿಂಗ್ ಏಜೆಂಟ್‌ಗಳು ಮಾಡುವ ದುರ್ಬಳಕೆ ತಡೆಯಲು ಹಾಗೂ ಜನರು ತತ್ಕಾಲ್ ಟಿಕೆಟ್‌ನ ಲಾಭವನ್ನು ಸರಿಯಾದ ರೀತಿಯಲ್ಲಿ ಪಡೆದುಕೊಳ್ಳುವ ಸಲುವಾಗಿ ಈ ಹೊಸ ನಿಯಮಗಳನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದೆ.

ಜುಲೈ 1ರಿಂದ ತತ್ಕಾಲ್ ಟಿಕೆಟ್ ಬುಕ್ಕಿಂಗ್ ಮಾಡಲು ಆಧಾರ್ ಕಾರ್ಡ್ ಕಡ್ಡಾಯ ಹಾಗೂ ಜುಲೈ 15ರಿಂದ ಆಧಾರ್‌ಗೆ ಲಿಂಕ್ ಆಗಿರುವ ಮೊಬೈಲ್ ಓಟಿಪಿ ಕಡ್ಡಾಯವಾಗಿರಲಿದೆ. ತತ್ಕಾಲ್ ಟಿಕೆಟ್ ಬುಕ್ ಮಾಡಲು ಐಆರ್‌ಸಿಟಿಸಿ ವೆಬ್‌ಸೈಟ್ ಮತ್ತು ಆಪ್‌ಗಳಲ್ಲಿ ಮಾತ್ರ ಅವಕಾಶವಿರಲಿದೆ. ಈ ನಿಯಮಗಳು ಆನ್‌ಲೈನ್ ಹಾಗೂ ಆಫ್‌ಲೈನ್ ತತ್ಕಾಲ್ ಟಿಕೆಟ್ ಬುಕ್ಕಿಂಗ್ ಎರಡಕ್ಕೂ ಅನ್ವಯಿಸಲಿದೆ. ರೈಲು ಹೊರಡುವ 24 ಗಂಟೆಗಳ ಮುನ್ನವೇ ಫೈನಲ್ ಬರ್ತ್ ಚಾರ್ಟ್ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ.

**ಹೊಸ ನಿಯಮಗಳೇನು?** ತತ್ಕಾಲ್ ಟಿಕೆಟ್ ಬುಕ್ಕಿಂಗ್‌ಗೆ ಆಧಾರ್ ದೃಢೀಕರಣ ಅಗತ್ಯ. ಕೇವಲ ಐಆರ್‌ಸಿಟಿಸಿ ವೆಬ್‌ಸೈಟ್ ಮತ್ತು ಆಪ್‌ಗಳಲ್ಲಿ ಮಾತ್ರ ತತ್ಕಾಲ್ ಟಿಕೆಟ್ ಬುಕ್ ಮಾಡಲು ಅವಕಾಶ.

ರೈಲು ಹೊರಡುವ 24 ಗಂಟೆಗಳ ಮುನ್ನವೇ ಫೈನಲ್ ಬರ್ತ್ ಚಾರ್ಟ್ ಅನ್ನು ಬಿಡುಗಡೆ ಮಾಡುವುದಾಗಿ ರೈಲ್ವೆ ಇಲಾಖೆ ಸ್ಪಷ್ಟಪಡಿಸಿದೆ.

## ಏರ್ ಇಂಡಿಯಾ ವಿಮಾನ ದುರಂತ: ಪ್ರಧಾನಿ ಮೋದಿ ದಿಗ್ಭ್ರಮೆ



ಅಹಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ದುರಂತಕ್ಕೆ ಪ್ರಧಾನಿ ನರೇಂದ್ರ ಮೋದಿಯವರು ಸಂತಾಪ ಸೂಚಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಅಹಮದಾಬಾದ್ನಲ್ಲಿರುವ ಏರ್ ಇಂಡಿಯಾ ವಿಮಾನ ದುರಂತದಿಂದ ದಿಗ್ಭ್ರಮೆಗೊಂಡಿದ್ದಾರೆ. ಇದರಿಂದ ಎಲ್ಲರಿಗೂ ಅತೀವ ನೋವು ಉಂಟಾಗಿದೆ. ದುರಂತದಲ್ಲಿ ಸಿಲುಕಿರುವವರಿಗೆ ನೆರವು ನೀಡುವ ವಿಚಾರವಾಗಿ ಸಚಿವರು ಹಾಗೂ ಅಧಿಕಾರಿಗಳ ಜೊತೆ ಮಾತನಾಡಿದ್ದಾರೆ. ನಂತರ ನಿರಂತರವಾಗಿ ಅವರ ಜೊತೆ ಸಂಪರ್ಕದಲ್ಲಿದ್ದೇನೆ ಎಂದರು. ಈ ಅವಘಡದ ಕುರಿತು ಅವರು, ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಅವರೊಂದಿಗೆ ಮಾತನಾಡಿ ಮಾಹಿತಿ ಪಡೆದಿದ್ದಾರೆ.

## ಮುಖ್ಯಮಂತ್ರಿ ಸಿದ್ದರಾಮಯ್ಯ ಕಂಬನಿ



ಗುಜರಾತ್‌ನಲ್ಲಿ ಏರ್ ಇಂಡಿಯಾ ವಿಮಾನ ಅಪಘಾತಕ್ಕೀಡಾಗಿದ್ದು, ಸಿಎಂ ಸಿದ್ದರಾಮಯ್ಯ ಆಘಾತ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಸುಮಾರು 242ಕ್ಕೂ ಅಧಿಕ ಪ್ರಯಾಣಿಕರಿದ್ದ ಏರ್ ಇಂಡಿಯಾ ವಿಮಾನ ಗುಜರಾತ್‌ನ ಅಹ್ಮದಾಬಾದ್ ನಗರದಲ್ಲಿ ಅಪಘಾತಕ್ಕೀಡಾದ ಸುದ್ದಿ ತಿಳಿದು ಆಘಾತವಾಗಿದೆ. ಇದು ಅತ್ಯಂತ ದುರದೃಷ್ಟಕರ ಮತ್ತು ನೋವಿನ ವಿಚಾರ. ಈ ಅಪಘಾತದಿಂದ ಹೆಚ್ಚಿನ ಹಾನಿಯಾಗದಿರಲಿ, ಪ್ರಯಾಣಿಕರೆಲ್ಲರೂ ಸುರಕ್ಷಿತವಾಗಿರಲಿ ಎಂದು ಪ್ರಾರ್ಥಿಸೋಣ ಎಂದು ತಿಳಿಸಿದ್ದಾರೆ.

## ದುರಂತದಲ್ಲಿ ಮಡಿದವರಿಗೆ ತಲಾ 1 ಕೋಟಿ ರೂ. ಪರಿಹಾರ: ಟಾಟಾ ಸಂಸ್ಥೆ

ಮುಂಬೈ: ಅಹಮದಾಬಾದ್ ಘೋರ ವಿಮಾನ ಅಪಘಾತದ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿರುವ ಟಾಟಾ ಸನ್ಸ್ ಸಮೂಹದ ಮುಖ್ಯಸ್ಥ ಚಂದ್ರಶೇಖರನ್, ಈ ದುಃಖದ ವೇಳೆ ಎಲ್ಲ ಕುಟುಂಬಗಳಿಗೆ ನಾವು ಸಾಂತ್ವನ ಹೇಳುತ್ತೇವೆ. ಸತ್ತವರ ಕುಟುಂಬಗಳಿಗೆ ತಲಾ ಒಂದು ಕೋಟಿ ರೂ. ಪರಿಹಾರ ನೀಡಲಾಗುವುದು. ಗಾಯಾಳುಗಳ ಎಲ್ಲ ಚಿಕಿತ್ಸಾ ವೆಚ್ಚವನ್ನು ಸಂಸ್ಥೆಯೇ ಭರಿಸಲಿದೆ ಎಂದಿದ್ದಾರೆ. ಅಲ್ಲದೆ ಅಪಘಾತದಲ್ಲಿ ಧ್ವಂಸಗೊಂಡ ವೈದ್ಯಕೀಯ ಕಾಲೇಜಿನ ಕಟ್ಟಡವನ್ನು ಮರುನಿರ್ಮಿಸಲಾಗುವುದು ಎಂದು ಚಂದ್ರಶೇಖರನ್ ಭರವಸೆ ನೀಡಿದ್ದಾರೆ.

## ಅಪಘಾತದ ಬಗ್ಗೆ ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ತನಿಖೆಯಾಗಲಿ: ಖರ್ಗೆ

ಕಲಬುರಗಿ, ಜೂ.12: ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾ ವಿಮಾನ ಅಪಘಾತದ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ ಮತ್ತು ದುರಂತದ ಬಗ್ಗೆ ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ದುರದೃಷ್ಟಕರ ಘಟನೆಯಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ನಾನು ನನ್ನ ಹೃತ್ಪೂರ್ವಕ ಸಂತಾಪ ಸೂಚಿಸುತ್ತೇನೆ ಎಂದು ಹೇಳಿದರು. ಸರ್ಕಾರದ ತ್ವರಿತ ಪ್ರತಿಕ್ರಿಯೆಗೆ ಕರೆ ನೀಡಿದ ಖರ್ಗೆ, ಬದುಕುಳಿದವರು, ಗಾಯಾಳುಗಳು, ಹಾಸ್ಟೆಲ್ ವಿದ್ಯಾರ್ಥಿಗಳು ಮತ್ತು ಸಂತ್ರಸ್ತ ಸ್ಥಳೀಯರಿಗೆ ತಕ್ಷಣದ ಆರ್ಥಿಕ ಮತ್ತು ವೈದ್ಯಕೀಯ ನೆರವು ನೀಡಬೇಕು ಎಂದು ಒತ್ತಿ ಹೇಳಿದರು. ಈ ದುರಂತದಿಂದ ಪ್ರಭಾವಿತರಾದ ಪ್ರತಿಯೊಬ್ಬ ವ್ಯಕ್ತಿಗೂ ಭಾವನಾತ್ಮಕ, ಆರ್ಥಿಕ ಮತ್ತು ವೈದ್ಯಕೀಯ ಸಂಪೂರ್ಣ ಬೆಂಬಲ ಸಿಗಬೇಕು" ಎಂದು ಅವರು ಹೇಳಿದರು.

## ಗುಜರಾತ್‌ನ ವಿಮಾನ ದುರಂತ ಡಾ। ಭಟ್ಟಾರಕ ಚಾರುಕೀರ್ತಿ-ಲಕ್ಷ್ಮಣ ಪೂಜಾರಿ ಚಿತ್ರಾಪು ಸಂತಾಪ





ಮುಂಬಯಿ (ಆರ್‌ಬಿಐ), ಜೂ.12: ಇಂದಿಲ್ಲಿ ಗುರುವಾರ ಗುಜರಾತ್‌ನ ಅಹ್ಮದಾಬಾದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಪಘಾತಕ್ಕೀಡಾದ ಏರ್ ಇಂಡಿಯಾ ಬೋಯಿಂಗ್ ದುರಂತ ನಡೆದ ಸುದ್ದಿ ತಿಳಿದು ತುಂಬಾ ದುಃಖವಾಯಿತು. ದುರಂತದಲ್ಲಿ ಮಡಿದ ದೇಶ-ವಿದೇಶಗಳ ಎಲ್ಲಾ ಪ್ರಯಾಣಿಕರು ಸಿಬ್ಬಂದಿಗಳ ಆತ್ಮಕ್ಕೆ ಉತ್ತಮ ಸದ್ಗತಿ ಪ್ರಾಪ್ತಿಯಾಗಲಿ ಮತ್ತು ಅಗಲಿದ ಕುಟುಂಬಸ್ಥರೆಲ್ಲರಿಗೆ ಈ ಕಷ್ಟ, ನಷ್ಟದ ಸಮಯದಿ ನೋವನ್ನು ಸಹಸುವ ಶಕ್ತಿ ಭಗವಂತನು ಕರುಣಿಸಲಿ ಎಂದು ಪ್ರಾರ್ಥಿಸುವುದಾಗಿ ಜಗದ್ಗುರು ಶ್ರೀ ದಿಗಂಬರ ಜೈನ ಮಠ, ಜೈನಕಾಶಿ ಮೂಡಬಿದಿರೆ ಮಹಾಕ್ಷೇತ್ರದ ಜೈನ ಮಹಾಸಂಸ್ಥಾನದ ಪೀಠಾಧ್ಯಕ್ಷ ಭಾರತ ಭೂಷಣ ಜಗದ್ಗುರು ಸ್ವಸ್ತಿಶ್ರೀ ಜಗದ್ಗುರು ಸ್ವಸ್ತಿಶ್ರೀ ಡಾ। ಭಟ್ಟಾರಕ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಮಹಾ ಸ್ವಾಮೀಜಿ ತಿಳಿಸಿದ್ದಾರೆ.

ಇಂತಹ ಘಟನೆ ಮರುಕಳಿಸದಂತೆ ದೊಡ್ಡ ಮಟ್ಟದ ಅಪಾಯ ವಿಮಾನ ಯಾನಿಗಳಿಗೆ ಆಗದಂತೆ ತಾಂತ್ರಿಕತೆಯಲ್ಲಿ ಸುಧಾರಣೆ ಬಹು ಅಗತ್ಯ. ಇದೊಂದು ಜಗತ್ತಿನಲ್ಲಿರುವ ತಂತ್ರಜ್ಞರು ಯೋಚಿಸ ಬೇಕಾದ ಸಮಯವಾಗಿದೆ. ಅಂತಾರಾಷ್ಟ್ರಿಯ ವಿಮಾನದಲ್ಲಿ ಇದೊಂದು ನಡೆಯ ಬಾರದ ಕೆಟ್ಟ ದುರಂತವಾಗಿದೆ. ಅಗಲಿದವರ ಎಲ್ಲಾ ಬಂಧುಗಳ ದುಃಖವನ್ನು ಸಹಿಸುವ ಶಕ್ತಿ ಶ್ರೀ ಜಿನ ಭಗವಂತ ಜಿನ ಶಾಸ ನ ದೇವತೆ ಗಳು ನೀಡಲೆಂದು ಪ್ರಾರ್ಥಿಸುತ್ತೇವೆ ಎಂದೂ ಸ್ವಸ್ತಿಶ್ರೀ ಡಾ। ಭಟ್ಟಾರಕ ಚಾರುಕೀರ್ತಿ ಸ್ವಾಮೀಜಿ ತಿಳಿಸಿದ್ದಾರೆ.

ಲಕ್ಷ್ಮಣ ಸಿ.ಪೂಜಾರಿ ಚಿತ್ರಾಪು ಸಂತಾಪ

ಬೃಹನ್ಮುಂಬಯಿ ಅಲ್ಲಿನ ಹಿರಿಯ ತುಳು-ಕನ್ನಡಿಗ ರಾಜಕೀಯ ಧುರೀಣ, ರಾಷ್ಟ್ರವಾದಿ ಕಾಂಗ್ರೆಸ್ ಪಕ್ಷ (ಎನ್‌ಸಿಪಿ) ಮುಂಬಯಿ ಪ್ರದೇಶ ಉಪಾಧ್ಯಕ್ಷ, ಉತ್ತರ ಮಧ್ಯ ಜಿಲ್ಲಾ ನಿರೀಕ್ಷಕ ಲಕ್ಷ್ಮಣ ಸಿ.ಪೂಜಾರಿ ಚಿತ್ರಾಪು ಅವರೂ ದುರಂತದ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿ ಮಡಿದ ಎಲ್ಲಾ ದಿವ್ಯಾತ್ಮಗಳಿಗೂ ಸದ್ಗತಿ, ಚಿರಶಾಂತಿ ಕರುಣಿಸಲಿ ಎಂದು ಪ್ರಾರ್ಥಿಸಿದ್ದಾರೆ.

# ಹಿಂದುಳಿದ ವರ್ಗಗಳ ಸಾಮಾಜಿಕ-ಶೈಕ್ಷಣಿಕ ಮರು ಸಮೀಕ್ಷೆ: ಸಚಿವ ಸಂಪುಟ ತೀರ್ಮಾನ: ಸಿಎಂ

**ಬೆಂಗಳೂರು, ಜೂ.12:** ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಹತ್ತು ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ 1995 ಸೆಕ್ಷನ್ 11 (2) ರಂತೆ ಮರುಸಮೀಕ್ಷೆ ಕೈಗೊಳ್ಳಲು ಸಚಿವ ಸಂಪುಟ ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಶೇಷ ಸಚಿವ ಸಂಪುಟ ಸಭೆಯ ನಿರ್ಣಯಗಳ ಕುರಿತು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಹಿಂದುಳಿದ ಜಾತಿಗಳ ಶಾಶ್ವತ ಆಯೋಗ ಸಲ್ಲಿಸಿರುವ ವರದಿಯ ಮೇಲೆ ಇಂದು ಅಂತಿಮವಾಗಿ ಚರ್ಚೆ ಮಾಡಲು ಕಳೆದ ಸಚಿವ ಸಂಪುಟದಲ್ಲಿ ತೀರ್ಮಾನಿಸಿ, ಇಂದು ಒಂದೇ ವಿಷಯದ ಮೇಲೆ ಚರ್ಚೆ ಮಾಡಲಾಗಿದೆ ಎಂದರು.



ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು 54 ಮಾನದಂಡಗಳನ್ನು ಇಟ್ಟುಕೊಂಡು ಕೈಗೊಂಡು ಮನೆ ಮನೆಗೆ ಭೇಟಿ ನೀಡಿ ಸಲ್ಲಿಸಿರುವ ವರದಿಯಾಗಿದೆ. 2011 ರ ಜನಗಣತಿ ಪ್ರಕಾರ ಕರ್ನಾಟಕದಲ್ಲಿ 6.11 ಕೋಟಿ ಜನರಿದ್ದರು. ಈ ಜನಸಂಖ್ಯೆ 2015 ರ ವೇಳೆಗೆ 6.35 ಕೋಟಿ ಎಂದು ಅಂದಾಜಿಸಲಾಗಿದೆ. 5.98 ಕೋಟಿ ಜನರು ಸಮೀಕ್ಷೆಗೆ ಒಳಪಟ್ಟಿದ್ದಾರೆ. ಸಮೀಕ್ಷೆ ಪ್ರಾರಂಭವಾಗಿದ್ದು 2015 ರ ಏಪ್ರಿಲ್ 11 ರಿಂದ ಪ್ರಾರಂಭವಾಗಿ ಮೇ 30ಕ್ಕೆ ಮುಕ್ತಾಯವಾಗಿದೆ. 1.60 ಲಕ್ಷ ಸಿಬ್ಬಂದಿ ಹಾಗೂ 1.33 ಲಕ್ಷ ಶಿಕ್ಷಕರು ಸಮೀಕ್ಷೆಯಲ್ಲಿ ಪಾಲ್ಗೊಂಡಿದ್ದರು ಎಂದು ಮುಖ್ಯಮಂತ್ರಿಗಳು ವಿವರಿಸಿದರು.

ಹಿಂದೆ 2013–2018 ರವರೆಗೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ವರದಿ ಮತ್ತು ಅದರ ಶಿಫಾರಸ್ಸುಗಳು ಅಂತಿಮಗೊಂಡಿರಲಿಲ್ಲ. 2018 ರಲ್ಲಿ ಸಮ್ಮಿಶ್ರ ಸರ್ಕಾರ ರಚನೆಯಾಗಿ ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾದರು. ಪುಟ್ಟರಂಗಶೆಟ್ಟರು ಅವರು ಹಿಂದುಳಿದ ವರ್ಗಗಳ ಸಚಿವರಾದರು. ಆ ವೇಳೆಗೆ ವರದಿ ಪೂರ್ಣಗೊಂಡಿತ್ತು. ಅಂದಿನ ಆಯೋಗದ ಅಧ್ಯಕ್ಷರಾದ ಕಾಂತರಾಜು ಹಾಗೂ ಸದಸ್ಯರು ಸಚಿವ ಪುಟ್ಟರಂಗಶೆಟ್ಟರನ್ನು ಭೇಟಿ ಮಾಡಿ ವರದಿ ಪಡೆಯಬೇಕು ಎಂದು ಕೋರಿದಾಗ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿಯವರು ಒತ್ತಡ ಹಾಕಿ ವರದಿಯನ್ನು ಪಡೆಯಬಾರದು ಎಂದು ಕಟ್ಟಪ್ಪಣೆ ಮಾಡಿದ್ದರು. ಹೀಗಾಗಿ ಅವರು ವರದಿ ಪಡೆಯಲಿಲ್ಲ. ಕಾಂತರಾಜು ಅವರ ಅವಧಿ ಮುಗಿದ ನಂತರ ಜಯಪ್ರಕಾಶ್ ಹೆಗಡೆ ಅವರನ್ನು ಬಿಜೆಪಿ ಸರ್ಕಾರ ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಿತು. ಸದಸ್ಯರೂ ಕೂಡ ಬಿಜೆಪಿಯವರೇ ಆಗಿದ್ದರು. ಜಯಪ್ರಕಾಶ್ ಹೆಗಡೆ ಅವರು ಸಮೀಕ್ಷೆಯ ದತ್ತಾಂಶಗಳ ಆಧಾರದ ಮೇಲೆ ಶಿಫಾರಸ್ಸು ಮಾಡಿದರು. ಶಿಫಾರಸ್ಸುಗಳನ್ನು 29–2–2024 ರಂದು ಸರ್ಕಾರಕ್ಕೆ ಸಲ್ಲಿಸಿದರು. ಕಾಂತರಾಜು ಅವರು ಕೂಡ ಈ ಸಂದರ್ಭದಲ್ಲಿ ಇದ್ದರು ಎಂದು ತಿಳಿಸಿದರು.

ಲೋಕಸಭಾ ಚುನಾವಣೆ ಬಂದಿದ್ದರಿಂದ ವರದಿಯ ಬಗ್ಗೆ ಚರ್ಚೆ ಮಾಡಲಾಗಲಿಲ್ಲ. ನಂತರ ನಮ್ಮ ಸರ್ಕಾರ ವರದಿಯನ್ನು ಪಡೆದು 2025 ರಲ್ಲಿ ಸಚಿವ ಸಂಪುಟದಲ್ಲಿ ಮಂಡಿಸಲಾಗಿದೆ. ಸಚಿವ ಸಂಪುಟದಲ್ಲಿ ಮಂತ್ರಿ ಮಂಡಲದ ಸದಸ್ಯರು ಅಭಿಪ್ರಾಯಗಳನ್ನು ನೀಡಿದ್ದಾರೆ. ಅಂತಿಮವಾಗಿ ಇಂದು ವರದಿಯ ಬಗ್ಗೆ ಚರ್ಚೆ ಮಾಡಿದೆ ಎಂದರು.

**ಬಿಜೆಪಿ ಸೋಷಿಯಲ್ ಮೀಡಿಯಾದಲ್ಲಿ ಹರಿಹಾಯ್ದಿದೆ.**

**ಜಾತಿ ಗಣತಿ ಮರು ಸರ್ವೇಗೆ ಮತ್ತೆ ಹಣ ವಿನಿಯೋಗಿಸೋರು ಯಾರು..? ವಂಶ ಪರಂಪರೆ ಮುಂದುವರಿಸಿರುವ ಕುಟುಂಬ ಕೊಡುತ್ತಾ..?**

**ನಿಮ್ಮ ಯಡವಟ್ಟು ನಿರ್ಧಾರಕ್ಕೆ ಕನ್ನಡಿಗರ ತೆರಿಗೆ ಹಣ ಯಾಕೆ ದುರ್ಬಳಕೆ ಮಾಡ್ತಿದ್ದೀರಾ..? ಎಂದು ಪ್ರಶ್ನೆ ಮಾಡಿದೆ.**

**ಕೇಂದ್ರ ಸರ್ಕಾರ ಈಗಾಗಲೇ ಸಮೀಕ್ಷೆ ನಡೆಸುತ್ತಿದೆ. ಅದರದ್ದೇ ಡೂಪ್ಲಿಕೇಟ್ ಸಮೀಕ್ಷೆ ನೀವೇಕೆ ಮಾಡ್ತಿದ್ದೀರಿ..?**

**ರಾಜ್ಯದ ಕೈ ನಾಯಕರು ರಬ್ಬರ್ ಸ್ಟ್ಯಾಂಪ್ ರೀತಿ ವರ್ತಿಸುತ್ತಿದ್ದೀರಲ್ಲ.. ನಿಮಗೆ ನೈತಿಕತೆ ಇದ್ಯಾ? ಎಂದು ಬಿಜೆಪಿ ಕೆಂಡಕಾರಿದೆ.**

### ಪಕ್ಷದ ವರಿಷ್ಠರ ಸಲಹೆ

ಪಕ್ಷದ ವರಿಷ್ಠರು ನನ್ನನ್ನು ಮತ್ತು ಉಪಮುಖ್ಯಮಂತ್ರಿಗಳನ್ನು ಕರೆದು ವರದಿ ಹತ್ತು ವರ್ಷಗಳಷ್ಟು ಹಳೆಯದಾಗಿದ್ದು, ಕಾನೂನು ಪ್ರಕಾರ ಅನೇಕ ಬದಲಾವಣೆಗಳು ಮತ್ತು ಬೆಳವಣಿಗೆಗಳು ಆಗಿರುತ್ತವೆ ಎಂದು ಸಲಹೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ತಿದ್ದುಪಡಿ ವಿಧೇಯಕ (2014) ಸೆಕ್ಷನ್ 11 ಕಲಂ (1) ರಂತೆ ರಾಜ್ಯ ಸರ್ಕಾರವು ಯಾವುದೇ ಸಮಯದಲ್ಲಿ ಈ ಅಧಿನಿಯಮ ಜಾರಿಗೆ ಬಂದ ದಿನಾಂಕದಿಂದ 10 ವರ್ಷಗಳ ಅವಧಿ ಮುಕ್ತಾಯವಾದಾಗ, ಮತ್ತು ಅದರ ನಂತರ ಬರುವ ಪ್ರತಿ 10 ವರ್ಷಗಳು ಮುಕ್ತಾಯವಾಗುವಾಗ ಹಿಂದುಳಿದ ವರ್ಗವಾಗಿ ಉಳಿಯದೇ ಹೋಗಿರುವ ವರ್ಗಗಳನ್ನು ಪಟ್ಟಿಯನ್ನು ತೆಗೆದುಹಾಕುವುದು ಅಥವಾ ಹೊಸ ಹಿಂದುಳಿದ ವರ್ಗಗಳನ್ನು ಪಟ್ಟಿಗೆ ಸೇರಿಸುವುದು ಎಂದು ಸ್ಪಷ್ಟವಾಗಿದೆ ಹೇಳಿದೆ. ಕಲಂ 2 ರಲ್ಲಿ ಹೇಳಿದಂತೆ ಆಯೋಗದ ಅಧ್ಯಕ್ಷರಾದ ಮಧುಸೂದನ ನಾಯಕ್ ಅವರ ಸಲಹೆಯನ್ನೂ ಪಡೆಯಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಈ ಬಗ್ಗೆ ಸುದ್ದಿಗಾರರು ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಕಾಯ್ದೆಯ ಸೆಕ್ಷನ್ 11 ರಂತೆ ಹತ್ತು ವರ್ಷಗಳ ನಂತರ ಸಮೀಕ್ಷೆಯ ವರದಿ ಮಾನ್ಯವಾಗುವುದಿಲ್ಲ. ಜನಸಂಖ್ಯೆ, ಶೈಕ್ಷಣಿಕ ಸಾಮಾಜಿಕ ಬೆಳವಣಿಗೆಗಳು ಆಗಿರುತ್ತವೆ ಎಂದರು.

ಪ್ರಣಾಳಿಕೆಯಲ್ಲಿ ವರದಿ ಜಾರಿ ಮಾಡುವ ಬಗ್ಗೆ ಆಶ್ವಾಸನೆ ನೀಡಲಾಗಿತ್ತು ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಸಾಮಾಜಿಕ ಪರಿಸ್ಥಿತಿಗಳು ಬದಲಾಗಿರುವ ಹಿನ್ನಲೆಯಲ್ಲಿ ಹಾಗೂ ಪಕ್ಷದ ವರಿಷ್ಠರೂ ಮಾರ್ಗದರ್ಶನ ಮಾಡಿದ್ದು, ಇಂದಿನ ಸಚಿವ ಸಂಪುಟದಲ್ಲಿ ಮರುಸಮೀಕ್ಷೆಗೆ ತೀರ್ಮಾನಿಸಲಾಗಿದೆ ಎಂದರು.

ನಿವೃತ್ತ ಅಡ್ವೊಕೇಟ್ ಜನರಲ್ ಮಧುಸೂದನ ನಾಯಕ್ ಅವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದಾರೆ. ಇನ್ನೂ ಸದಸ್ಯರ ನೇಮಕ ಆಗಬೇಕಿದೆ. ಸಮೀಕ್ಷೆ ಕುರಿತು ಚರ್ಚಿಸಲು ಅವರನ್ನು ಸಂಪರ್ಕಿಸಲಾಗುತ್ತದೆ ಎಂದು ಹೇಳಿದರು.

### ಆಯೋಗದ ಸಲಹೆ ಪಡೆಯಲಾಗುವುದು

ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ–1995ರ ಸೆಕ್ಷನ್ 9 (2) ರಲ್ಲಿ ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ, ಸಮಸ್ಯೆಗಳ ಬಗ್ಗೆ ಸಮೀಕ್ಷೆ ನಡೆಸಬೇಕು ಎಂದು ಹೇಳಿದೆ. ತಿದ್ದುಪಡಿ ಆಗಿರುವುದು 2014ರಲ್ಲಿ. ಹಿಂದುಳಿದ ವರ್ಗಗಳ ಕಲ್ಯಾಣ ಕಾರ್ಯಕ್ರಮಗಳ ಮೇಲ್ವಿಚಾರಣೆ ಮಾಡಬೇಕು ಎಂದು ಸೆಕ್ಷನ್ (3) ರಲ್ಲಿ ಹೇಳಿದೆ. ಸೆಕ್ಷನ್ 9 (1)ರ ಅನ್ವಯ ಅರ್ಜಿಗಳನ್ನು ಪರಿಶೀಲಿಸಿ ಹಿಂದುಳಿದ ವರ್ಗಗಳಿಗೆ ಸೇರಿಸುವ ಅಥವಾ ತೆಗೆದು ಹಾಕುವ ಅಧಿಕಾರ ಆಯೋಗಕ್ಕೆ ಇರುತ್ತದೆ. ಆದ್ದರಿಂದ ಹೊಸದಾಗಿ ಸಮೀಕ್ಷೆ ನಡೆಸುವ ಕುರಿತು ಇಂದು ಸಚಿವ ಸಂಪುಟದ ನಿರ್ಧಾರ ಆಗಿದ್ದು ಮುಂದಿನ ದಿನಗಳಲ್ಲಿ ಆಯೋಗದ ಸಲಹೆಯನ್ನೂ ಪಡೆಯಲಾಗುತ್ತದೆ ಎಂದು ಮುಖ್ಯಮಂತ್ರಿ ತಿಳಿಸಿದರು.

### ಕಾನೂನಿನ ಪ್ರಕಾರ ತೀರ್ಮಾನ

ಕಾಂತರಾಜು ನೇತೃತ್ವದ ಆಯೋಗ ಸಮೀಕ್ಷೆ ಮಾಡಿ ಹತ್ತು ವರ್ಷಗಳು ಕಳೆದಿದೆ. ಹತ್ತು ವರ್ಷಗಳಾದ ನಂತರ ಹೊಸದಾಗಿ ಸಮೀಕ್ಷೆ ನಡೆಸಬೇಕೆಂದು ಸೆಕ್ಷನ್ 11(1) ರಲ್ಲಿ ಹೇಳಲಾಗಿದ್ದು ಅದರ ಪ್ರಕಾರ ತೀರ್ಮಾನ ತೆಗೆದುಕೊಂಡಿದ್ದೇವೆ ಎಂದು ಹೇಳಿದರು.

### ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ ನಡೆಸುವುದಾಗಿ ಕೇಂದ್ರ ಸರ್ಕಾರ ಹೇಳಿಲ್ಲ.

ಕೇಂದ್ರ ಸರ್ಕಾರ ನಡೆಸಲಿರುವ ಜಾತಿಗಣತಿಗಿಂತ ಈ ಸಮೀಕ್ಷೆ ಹೇಗೆ ಭಿನ್ನವಾಗಿ ಇರುತ್ತದೆ ಎನ್ನುವ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಕೇಂದ್ರವೂ ಎಲ್ಲಿಯೂ ಕೂಡಾ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ನಡೆಸುವುದಾಗಿ ಹೇಳಿಲ್ಲ. ಸಮೀಕ್ಷೆ ನಡೆಸುವಿರಾ ಎಂದು ಕೇಳಿದಾಗಲೂ ಉತ್ತರ ಕೊಡಲಿಲ್ಲ. ಹಾಗಾಗಿ ನಾವು ಮಾಡುತ್ತಿದ್ದೇವೆ. ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ವರದಿ ಅನ್ವಯ ಸಾಮಾಜಿಕ ನ್ಯಾಯ ನೀಡಲು ಬದ್ಧವಾಗಿದೆ ಎಂದು ಹೇಳಿದರು. ಸಮೀಕ್ಷೆಯನ್ನು 90 ದಿನಗಳ ಒಳಗೆ ಮಾಡಲು ಆಯೋಗವನ್ನು ಕೋರುತ್ತೇವೆ. ತೆಲಂಗಾಣದಲ್ಲಿ 70 ದಿನಗಳಲ್ಲಿ ಸಮೀಕ್ಷೆ ನಡೆಸಿದ್ದಾರೆ.

### ಹತ್ತು ವರ್ಷಗಳಲ್ಲಿ ಬದಲಾವಣೆಯಾಗುತ್ತದೆ

ಹತ್ತು ವರ್ಷಗಳಲ್ಲಿ ಜನಸಂಖ್ಯೆ ಹೆಚ್ಚಾಗಿರುತ್ತದೆ. ಆರ್ಥಿಕವಾಗಿ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಬದಲಾವಣೆಗಳೂ ಆಗಿರುತ್ತವೆ. ಆದ್ದರಿಂದ ಹತ್ತು ವರ್ಷಗಳ ನಂತರ ಸಮೀಕ್ಷೆ ನಡೆಸಬೇಕೆಂದು ಅಧಿನಿಯಮದಲ್ಲಿ ಹೇಳಿದೆ. ಅದರಂತೆ ಮಾಡುತ್ತಿದ್ದೇವೆ. ಈ ಕುರಿತು ಹೈಕಮಾಂಡ್ ಸಲಹೆ ನೀಡಿತ್ತು ಅಷ್ಟೇ. ನಾವು ಕಾನೂನಾತ್ಮಕವಾಗಿ ಕ್ರಮ ತೆಗೆದುಕೊಳ್ಳುತ್ತಿದ್ದೇವೆ ಎಂದರು.

ಈ ಹಿಂದಿನ ಸಮೀಕ್ಷೆ ಕುರಿತು ಒಕ್ಕಲಿಗ ಹಾಗೂ ವೀರಶೈವ–ಲಿಂಗಾಯಿತ ಸಮುದಾಯಗಳಿಂದ ಆಕ್ಷೇಪಣೆ ಇತ್ತು. ಈ ಸಮೀಕ್ಷೆಯಲ್ಲಿ ಆ ಸಮುದಾಯಗಳಿಗೆ ಯಾವ ರೀತಿ ಭರವಸೆ ನೀಡಿರುವಿರಿ ಎನ್ನುವ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಸೆಕ್ಷನ್ 11 ರಂತೆ ಕಾನೂನು ರೀತಿಯ ಕ್ರಮ ಕೈಗೊಳ್ಳುತ್ತಿದ್ದೇವೆ ಎಂದರು.

## ನಿತ್ಯ ಪಂಚಾಂಗ 13.06.2025 ಶುಕ್ರವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ಗ್ರೀಷ್ಮ ಋತು
ಚಾಂದ್ರಮಾನ, ಜ್ಯೇಷ್ಠ ಬಹುಳ

ಬಿದಿಗೆ, ಪೂರ್ವಾಷಾಢ ನಕ್ಷತ್ರ,
ಕಂಚಿ ವೆರದರಾಜ ರಥ,
ಮಾರೇಹಳ್ಳಿ ನೃಸಿಂಹ ರಥ,
ಕೋಡಿಮಠ ಮಹಾಮಂಗಳಾರತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಮೂವರು ಐಎಎಸ್ ಅಧಿಕಾರಿಗಳ ವರ್ಗಾವಣೆ

## ಅಕ್ರಂ ಪಾಷ ಕರಾರಸಾ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ಪದಗ್ರಹಣ



**ಬೆಂಗಳೂರು, ಜೂ.12:** ಅಕ್ರಂ ಪಾಷ, ಭಾ.ಆ.ಸೇ., ರವರು ಕರಾರಸಾ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ಗುರುವಾರ ಕಾರ್ಯ ಭಾರವನ್ನು ವಹಿಸಿ ಕೊಂಡಿರುತ್ತಾರೆ. ನಿಗಮದ ಸಮ ವರ್ತಿತ ಕಾರ್ಯಭಾರವನ್ನು ವಹಿಸಿ ಕೊಂಡಿದ್ದ ರಾಮಚಂದ್ರನ್ ಆರ್. ವ್ಯವಸ್ಥಾಪಕ ನಿರ್ದೇಶಕರು, ಬೆಂ.ಮ.ಸಾ.ಸಂಸ್ಥೆ ರವರು ಅಧಿಕಾರ ಹಸ್ತಾಂತರ ಮಾಡಿದರು. ಅಕ್ರಂ ಪಾಷ ಅವರು ಈ ಹಿಂದೆ ಕರ್ನಾಟಕ ಗೃಹ ಮಂಡಳಿ ಹಾಗೂ ಕಾರ್ಮಿಕ ಇಲಾಖೆಯ ಆಯುಕ್ತರಾಗಿ ಮತ್ತು ಹಾಸನ ಹಾಗೂ ಕೋಲಾರ ಜಿಲ್ಲೆಯ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿರುತ್ತಾರೆ. ಇದೇ ಇಲಾಖೆಯ ಕಾರ್ಯದರ್ಶಿ ಆದ ಸಂಜಯ್ ಶೆಟ್ಟಣ್ಣವರ್ ಅವರನ್ನು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾಗಿ ವರ್ಗಾವಣೆ ಮಾಡಲಾಗಿದೆ.





ರೋಹಿಣಿ ಸಿಂದೂರಿ ದಾಸರಿ ಅವರನ್ನು ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಆಗಿ ನೇಮಿಸಲಾಗಿದೆ.

## ಗಾಯಕಿ ಬಿ.ಕೆ.ಸುಮಿತ್ರಾಗೆ ಸೇವಾ ಸಿಂಧೂರ ಪ್ರಶಸ್ತಿ



**ಬೆಂಗಳೂರು, ಜೂ.12:** ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಅಕ್ಷಯಧಾಮ ಫೌಂಡೇಶನ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗಾಯಕಿ ಬಿ.ಕೆ. ಸುಮಿತ್ರ ರವರಿಗೆ ಸೇವಾ ಸಿಂಧೂರ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅಕ್ಷಯಧಾಮ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಮು. ಗೋವಿಂದರಾಜು, ನಾಗಲಕ್ಷ್ಮಿ ಚೌಧರಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ. ಸೋಮಶೇಖರ್, ನಿಡುಮಾಮಿಡಿ ಮಠದ ವೀರಭದ್ರ ಚನ್ನಮಲ್ಲ ಸ್ವಾಮೀಜಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ ಮತ್ತು ನೃತ್ಯ ಮತ್ತು ಸಂಗೀತ ಅಕಾಡೆಮಿ ಅಧ್ಯಕ್ಷೆ ಶುಭ ಧನಂಜಯ್ ಉಪಸ್ಥಿತರಿದ್ದರು.

## 11 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರಿಂದ ದೇಶದ ಅಭಿವೃದ್ಧಿ, ತಲಾ ಆದಾಯ 20 ಸಾವಿರ ರೂ. ಗೆ ಏರಿಕೆ

## 27 ಕೋಟಿ ಜನರು ಬಡತನದಿಂದ ಮುಕ್ತ: ಪ್ರತಿಪಕ್ಷ ನಾಯಕ ಆರ್.ಅಶೋಕ್

# 2 ವರ್ಷದಿಂದ ರಾಜ್ಯದಲ್ಲಿ ಅಭಿವೃದ್ಧಿ ಇಲ್ಲ, ಸಿಎಂ ಸಿದ್ದರಾಮಯ್ಯನವರದ್ದೇ ಗ್ಯಾರಂಟಿ ಇಲ್ಲ

**ಮೈಸೂರು, ಜೂ. 12:** ಕಳೆದ ಹನ್ನೊಂದು ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರಿಂದ ಸಾಲುಸಾಲು ಅಭಿವೃದ್ಧಿ ಕಾರ್ಯ ನಡೆದಿದೆ. ಆದರೆ ರಾಜ್ಯದಲ್ಲಿ ಎರಡು ವರ್ಷಗಳಲ್ಲಿ ಒಂದೇ ಒಂದು ಅಭಿವೃದ್ಧಿ ಕಾರ್ಯ ನಡೆದಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮನಮೋಹನ್ ಸಿಂಗ್ ಅವರ 10 ವರ್ಷಗಳ ಆಡಳಿತ ಹಾಗೂ ನರೇಂದ್ರ ಮೋದಿಯವರ 11 ವರ್ಷಗಳ ಆಡಳಿತಕ್ಕೆ ಹೋಲಿಸಿದರೆ, ನಾಲ್ಕು ಪಟ್ಟು ಅಧಿಕ ಅಭಿವೃದ್ಧಿಯಾಗಿದೆ. ಜಗತ್ತಿನಲ್ಲಿ ಆರ್ಥಿಕತೆಯಲ್ಲಿ ಭಾರತ 10–11 ನೇ ಸ್ಥಾನದಲ್ಲಿತ್ತು. ಈಗ ನಾಲ್ಕನೇ ಸ್ಥಾನಕ್ಕೆ ಬಂದಿದೆ. ಮುಂದೆ ಅದನ್ನು ಮೂರನೇ ಸ್ಥಾನಕ್ಕೆ ಪ್ರಧಾನಿ ಮೋದಿ ಕೊಂಡೊಯ್ಯಲಿದ್ದಾರೆ. ಇಂದಿರಾಗಾಂಧಿ ಕಾಲದಲ್ಲಿ ಗೋದಿರಜ ಬೇರೆ ದೇಶದ ಮುಂದೆ ಕೈಯೊಡ್ಡುವ ಪರಿಸ್ಥಿತಿ ಇತ್ತು. ಪ್ರಧಾನಿ ಮೋದಿ ಕಾಲದಲ್ಲಿ 100 ಕ್ಕೂ ಹೆಚ್ಚು ದೇಶಗಳಿಗೆ ಕೋವಿಡ್ ಲಸಿಕೆ ನೀಡಲಾಗಿದೆ ಎಂದರು.

ಯುಪಿಎ ಕಾಲದಲ್ಲಿ ತಲಾ ಆದಾಯ 6,000 ರೂ. ಇದ್ದರೆ, ಈಗ 20,000 ರೂ. ಆಗಿದೆ. ಆಗ ಗ್ಯಾಸ್ ಸಿಲಿಂಡರ್ಗೆ




450 ರೂ. ಸಬ್ಸಿಡಿ ಇದ್ದರೆ, ಈಗ 500 ರೂ. ಇದೆ. ಸಬ್ಸಿಡಿ ರಹಿತ ದರ ಆಗ 1,250 ರೂ. ಇದ್ದರೆ, ಈಗ 850 ರೂ. ಇದೆ. ಯುಪಿಎ ಹತ್ತು ವರ್ಷದಲ್ಲಿ 9 ಸಾವಿರಕ್ಕೂ ಅಧಿಕ ಉಗ್ರ ದಾಳಿಯಾಗಿತ್ತು. ಈಗ ಪ್ರತಿ ದಾಳಿ ನಡೆಯುತ್ತಿದೆ. ಮುಂಬೈಯಲ್ಲಿ ದಾಳಿಯಾದಾಗ ಅದಕ್ಕೆ ಪ್ರತ್ಯುತ್ತರ ನೀಡಲೇ ಇಲ್ಲ. ಪಹಲ್ಗಾಮ್‌ನಲ್ಲಿ ದಾಳಿಯಾದಾಗ ಕೂಡಲೇ ಉಗ್ರರ ತಾಣಗಳನ್ನು ನಮ್ಮ ಯೋಧರು ಧ್ವಂಸ ಮಾಡಿದ್ದಾರೆ ಎಂದರು.

ಹಿಂದೆ 387 ಮೆಡಿಕಲ್ ಕಾಲೇಜುಗಳಿದ್ದು, ಈಗ 704 ಮೆಡಿಕಲ್ ಕಾಲೇಜುಗಳಿವೆ. ಆಗ 74 ವಿಮಾನ ನಿಲ್ದಾಣಗಳಿದ್ದು, ಈಗ 149 ಆಗಿದೆ. ಆಗ ರಾಷ್ಟ್ರೀಯ ಹೆದ್ದಾರಿ 91,000 ಕಿ.ಮೀ. ಇದ್ದಿದ್ದು, ಈಗ 1.45 ಲಕ್ಷ ಕಿ.ಮೀ. ಆಗಿದೆ. 7 ಏಮ್ಸ್ ಇದ್ದಿದ್ದು, 22 ಆಗಿದೆ. 82,000 ಮೆಡಿಕಲ್ ಸೀಟುಗಳಿದ್ದಿದ್ದು, ಈಗ 1.50 ಲಕ್ಷ ಆಗಿದೆ. ಆಗ ದೇಶದ ಬಜೆಟ್ 17 ಲಕ್ಷ ಕೋಟಿ ರೂ. ಇದ್ದರೆ, ಈಗ 50.65 ಲಕ್ಷ ಕೋಟಿ ರೂ. ಆಗಿದೆ. ಎಲ್ಇಡಿ ಬಲ್ಬ್‌ಗೆ ಆಗ 450 ರೂ. ಇದ್ದಿದ್ದು, ಈಗ 70 ರೂ. ಗೆ ಸಿಗುತ್ತಿದೆ ಎಂದರು.

ಮೊದಲು ಬೇರೆ ದೇಶದಲ್ಲಿ ಬುಲೆಟ್ ರೈಲು ನೋಡುತ್ತಿದ್ದೆವು. ಈಗ ನಮ್ಮ ದೇಶದಲ್ಲೇ 60% ಕಾಮಗಾರಿ ಮುಗಿದು ಮುಂದೆ ಬುಲೆಟ್ ರೈಲು ಬರಲಿದೆ. ಕೃಷಿಗೆ ಮೊದಲು 30,000 ಕೋಟಿ ರೂ.ಸಬ್ಸಿಡಿ ಸಿಗುತ್ತಿದ್ದರೆ, ಈಗ 1.27 ಲಕ್ಷ ಕೋಟಿ ರೂ. ಸಬ್ಸಿಡಿ ನೀಡಲಾಗುತ್ತಿದೆ. ಆಗ 14 ಕೋಟಿ ಅಡುಗೆ ಅನಿಲ ಸಂಪರ್ಕವಿದ್ದರೆ, ಈಗ 31 ಕೋಟಿ ಆಗಿದೆ. ಹನ್ನೊಂದು ವರ್ಷಗಳಲ್ಲಿ 4 ಕೋಟಿ ಮನೆ, 11 ಕೋಟಿ ಶೌಚಾಲಯ ನಿರ್ಮಿಸಲಾಗಿದೆ. 27 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ತಿಳಿಸಿದರು. ಕಾಂಗ್ರೆಸ್‌ನವರು ಎಂದಿಗೂ ನಕ್ಸಲ್ ಪರವಾಗಿದ್ದರು. ಈಗ ನಕ್ಸಲ್ ಚಳವಳಿಯನ್ನು ಸಂಪೂರ್ಣವಾಗಿ ಮಟ್ಟಹಾಕುವ ಗುರಿ ಇರಿಸಿಕೊಳ್ಳಲಾಗಿದೆ. ಈಶಾನ್ಯ ರಾಜ್ಯಗಳಲ್ಲೂ ದೊಡ್ಡ ಅಭಿವೃದ್ಧಿ ಕೆಲಸಗಳಾಗಿವೆ. ಜಮ್ಮು–ಕಾಶ್ಮೀರವನ್ನು ಬಿಟ್ಟು ಬಿಡೋಣ ಎಂಬ ಮನಸ್ಥಿತಿ ಇತ್ತು. ವಿಶೇಷ

### ಡಿಕೆಶಿಯದ್ದೇ ಪ್ರತ್ಯೇಕ ಕೋಟೆ: ಬಿಜೆಪಿ ವ್ಯಂಗ್ಯ

ಮುಖ್ಯಮಂತ್ರಿ ಸಿದ್ದರಾಮಯ್ಯನವರದ್ದೇ ಗ್ಯಾರಂಟಿ ಇಲ್ಲ. ಅವರು ಔಟ್‌ಗೋಯಿಂಗ್ ಸಿಎಂ. ಇವರ ಸರ್ಕಾರ ಎರಡು ವರ್ಷದಲ್ಲಿ ಏನೂ ಸಾಧನೆ ಮಾಡಿಲ್ಲ. ಡಿ.ಕೆ.ಶಿವಕುಮಾರ್ ಪ್ರತ್ಯೇಕ ಕೋಟೆ ಕಟ್ಟಿಕೊಂಡಿದ್ದಾರೆ. ಎಂ.ಬಿ.ಪಾಟೀಲ್, ಸತೀಶ್ ಜಾರಕಿಹೊಳಿ ಪ್ರತ್ಯೇಕವಾಗಿದ್ದಾರೆ. ಎರಡು ವರ್ಷದಲ್ಲಿ ಒಂದೇ ಒಂದು ನೀರಾವರಿ ಯೋಜನೆ ಜಾರಿಯಾಗಿಲ್ಲ ಎಂದು ಅಶೋಕ್ ದೂರಿದರು. ಕಾಂಗ್ರೆಸ್‌ನಲ್ಲಿ ಎಲ್ಲರೂ ಸಿಎಂ ಆಗುತ್ತೇನೆಂದು ಹೇಳುತ್ತಿದ್ದಾರೆ. ಪರಮೇಶ್ವರ್, ಡಿ.ಕೆ.ಶಿವಕುಮಾರ್ ಸಿಎಂ ಆಗಲು ಕಾಯುತ್ತಿದ್ದಾರೆ. ಗ್ಯಾರಂಟಿಗಳಿಂದಾಗಿ ಯಾವುದೇ ಕೆಲಸ ನಡೆಯುತ್ತಿಲ್ಲ. ಸರ್ಕಾರವೇ ಬಿದ್ದು ತೊಲಗಲಿ ಎಂದು ಜನರು ಬಯಸುತ್ತಿದ್ದಾರೆ. ಸಿಎಂ ಕುರ್ಚಿಯನ್ನು ನಾಲ್ಕು ಜನರು ಎಳೆಯುತ್ತಿದ್ದಾರೆ. ಮುಡಾ ಹಗರಣ, ವಾಲ್ಮೀಕಿ ನಿಗಮದ ಹಗರಣವನ್ನು ಬಿಜೆಪಿ ಹೊರಗೆ ಎಳೆದು ತಂದಿದೆ ಎಂದರು.

ಕಾಲ್ತುಳಿತ ದುರಂತಕ್ಕೆ ಸರ್ಕಾರವೇ ಕಾರಣವಾಗಿದೆ. ಆದರೆ ಪೊಲೀಸರ ಮೇಲೆ ತಪ್ಪು ಹೊರಿಸಲಾಗುತ್ತಿದೆ. ರಾಜ್ಯಪಾಲರನ್ನು ಮುಖ್ಯಮಂತ್ರಿಗಳೇ ಆಹ್ವಾನಿಸಿದ್ದಾರೆ ಎಂದು ಒಪ್ಪಿಕೊಂಡಿದ್ದಾರೆ. ಮುಖ್ಯ ಕಾರ್ಯದರ್ಶಿಯೇ ಕರೆ ಮಾಡಿ ರಾಜ್ಯಪಾಲರನ್ನು ಆಹ್ವಾನಿಸಿದ್ದಾರೆ. ಆದರೆ ಮೊದಲು ಆ ವಿಷಯವನ್ನು ಹೇಳಿರಲಿಲ್ಲ. ಇವರ ತಪ್ಪು ಮುಚ್ಚಿಹಾಕಲು ಗೋವಿಂದರಾಜು ಅವರ ವಿರುದ್ಧ ಕ್ರಮ ವಹಿಸಲಾಗಿದೆ ಎಂದರು.

# ಬಾಲ ಕಾರ್ಮಿಕ ಪದ್ಧತಿ ಬಗೆಗಿನ ಅರಿವು ಮನೆಗಳಿಂದಲೇ ಮೂಡಲಿ

### ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕಾರ್ಮಿಕ ಇಲಾಖೆಯ ದಿಟ್ಟ ಹೆಜ್ಜೆ

■ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡಲು ಕಳೆದ 3 ವರ್ಷಗಳಲ್ಲಿ 1 ಲಕ್ಷಕ್ಕೂ ಹೆಚ್ಚು ಕಡೆ ದಾಳಿ ನಡೆಸಲಾಗಿದ್ದು, ಬಾಲ ದುಡಿಮೆಯನ್ನು ತೊಡದುಹಾಕಲು ನಿರಂತರ ಪ್ರಯತ್ನ ನಡೆಸಲಾಗಿದೆ ಎಂದು ಕಾರ್ಮಿಕ ಸಚಿವ ಎಸ್. ಸಂತೋಷ್ ಲಾಡ್ ಹೇಳಿದ್ದಾರೆ.

**ಬೆಂಗಳೂರು, ಜೂ. 12:** ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತ ಅರಿವು ಮನೆಗಳಿಂದಲೇ ಆರಂಭವಾಗಬೇಕು. ಸಾರ್ವಜನಿಕರು ಈ ಬಗ್ಗೆ ಜಾಗೃತರಾಗಬೇಕು ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಹೇಳಿದರು. ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಕಾರ್ಮಿಕ ಇಲಾಖೆ ವತಿಯಿಂದ ಬೆಂಗಳೂರಿನ ಎಂ ಜಿ ರಸ್ತೆಯ ಮಹಾತ್ಮ ಗಾಂಧಿ ಉದ್ಯಾನದಿಂದ ಕೆ ಆರ್ ವೃತ್ತದವರೆಗೆ ಹಮ್ಮಿಕೊಂಡಿದ್ದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬಾಲ ಕಾರ್ಮಿಕರಾಗುವುದನ್ನು ತಡೆಯಲು ಕಾರ್ಮಿಕ ಇಲಾಖೆ ಹಲವು ಕ್ರಮ ಕೈಗೊಂಡಿದೆ. ಸರ್ಕಾರದೊಂದಿಗೆ ಜನರೂ ಕೈ ಜೋಡಿಸಿದರೆ ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬಹುದು ಎಂದರು. ಮಕ್ಕಳನ್ನು ದುಡಿಸಿಕೊಳ್ಳುವುದು ಅಪರಾಧ. ಯಾರೇ ಇದನ್ನು ಉಲ್ಲಂಘಿಸಿದರೆ ಆರು ತಿಂಗಳಿಂದ ಎರಡು ವರ್ಷದವರೆಗೆ ಶಿಕ್ಷೆ, ದಂಡ ವಿಧಿಸಲಾಗುತ್ತದೆ. ಪೋಷಕರಿಗೂ ಶಿಕ್ಷೆ ಆಗಲಿದೆ. ಇದರ ಮೂಲಕ ಭಯ ಮೂಡಿಸುವುದು ಇಲಾಖೆಯ ಉದ್ದೇಶವಲ್ಲ. ಬಾಲ ಕಾರ್ಮಿಕ ಪದ್ಧತಿ ಬಗ್ಗೆ ಸಾಮಾಜಿಕ ವ್ಯವಸ್ಥೆಯಡಿ ಅರಿವು ಮೂಡಿಸಬೇಕು ಎಂದು ವಿವರಿಸಿದರು.

ರಾಜ್ಯದ 22 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ, ಜಿಲ್ಲಾಧಿಕಾರಿ, ಎಸ್ ಪಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾ ಧಿಕಾರಿಗಳ ಜೊತೆ ಸಭೆ ಮಾಡಿ ಮಕ್ಕಳು ಕಾರ್ಮಿಕರಾಗುವುದನ್ನು ತಡೆಯಲು ಕ್ರಮ ಕೈಗೊಂಡಿದ್ದೇವೆ. ಡಿಸಿ, ಸಿಇಒ, ಎಸ್ಪಿಗಳು ಮುತುವರ್ಜಿ ವಹಿಸಿದರೆ



ನಿರ್ಮೂಲನೆ ಸುಲಭವಾಗಲಿದೆ. ವರ್ಷಕ್ಕೆ ಒಂದು ಬಾರಿ ದಿನಾಚರಣೆ ಮಾಡಿದರೆ ಸಾಲದು. ಎರಡು ತಿಂಗಳಿಗೆ ಒಂದು ಬಾರಿ ಈ ಸಂಬಂಧ ಅರಿವು ಮೂಡಿಸುವ ಕೆಲಸ ಆಗಬೇಕು ಎಂದು ಸೂಚನೆ ನೀಡಿದರು.

ಹೈವೆ ಬದಿಗಳಲ್ಲಿನ ಡಾಬಾ, ಹೋಟೆಲ್, ಗ್ಯಾರೇಜ್, ಸಣ್ಣ ಸಣ್ಣ ಮೆಕ್ಯಾನಿಕ್ ಶಾಪ್‌ಗಳಲ್ಲಿ ಮಕ್ಕಳು ಕೆಲಸ ಮಾಡುತ್ತಾರೆ. ಅವರು ಕೆಲಸ ಬಿಟ್ಟು ಶಾಲೆಗಳಿಗೆ ಹೋಗುವಂತಾಗಬೇಕು. ಬಾಲ ಕಾರ್ಮಿಕರನ್ನು ದುಡಿಮೆಗೆ ನೇಮಿಸಿಕೊಂಡಿದ್ದು ಯಾರದೇ ಗಮನಕ್ಕೆ ಬಂದರೆ ಕೂಡಲೇ ಸಹಾಯವಾಣಿ 1098 ಗೆ ಕರೆ ಮಾಡಿ ಮಾಹಿತಿ ನೀಡಿ. ಸರ್ಕಾರದೊಂದಿಗೆ ಕೈ ಜೋಡಿಸಿ ನಾವು ನೀವೆಲ್ಲ ಸೇರಿ ಈ ಪದ್ಧತಿಯನ್ನು ತೊಲಗಿಸೋಣ ಎಂದು ಕರೆ ನೀಡಿದರು.

ಸರ್ಕಾರೇತರ ಸಂಸ್ಥೆಗಳನ್ನು ಸೇರಿಸಿಕೊಂಡು ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವ



ಚಟುವಟಿಕೆ ಹೆಚ್ಚಿಸಬೇಕು. ಮಕ್ಕಳಿಗೆ ಕಲಿಕೆ ಮೊದಲಾಗಬೇಕು. ಕೆಲಸ ಅಲ್ಲ. ಆಟವಾಡುವ ವಯಸ್ಸಲ್ಲಿ ಮಕ್ಕಳು ಕೆಲಸ ಮಾಡಬಾರದು. ಈ ನಿಟ್ಟಿನಲ್ಲಿ ಎಲ್ಲ ಸಾರ್ವಜನಿಕರು ಸೇರಿ ಒಂದಾಗೋಣ. ನಾವು ನೀವು ಸೇರಿ ಒಳ್ಳೆ ಕೆಲಸ ಮಾಡೋಣ ಎಂದರು. ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಖ್ಯಾತ ನಟಿ ಅದಿತಿ ಪ್ರಭುದೇವ ಅವರು ಮಾತನಾಡಿ," ಬಾಲ ಕಾರ್ಮಿಕರಾಗದಂತೆ ತಡೆಯುವುದು ನಮ್ಮೆಲ್ಲರ ಜವಾಬ್ದಾರಿ. ಕೇವಲ ಸರ್ಕಾರದ ಜವಾಬ್ದಾರಿ ಅಲ್ಲ. ಬಡತನಕ್ಕೂ ಬಾಲಕಾರ್ಮಿಕ ಪದ್ಧತಿಗೂ ನಂಟಿದೆ ಎನ್ನಲಾಗುತ್ತದೆ. ಅದು ಹೌದು. ಆದರೆ ಅದನ್ನು ಹೋಗಲಾಡಿಸಬಹುದು ಎಂದರು.

ಮಕ್ಕಳನ್ನು ಓದಿಸಲಾಗದ ಪರಿಸ್ಥಿತಿಯಲ್ಲಿ ಎಷ್ಟೋ ಪೋಷಕರು ಇದ್ದಾರೆ. ಅಂತಹವರಿಗೊಂದು ನಾವು ಸಣ್ಣ ಸಹಾಯ ಮಾಡಿದರೆ ಎಷ್ಟೋ ಮಕ್ಕಳು ಬಾಲ ಕಾರ್ಮಿಕರಾಗುವುದು ತಪ್ಪಲಿದೆ. ಒಳ್ಳೆಯ ಶಿಕ್ಷಣ ಸಿಕ್ಕರೆ ಮಕ್ಕಳು ಉತ್ತಮ ಪ್ರಜೆ ಆಗುತ್ತಾರೆ. ನಮ್ಮ ಸುತ್ತಮುತ್ತ ಬಾಲ ಕಾರ್ಮಿಕರು ಕಂಡು ಬಂದರೆ ನಮ್ಮ ಜವಾಬ್ದಾರಿ ನಿರ್ವಹಿಸೋಣ ಎಂದರು. ಇದೇ ವೇಳೆ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಪ್ರಮಾಣ ಸ್ವೀಕರಿಸಲಾಯಿತು.

ಜಾಥಾದಲ್ಲಿ ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಿ ಜಗದೀಶ, ಕಾರ್ಮಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಡಾ. ಎನ್ ವಿ ಪ್ರಸಾದ್, ಕಾರ್ಮಿಕ ಆಯುಕ್ತರಾದ ಡಾ. ಎಚ್ ಎನ್ ಗೋಪಾಲಕೃಷ್ಣ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾ ಧಿಕಾರಿಗಳು ಹಾಗೂ ಕಾರ್ಯದರ್ಶಿಗಳಾದ ಭಾರತಿ ಡಿ, ಜಂಟಿ ಕಾರ್ಮಿಕ ಆಯುಕ್ತರಾದ ರವಿಕುಮಾರ್, ಕಾರ್ಮಿಕ ಇಲಾಖೆಯ ಇತರ ಅಧಿಕಾರಿಗಳು, ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಶಾಲಾ ಮಕ್ಕಳು ಭಾಗವಹಿಸಿದ್ದರು.

# ಬೆಂಗಳೂರಿನಲ್ಲಿ ಅಂತರರಾಷ್ಟ್ರೀಯ ಆಹಾರ ತಯಾರಿಕ ಸಾಮಗ್ರಿಗಳ ಬೃಹತ್ ಮೇಳಕ್ಕೆ ಚಾಲನೆ

■ ಕುಕ್ಕಟೋದ್ಯಮ, ಪಶು ಸಂಗೋಪನೆ, ಅಡುಗೆ ತಾಯಾರಿಕೆ ಪರಿಕರಗಳು, ಆಹಾರೋದ್ಯಮದ ಎಲ್ಲಾ ಉಪಕರಣಗಳ ಅನಾವರಣ

**ಬೆಂಗಳೂರು, ಜೂ. 12:** ನಗರದ ತುಮಕೂರು ರಸ್ತೆಯ ಬಿಐಇಸಿಯಲ್ಲಿ ಮೂರು ದಿನಗಳ ಅಂತಾರಾಷ್ಟ್ರೀಯ ಆಹಾರ ತಯಾರಿಕಾ ಸಾಮಗ್ರಿಗಳ ಬೃಹತ್ ಮೇಳ ಆರಂಭವಾಗಿದೆ. ಸ್ವಾವಲಂಬಿ ಭಾರತ ನಿರ್ಮಾಣ, ನವನವೀನ ತಂತ್ರಜ್ಞಾನ ಮೂಲಕ ಕೋಳಿ, ಹಸು ಸಾಕಣೆ, ಸಸ್ಯಹಾರ, ಮಾಂಸಾಹಾರ ಆಹಾರ ತಯಾರಿಕೆಗ ದೊಡ್ಡ ಉಪಕರಣಗಳನ್ನು ಪ್ರದರ್ಶಿಸ ಲಾಗುತ್ತಿದೆ. ಬೃಹತ್ ಮಾರಾಟ ಮೇಳದ ಮೂಲಕ ಉದ್ಯೋಗ ದೊರಕಿಸಿಕೊಡಲು ಆದ್ಯತೆ ನೀಡಲಾಗಿದೆ.

ಬೆಂಗಳೂರು ಹೋಟೆಲು ಸಂಘದ ಅಧ್ಯಕ್ಷ ಪಿ.ಸಿ.ರಾವ್, ಅಖಿಲ ಭಾರತ ವ್ಯಾಪಾರ ಮಂಡಲದ ರಾಜ್ಯಾಧ್ಯಕ್ಷ ಕೆ.ವಿ.ವೆಂಕಟೇಶ್, ಕಾಫಿ ಮಂಡಳಿ ಸದಸ್ಯ ಸದಸ್ಯ ವಿಷ್ಣು, ಮೀಡಿಯಾ ಡೇ ಮಾರ್ಕೆಟಿಂಗ್ ಸಂಸ್ಥೆಯ ಮುಖ್ಯಸ್ಥ ಮೊಹಮ್ಮದ್ ಮುದಸ್ಸರ್, ಸಂಯೋಜಕ ರಾಮ್ ಸೋನಲ್ ಕಕ್ಕರ್ ಮೇಳಕ್ಕೆ ಚಾಲನೆ ನೀಡಿದರು. ಪಿ.ಸಿ.ರಾವ್




ಮಾತನಾಡಿ, ಅಡುಗೆಮನೆ ಪರಿಕರಗಳು ಒಂದೇ ವೇದಿಕೆಯಲ್ಲಿ ಪ್ರದರ್ಶನಗೊಂಡಿದ್ದು, ಆಹಾರೋದ್ಯಮ ನಡೆಸುವವರಿಗೆ ಉಜ್ವಲ ಅವಕಾಶ ದೊರೆಕಿದೆ.

ಹೋಟೆಲ್ ಮತ್ತು ಬೇಕರಿ ವಲಯಕ್ಕೆ ಈ ತಂತ್ರಜ್ಞಾನ ಪೂರಕವಾಗಿದೆ. ಮಾಂಸಾಹಾರ, ಶಾಖಾಹಾರ ತಿಂಡಿ ತಿನಿಸುಗಳನ್ನು ಸುಲಭವಾಗಿ ತಯಾರಿಸಲು ಅತ್ಯಾಧುನಿಕ ತಂತ್ರಜ್ಞಾನ ಪೂರಕವಾಗಿದೆ. ವಿದೇಶದಿಂದ ತಂತ್ರಜ್ಞಾನ, ಸಾಧನ ಸಲಕರಣೆ ತರಬೇಕಾಗಿತ್ತು ಅದರೆ ವಿದೇಶ ಕಂಪನಿಗಳಿಗೆ ಪೈಪೋಟಿ ನೀಡುವಂತಹ ಕಂಪನಿಗಳು ನಮ್ಮಲ್ಲಿ ಇದೆ. ಸ್ವಯಂ ಉದ್ಯೋಗ ಮತ್ತು ನಿರುದ್ಯೋಗ ನಿವಾರಣೆಗಾಗಿ ಈ ಮೇಳ ಬಹಳ ಪ್ರಯೋಜನಕಾರಿಯಾಗಿದೆ ಎಂದರು.

ಈ ಬೃಹತ್ ಮೇಳದಲ್ಲಿ 140ಕ್ಕೂ ಕಂಪನಿಗಳ ಅಧಿಕ ಮಳಿಗೆಗಳನ್ನು ತೆರೆಯಲಾಗಿದೆ. ಈ ಪೈಕಿ 30ಕ್ಕೂ ಅಧಿಕ ಟೀ, ಕಾಫಿ ತಾಯಾರಿಸುವ ಸಂಭಂದಿಸಿದಂತೆ ಮಳಿಗೆಗಳು ಗಮನ ಸೆಳೆಯುತ್ತಿವೆ. 60ರಲ್ಲಿ ಸಸ್ಯಹಾರ, ಮಾಂಸಾಹಾರ ತಯಾರಿಕೆ ಮಳಿಗೆಗಳು ಮತ್ತು ಕೋಳಿ ಸಾಕಣಿಕೆ ಮತ್ತು ಹಸು ಸಾಕಣಿಕೆ, ಐಸ್ ಕ್ರೀಂ ಸಿದ್ಧಪಡಿಸುವ 50ಕ್ಕೂ ಹೆಚ್ಚು ಮಳಿಗೆಗಳನ್ನು ಹಾಕಲಾಗಿದೆ. ಮನುಷ್ಯ ಮಾಡುವ ಕೆಲಸಗಳನ್ನು ಬೃಹತ್ ಯಂತ್ರೋಪಕರಣ ಗಳು ಸುಲಭವಾಗಿ ಮಾಡುತ್ತಿದ್ದು, ಉದ್ಯಮ ಸ್ಥಾಪಿಸಲು ಬೇಕಾದ ಎಲ್ಲ ಮಾಹಿತಿ,



ಸಲಕರಣೆ ಅತ್ಯಂತ ಕಡಿಮೆ ಬೆಲೆಯಲ್ಲಿ ಸಿಗಲಿದೆ ಉದ್ಯಮ ಕ್ಷೇತ್ರದಲ್ಲಿ ಯಶಸ್ವಿಯಾಗಲು ಈ ಮೇಳ ಸಹಕಾರಿಯಾಗಿದೆ.

# ಜುಲೈನಲ್ಲಿ ದೇಶದ ಮೊದಲ ಕ್ವಾಂಟಮ್ ಸಮ್ಮೇಳನ ಸೂಕ್ತ ಸಿದ್ಧತೆಗೆ ಸಚಿವ ಬೋಸರಾಜು ಸೂಚನೆ

ಬೆಂಗಳೂರು ಜೂನ್ 12: ಕರ್ನಾಟಕ ರಾಜ್ಯವನ್ನು ಕ್ವಾಂಟಮ್ ತಂತ್ರಜ್ಞಾನ ಕ್ಷೇತ್ರದ ಜಾಗತಿಕ ಕೇಂದ್ರವನ್ನಾಗಿ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಜುಲೈ ತಿಂಗಳ ಕೊನೆಯಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುವ ಕ್ವಾಂಟಮ್ ಸಮ್ಮೇಳನಕ್ಕೆ ಅಗತ್ಯ ತಯಾರಿ ಮಾಡಿಕೊಳ್ಳುವಂತೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿ ಸಚಿವರಾದ ಎನ್ ಎಸ್ ಬೋಸರಾಜು ಅಧಿಕಾರಿಗಳಿಗೆ ಸೂಚನೆ ನೀಡಿದರು. ಇಂದು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮ್ಮೇಳನದ ತಯಾರಿಯ ಬಗ್ಗೆ ವಿಸ್ತ್ರುತ ಮಾಹಿತಿ ಪಡೆದುಕೊಂಡರು.

ಕ್ವಾಂಟಮ್ ತಂತ್ರಜ್ಞಾನದಲ್ಲಿನ ಹೊಸ ಆವಿಷ್ಕಾರಗಳು ನಮ್ಮ ದೈನಂದಿನ ಜೀವನದಲ್ಲಿ ಗಮನಾರ್ಹ ಸುಧಾರಣೆಗಳನ್ನು ತಂದಿವೆ. ಕ್ವಾಂಟಮ್ ತಂತ್ರಜ್ಞಾನವು ಅನೇಕ ಕ್ಷೇತ್ರಗಳಲ್ಲಿ ಗಮನಾರ್ಹ ಬದಲಾವಣೆ ತರುವ ಸಾಮರ್ಥ್ಯವನ್ನು ಹೊಂದಿದೆ. ಕ್ವಾಂಟಮ್ ತಂತ್ರಜ್ಞಾನವು, ತಂತ್ರಜ್ಞಾನದಲ್ಲಿ ಸಾಧ್ಯವಿರುವ ಹೊಸ ಸಾಧ್ಯತೆಗಳನ್ನ ತಲುಪಲು ಸಹಾಯಕವಾಗಲಿದೆ, ಹೊಸ ಆವಿಷ್ಕಾರ ಹಾಗೂ ಅಭಿವೃದ್ಧಿಗೂ ಕಾರಣವಾಗಲಿದೆ. ಈ ಪ್ರಮುಖ ಕ್ಷೇತ್ರದಲ್ಲಿ ನಮ್ಮ ನಾವೀನ್ಯತೆಯನ್ನು ಹೆಚ್ಚಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ಈಗಾಗಲೇ ಐಐಎಸ್‌ಸಿ ಬೆಂಗಳೂರಿನಲ್ಲಿ ಸ್ಥಾಪಿಸಲಾಗಿರುವ ಕ್ವಾಂಟಮ್ ರಿಸರ್ಚ್ ಪಾರ್ಕ್‌ ಗೆ ಅಗತ್ಯ ಬೆಂಬಲ ನೀಡುತ್ತಿದೆ. ಕ್ವಾಂಟಮ್ ತಂತ್ರಜ್ಞಾನದ ಮೂಲಕ ಪ್ರಸ್ತುತ ಪಡಿಸಲಾಗಿರುವ ಅಗಾಧ ಅವಕಾಶಗಳನ್ನ ಉತ್ತಮವಾಗಿ ಬಳಸಿಕೊಳ್ಳುವ




ನಿಟ್ಟಿನಲ್ಲಿ ನಾವು ಕಾರ್ಯಪ್ರವೃತ್ತರಾಗಬೇಕಾಗಿದೆ. ನಮ್ಮ ಜೀವನವನ್ನು ಸುಧಾರಿಸಲು, ಕೈಗಾರಿಕೆಗಳನ್ನು ಮತ್ತಷ್ಟು ಅಭಿವೃದ್ಧಿಗೊಳಿಸಲು ಕ್ವಾಂಟಮ್ ತಂತ್ರಜ್ಞಾನದ ಸಾಮರ್ಥ್ಯವನ್ನು ಆವಿಷ್ಕರಿಸಲು, ಅಂತಿಮವಾಗಿ ಸಮಾಜಕ್ಕೆ ಅದರ ಪ್ರಯೋಜನವನ್ನು ನೀಡಲು ನಾವು ಕ್ವಾಂಟಮ್ ಸಮ್ಮೇಳನವನ್ನು ಆಯೋಜಿಸುತ್ತಿದ್ದೇವೆ. ದೇಶದ ಮೊದಲ ಕ್ವಾಂಟಮ್ ಸಮ್ಮೇಳನ ಇದಾಗಿದ್ದು ಉತ್ತಮ ರೀತಿಯಲ್ಲಿ ತಯಾರಿ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸಚಿವರು ತಿಳಿಸಿದರು.

2025 ಜುಲೈ ತಿಂಗಳಲ್ಲಿ ಎರಡು ದಿನಗಳ ಕಾಲ ಕ್ವಾಂಟಮ್ ಸಮಾವೇಶ ಆಯೋಜಿಸಲು ತೀರ್ಮಾನಿಸಲಾಗಿದೆ. ಕ್ವಾಂಟಮ್ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿರುವ ದೇಶಗಳೊಂದಿಗೆ ಸಂಪರ್ಕದಲ್ಲಿದ್ದು, ಜ್ಞಾನ ವಿನಿಮಯಕ್ಕೆ ಸಭೆಗೆ ಸಮಯಕ್ಕೆ ಮನವಿ ಮಾಡಲಾಗಿದೆ. ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನಿರ್ದೇಶನದಂತೆ ನಮ್ಮ ರಾಜ್ಯ ಕ್ವಾಂಟಮ್ ಕ್ಷೇತ್ರದಲ್ಲಿ ಹೊಸ ಸಾಧನೆಗೆ ಉತ್ತೇಜಿಸುವುದು ಈ ಸಮಾವೇಶದ ಉದ್ದೇಶವಾಗಿದೆ ಎಂದರು.

ಸಭೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀಮತಿ ಏಕರೂಪ್ ಕೌರ್, ಕೆಸ್ಟೆಪ್ಸ್ ವ್ಯವಸ್ಥಾಪಕ ನಿರ್ದೇಶಕರಾದ ಸದಾಶಿವ ಪ್ರಭು ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ನಮಗೆ ರಾಜಕೀಯ ಬಣ್ಣ ಬೇಡ. ಸಾಮಾಜಿಕ ನ್ಯಾಯ ಬೇಕು: ಡಿಸಿಎಂ ಡಿ.ಕೆ.ಶಿವಕುಮಾರ್



**ಬೆಂಗಳೂರು, ಜೂ.12:** ನಮಗೆ ರಾಜಕೀಯ ಬಣ್ಣ ಬೇಡ. ಸಾಮಾಜಿಕ ನ್ಯಾಯ ಬೇಕು. ಈ ಕಾರಣಕ್ಕೆ ನಾವು ಮತ್ತೊಮ್ಮೆ ಜಾತಿ ಜನಗಣತಿ ಮಾಡಲು ತೀರ್ಮಾನ ಮಾಡಿದ್ದೇವೆ. ಈ ಹಿಂದಿನ ವರದಿ ಬಗ್ಗೆ ಟೀಕೆ ಮಾಡಿದ್ದ ವಿರೋಧ ಪಕ್ಷದವರು ಈಗ ಉಲ್ಟಾ ಮಾತಾಡುತ್ತಿದ್ದಾರೆ. ಅದರ ಬದಲು ಹಳೆಯದನ್ನೇ ಒಪ್ಪಿಕೊಳ್ಳುವಂತೆ ಆಗ್ರಹಿಸಲಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಜಾತಿಗಣತಿ ವಿಚಾರವಾಗಿ ಮರುಸಮೀಕ್ಷೆಗೆ ಮುಂದಾಗಿರುವ ಸರ್ಕಾರದ ಕ್ರಮವನ್ನು ವಿರೋಧ ಪಕ್ಷಗಳು ಟೀಕಿಸುತ್ತಿರುವ ಬಗ್ಗೆ ಕೇಳಿದಾಗ, ಕುಮಾರಸ್ವಾಮಿ, ವಿಜಯೇಂದ್ರ, ಅಶೋಕ್ ಅವರು ಪುನಃ ಮಾಧ್ಯಮಗೋಷ್ಠಿ ಮಾಡಿ ಹಳೆಯ ವರದಿಯನ್ನೇ ಸ್ವೀಕರಿಸಿ ಎಂದು ಈಗ ಹೇಳಲಿ. ವಿರೋಧ ಪಕ್ಷದವರು ಈಗ ಏನೇನೋ ಮಾತನಾಡುತ್ತಿದ್ದಾರೆ. ಇದಕ್ಕೆ ನಿಧಾನಕ್ಕೆ ಉತ್ತರ ನೀಡೋಣ. ಯಾರು, ಯಾರು ಏನೇನು ಹೇಳುತ್ತಿದ್ದರು, ಅಶೋಕ್ ಏನು ಹೇಳಿದ್ದಾರೆ ಎಂಬುದನ್ನು ಮಾಧ್ಯಮಗಳು ಮತ್ತೆ ಪ್ರಸಾರ ಮಾಡಿಲಿ. ವಿರೋಧ ಪಕ್ಷದವರು ಹಿಂದೆ ಒಂದು, ಮುಂದೆ ಒಂದು ಮಾತನಾಡಿ ರಾಜಕೀಯವಾಗಿ ಬಣ್ಣ ಕಟ್ಟುತ್ತಿದ್ದಾರೆ ಎಂದರು.


ಯಾರು ಏನು ಬೇಕಾದರೂ ಹೇಳಲಿ. ಜನರು, ಶಾಸಕರುಗಳ ಭಾವನೆ, ಅಭಿಪ್ರಾಯ ಅರಿತು ಕಾನೂನಾತ್ಮಕವಾಗಿ ಜಾತಿ ಗಣತಿ ಮರುಸಮೀಕ್ಷೆಗೆ ಒಪ್ಪಿಗೆ ಕೊಟ್ಟಿದ್ದೇವೆ. ಸೆಕ್ಷನ್ 11 ರ ಪ್ರಕಾರ ಜಾತಿ ಗಣತಿಗೆ 10 ವರ್ಷವಾಗಿದೆ ಎಂದು ಬೇಕಾದಷ್ಟು ಜನ ನ್ಯಾಯಾಲಯಕ್ಕೆ ಹೋಗಿ ತಡೆಯಾಜ್ಞೆ ತರಬಹುದು. 11.04.2015 ಅಲ್ಲಿ ಜಾತಿಗಣತಿ ಪ್ರಾರಂಭವಾಗಿ 30.05.2015 ರಲ್ಲಿ ಮುಗಿದಿತ್ತು. ಈ ವರ್ಷ ಫೆ.29 ರಂದು ಜಾತಿಗಣತಿ ವರದಿ ಸಲ್ಲಿಕೆಯಾಗಿತ್ತು. ನಂತರ ಕ್ಯಾಬಿನೆಟ್‌ನಲ್ಲಿ 5-6 ಬಾರಿ ಇದರ ಬಗ್ಗೆ ಚರ್ಚೆ ಮಾಡಲಾಗಿತ್ತು. ವಿರೋಧ ಪಕ್ಷದವರು ಸಹ ಮರು ಗಣತಿಗೆ ಒತ್ತಾಯ ಮಾಡುತ್ತಿದ್ದರು. ಈ ಮಧ್ಯೆ ಹೈಕಮಾಂಡ್ ಅವರು ನಮ್ಮನ್ನು ಕರೆಸಿ ಈ ಬಗ್ಗೆ ಒಂದಷ್ಟು ಮಾರ್ಗದರ್ಶನ ನೀಡಿದ್ದಾರೆ? ಎಂದರು.

ಲಿಂಗಾಯತ ಮತ್ತು ಒಕ್ಕಲಿಗರಿಂದ ಈ ಹಿಂದೆ ವಿರೋಧ ವ್ಯಕ್ತವಾದ ಬಗ್ಗೆ ಕೇಳಿದಾಗ, ಇದರ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ. ಸಮಾಜದ ಎಲ್ಲರನ್ನು ಒಳಗೊಂಡ ಸಮೀಕ್ಷೆ ಇದಾಗಲಿದೆ. ಹೊರನಾಡು ಕನ್ನಡಿಗರಿಗೆ ಆನ್‌ಲೈನ್ ಮೂಲಕ ಸಮೀಕ್ಷೆಯಲ್ಲಿ ಭಾಗವಹಿಸುವಂತೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಹೇಳಿದರು.

ಹೈಕಮಾಂಡ್ ತೀರ್ಮಾನದಂತೆ ಮರು ಸಮೀಕ್ಷೆ ಮಾಡಲಾಗಿದೆಯೇ ಎಂದು ಕೇಳಿದಾಗ, ಹೈಕಮಾಂಡ್ ನಮಗೆ ಮಾರ್ಗದರ್ಶನ ಮಾತ್ರ ನೀಡಿದೆ. 10 ವರ್ಷಗಳು ಆಗಿರುವ ಕಾರಣಕ್ಕೆ ಸಮಾಜದ ಎಲ್ಲರನ್ನು ಒಳಗೊಳ್ಳುವುದು ನಮ್ಮ ಉದ್ದೇಶ. ಇದು ಕಾಂಗ್ರೆಸ್ ಪಕ್ಷದ ಮೂಲ ಆಶಯ ಎಂದರು.

## ವಿಮಾನ ದುರಂತ ಆಘಾತ ತಂದಿದೆ

ಅಹಮದಬಾದ್ ವಿಮಾನ ದುರಂತದ ಬಗ್ಗೆ ಕೇಳಿದಾಗ, ಈ ಘಟನೆಯ ಬಗ್ಗೆ ಕೇಳಿ ನಾನು ಆಘಾತಕ್ಕೆ ಒಳಗಾಗಿದ್ದೇನೆ. ಮೃತಪಟ್ಟವರ ಕುಟುಂಬದವರಿಗೆ ಸಾಂತ್ವನ ಹೇಳಲು ಬಯಸುತ್ತೇನೆ. ಜಗತ್ತಿಗೆ ಹಾಗೂ ದೇಶಕ್ಕೆ ಇದು ಆಘಾತಕಾರಿ ಸುದ್ದಿ. ಹೆಚ್ಚಿನ ಸಾವು ಆಗದಿರಲಿ ಎಂದು ಆ ಭಗವಂತನಲ್ಲಿ ಪ್ರಾರ್ಥನೆ ಮಾಡುತ್ತೇನೆ. ಕರ್ನಾಟಕದ ಸರ್ಕಾರದ ಹಾಗೂ ಪಕ್ಷದ ಸಹಾನುಭೂತಿ ಹಾಗೂ ಪ್ರಾರ್ಥನೆ ಇದ್ದೇ ಇರುತ್ತದೆ. ದೇಶದಲ್ಲಿ ವಿಮಾನಯಾನ ಕ್ಷೇತ್ರ ಅಭಿವೃದ್ಧಿ ಕಾಣುತ್ತಿತ್ತು. ಆದರೆ ಈ ದುರಂತ ನಡೆಯಬಾರದಿತ್ತು ಎಂದು ವಿಷಾದ ವ್ಯಕ್ತಪಡಿಸಿದರು. ವಿಮಾನದಲ್ಲಿ ಕನ್ನಡಿಗರು ಇದ್ದರು ಎಂದು ಕೇಳಿದಾಗ, ಕನ್ನಡಿಗರು ಜೊತೆಗೆ ಅವರು ಭಾರತೀಯರು. ಇಲ್ಲಿ ಮಾನವೀಯತೆ ಮುಖ್ಯ. ತಮಿಳು, ಗುಜರಾತಿ, ಕನ್ನಡಿಗರು ಎಂಬುದು ಬೇಡ. ಅವರೆಲ್ಲರು ನಮ್ಮ ದೇಶದವರು ಅವರ ಉಳಿವಿಗೆ ನಾವು ಪ್ರಾರ್ಥನೆ ಮಾಡೋಣ ಎಂದರು.



ಬೆಂಗಳೂರಿನಲ್ಲಿ ನವೀಕರಿಸಿದ ವೆಂಕಟಪ್ಪ ಕಲಾ ಗ್ಯಾಲರಿಯ ಉದ್ಘಾಟನಾ ಸಮಾರಂಭದಲ್ಲಿ ಗುರುವಾರ ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವ ಎಚ್.ಕೆ.ಪಾಟೀಲ್ ಇತರರು ಪಾಲ್ಗೊಂಡಿದ್ದರು.

# ವಿಮಾನ ಪತನದಲ್ಲಿ ಮೃತಪಟ್ಟವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈವಿ ಸಂತಾಪ



**ಬೆಂಗಳೂರು,ಜೂ12:** ಅಹಮದಾಬಾದ್‌ನಲ್ಲಿ ಗುರುವಾರ ಸಂಭವಿಸಿದ ವಿಮಾನ ಪತನ ದುರ್ಘಟನೆಯು ಅತ್ಯಂತ ಆಘಾತಕರ ವಿಚಾರ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಈ ಹೃದಯವಿದ್ರಾವಕ ಘಟನೆಯಲ್ಲಿ ಮೃತಪಟ್ಟ ಭಾರತೀಯ ನಾಗರಿಕರು, ವೈಮಾನಿಕ ಸಿಬ್ಬಂದಿಗಳ ಮತ್ತು ವಿದೇಶೀಯರ ಕುಟುಂಬಕ್ಕೆ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ. ಮೃತರಿಗೆ ಸದ್ಗತಿ ಲಭಿಸಲಿ; ಮೃತರ ಸಂಬಂಧಿಗಳಿಗೆ ದೇವರು ಈ ದುಃಖವನ್ನು ತಡೆದುಕೊಳ್ಳುವ ಶಕ್ತಿ ನೀಡಲಿ. ಗಾಯಾಳುಗಳು ಬೇಗನೆ ಚೇತರಿಸಿಕೊಳ್ಳಲಿ ಎಂದು ಅವರು ಪ್ರಾರ್ಥಿಸಿದ್ದಾರೆ. ಈ ರಾಷ್ಟ್ರೀಯ ವಿಪತ್ತಿನ ಹಿನ್ನೆಲೆಯಲ್ಲಿ, ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ರಾಜ್ಯ ಸರಕಾರದ ವಿರುದ್ಧ ಬಿಜೆಪಿ ವತಿಯಿಂದ ನಡೆಸಲು ಉದ್ದೇಶಿಸಿದ್ದ ಬೃಹತ್ ಪ್ರತಿಭಟನೆಯನ್ನು ಮುಂದೂಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಕಾಲ್ತುಳಿತ: ನ್ಯಾಯ ದೊರಕಿಸಿಕೊಡಲು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ಅಶೋಕ್ ಮನವಿ



**ಬೆಂಗಳೂರು, ಜೂ.12:** ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ದುರಂತದಲ್ಲಿ ಸಂತ್ರಸ್ತರಿಗೆ ನ್ಯಾಯ ಒದಗಿಸಲು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮಧ್ಯಪ್ರವೇಶಿಸುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ಕೋರಿದ್ದಾರೆ. ಈ ಕುರಿತು ಅವರು ಆಯೋಗದ ಅಧ್ಯಕ್ಷರಿಗೆ ಪತ್ರ ಬರೆದಿದ್ದಾರೆ.

ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆಯ ದಿನದಂದು, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ದುರಂತ ಸಂಭವಿಸಿ 11 ಯುವಜನರು ಮೃತಪಟ್ಟಿದ್ದಾರೆ. 75 ಜನರು ತೀವ್ರವಾಗಿ ಗಾಯಗೊಂಡಿದ್ದಾರೆ. ಜನರ ಸುರಕ್ಷತೆಯ ವಿಚಾರದಲ್ಲಿ ರಾಜ್ಯ ಸರ್ಕಾರ ನಿರ್ಲಕ್ಷ್ಯ ತೋರಿದೆ ಹಾಗೂ ಈ ಕಾರ್ಯಕ್ರಮವನ್ನು ಸರಿಯಾಗಿ ನಿರ್ವಹಣೆ ಮಾಡಿಲ್ಲ ಎಂಬುದು ಕಂಡುಬಂದಿದೆ ಎಂದು ಆರ್.ಅಶೋಕ ಪತ್ರದಲ್ಲಿ ದೂರಿದ್ದಾರೆ.

ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ 35 ಸಾವಿರ ಜನರು ಹೋಗಬಹುದು. ಆದರೆ ಉಚಿತ ಪಾಸ್ ಹಾಗೂ ತಪ್ಪಾದ ಘೋಷಣೆ/ಪ್ರಕಟಣೆಗಳಿಂದಾಗಿ ಅತ್ಯಧಿಕ ಸಂಖ್ಯೆಯಲ್ಲಿ ಜನರು ಬಂದು ಕ್ರೀಡಾಂಗಣಕ್ಕೆ ನುಗ್ಗಿದ್ದಾರೆ. ಇಂತಹ ಬೃಹತ್ ಕಾರ್ಯಕ್ರಮದಲ್ಲಿ ಪೊಲೀಸ್ ಹಾಗೂ ಭದ್ರತಾ ಸಿಬ್ಬಂದಿಯ ಕೊರತೆ ಕೂಡ ಇತ್ತು. ಆಂಬ್ಯುಲೆನ್ಸ್, ಪ್ರಾಥಮಿಕ ಚಿಕಿತ್ಸಾ ವ್ಯವಸ್ಥೆ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಿರಲಿಲ್ಲ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ. ಈ ತಪ್ಪಿನಲ್ಲಿ ಆರ್‌ಸಿಬಿ, ಡಿಎನ್‌ಎ ಹಾಗೂ ಕ್ರಿಕೆಟ್ ಅಸೋಸಿಯೇಶನ್‌ನ ಪಾತ್ರವೂ ಇದೆ ಎಂದು ಅವರು ಪತ್ರದಲ್ಲಿ ವಿವರಿಸಿದ್ದಾರೆ.

ಈ ಪ್ರಕರಣದಲ್ಲಿ ಎಫ್‌ಐಆರ್ ದಾಖಲಾಗಿದೆ ಹಾಗೂ ತನಿಖೆ ನಡೆಸಲಾಗುತ್ತಿದೆ. ಆದರೆ ಸರ್ಕಾರ ಹಾಗೂ ಸರ್ಕಾರಿ ಸಂಸ್ಥೆಗಳು ಯಾವುದೇ ಸಿದ್ಧತೆ ಮಾಡಿಕೊಳ್ಳದಿರುವುದು ಕಂಡುಬಂದಿದೆ. ಕಾರ್ಯಕ್ರಮಕ್ಕೆ ಬಂದವರಲ್ಲಿ ಹೆಚ್ಚಿನವರು ಯುವಜನರೇ ಆಗಿದ್ದು, ಅವರ ಸುರಕ್ಷತೆ ಹಾಗೂ ಬದುಕುವ ಹಕ್ಕನ್ನು ಕಿತ್ತುಕೊಂಡಂತಾಗಿದೆ. ಆದ್ದರಿಂದ ಈ ದುರಂತವನ್ನು ಸ್ವಯಂ ಪ್ರೇರಿತವಾಗಿ ದೂರಾಗಿ ಪರಿಗಣಿಸಿ ತನಿಖೆ ನಡೆಸಬೇಕು ಎಂದು ಆರ್.ಅಶೋಕ ಮನವಿ ಮಾಡಿದ್ದಾರೆ.

ಸರ್ಕಾರದ ಇಲಾಖೆಗಳು, ಅಧಿಕಾರಿಗಳು ಹಾಗೂ ಖಾಸಗಿ ಸಂಸ್ಥೆಗಳ ಜವಾಬ್ದಾರಿ ಹಾಗೂ ಪಾತ್ರದ ಕುರಿತು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದಿಂದ ತನಿಖೆ ಮಾಡಬೇಕಿದೆ. ತಪ್ಪು ಯಾರದ್ದು ಎಂದು ಪತ್ತೆ ಮಾಡಿ, ಹೊಣೆಗಾರಿಕೆಯನ್ನು ಗುರುತಿಸಿ ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕಿದೆ.

ಹಾಗೆಯೇ ಇನ್ನು ಮುಂದೆ ಇಂತಹ ಘಟನೆ ನಡೆಯದಂತೆ ಕ್ರಮ ವಹಿಸಲು, ಸಾರ್ವಜನಿಕ ಕಾರ್ಯಕ್ರಮಗಳಿಗೆ ಸೂಕ್ತವಾದ ನಿಯಮ ಅಥವಾ ಮಾರ್ಗಸೂಚಿಯನ್ನು ನೀಡಬೇಕಿದೆ. ಈಗಾಗಲೇ ಸರ್ಕಾರದಿಂದ ತನಿಖೆ ನಡೆಯುತ್ತಿದ್ದರೂ, ಅದು ಪಾರದರ್ಶಕವಾಗಿರಲು, ಆಯೋಗದಿಂದ ಈ ತನಿಖೆಯನ್ನು ಮೇಲ್ವಿಚಾರಣೆ ಮಾಡಬೇಕಿದೆ. ಹೀಗಾದರೆ ಮಾತ್ರ ನೊಂದ ಕುಟುಂಬಗಳಿಗೆ ನ್ಯಾಯ ಒದಗಿಸಲು ಸಾಧ್ಯವಾಗುತ್ತದೆ ಎಂದು ಅವರು ಪತ್ರದಲ್ಲಿ ಕೋರಿದ್ದಾರೆ. ಇದು ನಿಜಕ್ಕೂ ತಡೆಯಬಹುದಾದ ದುರಂತರವಾಗಿತ್ತು. ಈಗ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಮಧ್ಯಪ್ರವೇಶದಿಂದಾಗಿ ನೊಂದ ಕುಟುಂಬಗಳಿಗೆ ನ್ಯಾಯ ಸಿಗುವುದರ ಜೊತೆಗೆ, ಮುಂದೆ ಇಂತಹ ಘಟನೆ ಮರುಕಳಿಸದಂತೆ ಎಚ್ಚರ ವಹಿಸಬಹುದು ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.

### ಘಟನೆಗೆ ಸಂಬಂಧಪಟ್ಟಂತೆ ಹಲವು ಕಾರಣ ಪತ್ರದಲ್ಲಿ ಪಟ್ಟಿ ಮಾಡಿದ್ದಾರೆ

- ಜನದಟ್ಟಣೆ ನಿಯಂತ್ರಿಸುವಲ್ಲಿ ವೈಫಲ್ಯ ಮತ್ತು ಸಂಭ್ರಮಾಚರಣೆ ಬಗ್ಗೆ ಅತಿಯಾದ ಪ್ರಚಾರ.
- ಅಸಮರ್ಪಕ ಭದ್ರತೆ ಮತ್ತು ಕಡಿಮೆ ಪೊಲೀಸರ ನಿಯೋಜನೆ.
- ಮೂಲಸೌಕರ್ಯಗಳು ಮತ್ತು ತುರ್ತು ಸೇವೆಗಳ ಕೊರತೆ.
- ಸಂಘಟಕರ ಬೇಜವಾಬ್ದಾರಿ.
- ರಾಜ್ಯ ಸರ್ಕಾರದ ವೈಫಲ್ಯಗಳು.

### ಮಾನವ ಹಕ್ಕುಗಳ ಆಯೋಗಕ್ಕೆ ಅಶೋಕ್ ಆಗ್ರಹವೇನು?

- ತಕ್ಷಣವೇ ಸ್ವಯಂಪ್ರೇರಿತ ಪ್ರಕರಣ ದಾಖಲಿಸಬೇಕು.
- ಸಮಗ್ರ ತನಿಖೆ ಆರಂಭಿಸಬೇಕು.
- ಹೊಣೆಗಾರಿಕೆ ಯಾರದ್ದು ಎಂಬುದನ್ನು ಕಾತರಿಪಡಿಸಿಕೊಳ್ಳಬೇಕು.
- ಮಾರ್ಗಸೂಚಿ ಮತ್ತು ಪ್ರೋಟೋಕಾಲ್‌ಗಳನ್ನು ಹೊರಡಿಸಬೇಕು.
- ಈಗ ನಡೆಯುತ್ತಿರುವ ತನಿಖೆಯ ಬಗ್ಗೆ ಗಮನಹರಿಸಬೇಕು.

# ಕಾಲ್ತುಳಿತ ಪ್ರಕರಣ: ನಾಲ್ವರಿಗೆ ಜಾಮೀನು



**ಬೆಂಗಳೂರು, ಜೂ, 12:** ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಮುಂಭಾಗ ಈಚೆಗೆ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ ಆರ್‌ಸಿಬಿಯ ಮಾರುಕಟ್ಟೆ ವಿಭಾಗದ ಮುಖ್ಯಸ್ಥ ನಿಖಿಲ್ ಸೋಸಲೆ, ಡಿಎನ್‌ಎ ಎಂಟರ್‌ಟೇನ್ಮೆಂಟ್ ನೆಟ್‌ವರ್ಕ್‌ನ ನಿರ್ದೇಶಕ ಸುನಿಲ್ ಮ್ಯಾಥ್ಯೂ, ಡಿಎನ್‌ಎನ ಮ್ಯಾನೇಜರ್ ಕಿರಣ್ ಕುಮಾರ್ ಮತ್ತು ಸಮಂತ್ ಮಾವಿನಕೆರೆ ಅವರಿಗೆ ಜಾಮೀನು ಮಂಜೂರು ಮಾಡಲಾಗಿದೆ. ಅರ್ಜಿದಾರರು ಸಕ್ಷಮ ನ್ಯಾಯಾಲಯಕ್ಕೆ ಪಾಸ್‌ಪೋರ್ಟ್ ಸಲ್ಲಿಸಬೇಕು ಎಂದು ಹೈಕೋರ್ಟ್ ಆದೇಶಿಸಿದೆ. ತಮ್ಮ ಬಂಧನ ಅಕ್ರಮವಾಗಿರುವುದರಿಂದ ತಕ್ಷಣ ಬಿಡುಗಡೆ ಮಾಡುವ ಮೂಲಕ ಮಧ್ಯಂತರ ಪರಿಹಾರ ನೀಡಬೇಕು ಎಂಬ ಮನವಿ ಕುರಿತು ವಾದ–ಪ್ರತಿವಾದ ಆಲಿಸಿದ್ದ ನ್ಯಾಯಮೂರ್ತಿ ಎಸ್ ಆರ್ ಕೃಷ್ಣ ಕುಮಾರ್ ಅವರ ಏಕಸದಸ್ಯ ಪೀಠವು ಇಂದು ಆದೇಶ ಪ್ರಕಟಿಸಿತು.

ಅರ್ಜಿದಾರರನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಸಂದೇಶ್ ಚೌಟ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನದ ನಂತರ ಆರೋಪಿಗಳನ್ನು ಬಂಧಿಸಲಾಗಿದೆ.

ಸರ್ಕಾರದ ಆಕ್ಷೇಪಣೆಯಲ್ಲಿ ಈ ಕುರಿತು ನಿರ್ದಿಷ್ಟವಾಗಿ ನಿರಾಕರಿಸಲಾಗಿಲ್ಲ. ದೀಪಕ್ ಮಹಾಜನ್ ವರ್ಸಸ್ ಜಾರಿ ನಿರ್ದೇಶನಾಲಯದ ಪ್ರಕರಣದಲ್ಲಿ ವ್ಯಕ್ತಿ ಸ್ವಾತಂತ್ರ್ಯ ನಿರಾಕರಿಸುವುದು ಬಂಧನವಾಗುತ್ತದೆ. ಇಲ್ಲಿ ಸಿಸಿಬಿ ಪೊಲೀಸರು ವಶಕ್ಕೆ ಪಡೆದಿರುವುದು ಬಂಧನವೇ ಆಗುತ್ತದೆ. ಆ ಸಂದರ್ಭದಲ್ಲಿ ಬಂಧನದ ಆಧಾರ ನೀಡಬೇಕಿತ್ತು. ಇದನ್ನು ನೀಡದಿರುವುದು ಬಂಧನವನ್ನು ಅಕ್ರಮವಾಗಿಸುತ್ತದೆ ಎಂದಿದ್ದರು.

ಸಿಸಿಬಿ ಪೊಲೀಸರು ಸೋಸಲೆಯನ್ನು ವಶಕ್ಕೆ ಪಡೆದಾಗ ನೀಡಿದ ಸೂಚನೆಯಲ್ಲಿ ಸಮಯ ಉಲ್ಲೇಖಿಸಿಲ್ಲ. ಬಂಧನ ಸಮಯವನ್ನು ಉಲ್ಲೇಖಿಸಬೇಕಿರುವುದು ತನಿಖಾಧಿಕಾರಿಯೋ ಅಥವಾ ಆರೋಪಿಯೋ ಇನ್ಸ್‌ಪೆಕ್ಷನ್ ಮೆಮೊದಲ್ಲಿಯೂ ಸಮಯ ಉಲ್ಲೇಖವಿಲ್ಲ. ಬಂಧನದ ಸಮಯದಲ್ಲಿ ಒದಗಿಸಬೇಕಾದ ದಾಖಲೆಗಳನ್ನು 10 ಗಂಟೆ ವಿಳಂಬವಾಗಿ ಒದಗಿಸಿದ್ದಾರೆ.

ಕಡ್ಡಾಯವಾಗಿ ನೀಡಬೇಕಿರುವ ದಾಖಲೆಗಳನ್ನು ಒದಗಿಸದಿರುವುದು ಕಾನೂನಿಗೆ ವಿರುದ್ಧವಾದ ಕ್ರಮ ಎಂದಿದ್ದರು. ಜೂ.4ರಂದು ಕಾಲ್ತುಳಿತದಲ್ಲಿ 11 ಜನ ಮೃತಪಟ್ಟು, 50ಕ್ಕೂ ಹೆಚ್ಚು ಜನರು ಗಾಯಗೊಳ್ಳಲು ಆರ್‌ಸಿಬಿ ಮತ್ತು ಡಿಎನ್‌ಎ ಸೂಕ್ತ ರೀತಿಯಲ್ಲಿ ಜನ ಸಂದಣಿ ನಿರ್ವಹಣೆ ಮಾಡದಿರುವುದೇ ಕಾರಣ ಎಂದು ಜೂನ್ 6ರಂದು ನಿಖಿಲ್, ಸುನೀಲ್ ಮ್ಯಾಥ್ಯೂ, ಕಿರಣ್ ಮತ್ತು ಸಮಂತ್ ಅವರನ್ನು ಪೊಲೀಸರು ಬಂಧಿಸಿದ್ದರು. ಅಂದೇ ಅವರನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ನೀಡಲಾಗಿತ್ತು. ಈ ನಡುವೆ, ಪೊಲೀಸ್ ಕಸ್ಟಡಿಗೆ ಪಡೆಯಲು ಸಿಸಿಬಿ ಪ್ರಯತ್ನಿಸಿದ್ದರೂ ಅದು ಫಲಿಸಿರಲಿಲ್ಲ.

# ಬಿಜೆಪಿ ನಾಯಕರ ತಂಟೆಗೆ ಇ.ಡಿ ಹೋಗುವುದಿಲ್ಲ ಸಚಿವ ದಿನೇಶ್ ಗುಂಡೂರಾವ್ ಆರೋಪ




**ಬೆಂಗಳೂರು, ಜೂ.12:** ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುವ ಜಾರಿ ನಿರ್ದೇಶನಾಲಯಕ್ಕೆ ಸಾಂವಿಧಾನಿಕ ಪಾವಿತ್ರ್ಯತೆ ಇರಲು ಸಾಧ್ಯವಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಆರೋಪಿಸಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕರ್ನಾಟಕದಲ್ಲಿ ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ಜಾರಿ ನಿರ್ದೇಶನಾಲಯ ಮತ್ತೆ ದಾಳಿ ನಡೆಸಿದೆ. ಜಾರಿ ನಿರ್ದೇಶನಾಲಯದ ವೈಶಿಷ್ಟ್ಯವೇನೆಂದರೆ ಅದು ದಾಳಿ ಮಾಡುವುದು ಬಿಜೆಪಿಯೇತರ ನಾಯಕರ ಮೇಲೆ ಮಾತ್ರ. ಇಲ್ಲಿಯವರೆಗೂ ಇ.ಡಿ ಬಿಜೆಪಿ ನಾಯಕರ ತಂಟೆಗೆ ಹೋಗಿಲ್ಲ. ಹೋಗುವುದು ಇಲ್ಲ. ಇದೊಂದು ವಿಸ್ಮಯ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ನಾಯಕರನ್ನೇ ನಿರ್ಧಿಷ್ಟವಾಗಿ ಗುರಿಯಾಗಿಸಿಕೊಂಡು ದಾಳಿ ನಡೆಸುವ ಜಾರಿ ನಿರ್ದೇಶನಾಲಯ ತನ್ನ ಹೆಸರನ್ನು ಕಾಂಗ್ರೆಸ್ ವಿರೋಧಿ ನಿರ್ದೇಶನಾಲಯ ಎಂದು ಬದಲಾಯಿಸಿಕೊಳ್ಳುವುದು ಸೂಕ್ತ. ಯಾಕೆಂದರೆ ಜಾರಿ ನಿರ್ದೇಶನಾಲಯದ ಪ್ರೈಮ್ ಟಾರ್ಗೆಟ್ ಕಾಂಗ್ರೆಸ್ ನಾಯಕರೆ ಹೊರತು ಬಿಜೆಪಿಯವರಲ್ಲ. ಇತ್ತೀಚೆಗಷ್ಟೆ ತಮಿಳುನಾಡಿನ ಟಿಎಎಸ್‌ಎಂಎಸಿ ಹಗರಣದಲ್ಲಿ ಇ.ಡಿ. ನಡೆಯನ್ನು ಸುಪ್ರೀಂ ಕೋರ್ಟ್ ಕಟು ಮಾತುಗಳಲ್ಲಿ ಟೀಕಿಸಿದೆ. ಇ.ಡಿ. ಎಲ್ಲಾ ಮಿತಿಗಳನ್ನು ಮೀರುತ್ತಿದೆ ಎಂದು ಸುಪ್ರೀಂ ಎಚ್ಚರಿಕೆ ನೀಡಿದೆ. ಆದರೂ ಇ.ಡಿ. ಅಧಿಕಾರಿಗಳು ಬಿಜೆಪಿ ಕಾರ್ಯಕರ್ತರಂತೆ ವರ್ತಿಸುತ್ತಿದ್ದಾರೆ. ಸಾಂವಿಧಾನಿಕ ತನಿಖಾ ಸಂಸ್ಥೆಯಾದ ಇ.ಡಿ.ಯನ್ನು ಮೋದಿ ಸರ್ಕಾರ ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ. ಇ.ಡಿ. ರಾಜಕೀಯ ಪಕ್ಷವೊಂದರ ಆಜ್ಞಾಪಾಲಕರಾದರೆ ಆ ಸಂಸ್ಥೆಗೆ ಸಾಂವಿಧಾನಿಕ ಪಾವಿತ್ರ್ಯತೆ ಇರಲು ಹೇಗೆ ಸಾಧ್ಯ ಆ ಸಂಸ್ಥೆಯಿಂದ ಪ್ರಜಾಪ್ರಭುತ್ವದ ಮೌಲ್ಯ ಉಳಿಯಲು ಹೇಗೆ ಸಾಧ್ಯ ಎಂದು ಬರೆದುಕೊಂಡಿದ್ದಾರೆ.


# ಎಡಿಜಿಪಿಯಾಗಿ ರೂಪಾ ಮೌದ್ಗಿಲ್



**ಬೆಂಗಳೂರು, ಜೂ.12:** ಇತ್ತೀಚೆಗಷ್ಟೇ ಎಡಿಜಿಪಿ ಹುದ್ದೆಗೆ ಮುಂಬಡ್ತಿ ಪಡೆದಿದ್ದ ಐಪಿಎಸ್ ಅಧಿಕಾರಿ ರೂಪಾ ಮೌದ್ಗಿಲ್ ಅವರನ್ನು ಇದೀಗ ಬೆಂಗಳೂರು ಮೆಟ್ರೋಪಾಲಿಟನ್ ಟಾಸ್ಕ್ ಫೋರ್ಸ್ ಎಡಿಜಿಪಿಯಾಗಿ ನೇಮಕ ಮಾಡಿ ರಾಜ್ಯ ಸರ್ಕಾರ ಗುರುವಾರ ಆದೇಶ ಹೊರಡಿಸಿದೆ.

ಕರ್ನಾಟಕ ರೇಷ್ಮೆ ಮಾರುಕಟ್ಟೆ ನಿಗಮ ನಿಯಮಿತ ವ್ಯವಸ್ಥಾಪಕ ನಿರ್ದೇಶಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ರೂಪಾ ಮೌದ್ಗಿಲ್‌ಗೆ ಎರಡು ವಾರಗಳ ಹಿಂದಷ್ಟೇ ಕರ್ನಾಟಕ ಹೈಕೋರ್ಟ್ ಮುಂಬಡ್ತಿ ನೀಡುವಂತೆ ಆದೇಶ ನೀಡಿತ್ತು. ತಮಗೆ ನ್ಯಾಯಯುತವಾಗಿ ಲಭ್ಯವಾಗಬೇಕಾದ ಬಡ್ತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ರೂಪಾ ಹೈಕೋರ್ಟ್ ಮೊರೆ ಹೋಗಿದ್ದರು.

# ಕಾಲ್ತುಳಿತ ಪ್ರಕರಣದಲ್ಲಿ ಎರಡು ತನಿಖೆಗಳೇಕೆ: ಹೈಕೋರ್ಟ್ ಪ್ರಶ್ನೆ




**ಬೆಂಗಳೂರು, ಜೂ, 12;** ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡು ತನಿಖೆಗಳನ್ನು ಏಕೆ ನಡೆಸಲಾಗುತ್ತಿದೆ ಎಂಬುದು ಅರ್ಥವಾಗುತ್ತಿಲ್ಲ. ಎರಡು ವಿಚಾರಣಾ ಆಯೋಗಗಳಲ್ಲಿ ಭಿನ್ನತೆ ಪತ್ತೆಯಾದರೆ ರಾಜ್ಯ ಸರ್ಕಾರವನ್ನು ಸುಮ್ಮನೆ ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರ ಎಚ್ಚರಿಕೆ ನೀಡಿದೆ. ವಿಚಾರಣಾ ಆಯೋಗದ ತನಿಖೆ ನ್ಯಾಯಾಲಯಕ್ಕೆ ಅನ್ವಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ಕಾಲ್ತುಳಿತದಲ್ಲಿ 11 ಮಂದಿ ಸಾವನ್ನಪ್ಪಿ, 50ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಸಂಬಂಧ ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡಿರುವ ಅರ್ಜಿಯ ವಿಚಾರಣೆಯನ್ನು ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ ಕಾಮೇಶ್ವರ ರಾವ್ ಮತ್ತು ನ್ಯಾಯಮೂರ್ತಿ ಸಿ ಎಂ ಜೋಶಿ ಅವರ ವಿಭಾಗೀಯ ಪೀಠ ವಿಚಾರಣೆ ನಡೆಸಿತು.

ವಿಜಯೋತ್ಸವದ ಹಿನ್ನೆಲೆಯಲ್ಲಿ ನಡೆದಿರುವ ದುರಂತಕ್ಕೆ ಸಂಬಂಧಿಸಿದ ಎಲ್ಲಾ ಪತ್ರ ವ್ಯವಹಾರ, ಸಂವಹನ, ಆಫ್‌ಲೈನ್ ಮತ್ತು ಆನ್‌ಲೈನ್, ವಾಟ್ಸಾಪ್ ಸಂದೇಶವೂ ಸೇರಿ ಪ್ರತಿಯೊಂದು ಮಾಹಿತಿಯನ್ನು ಮುಖ್ಯ ಕಾರ್ಯದರ್ಶಿ ಕಸ್ಟಡಿಗೆ ನೀಡಬೇಕು. ಮ್ಯಾಜಿಸ್ಟ್ರೇಟ್ ವಿಚಾರಣೆ ಮತ್ತು ನ್ಯಾಯಾಂಗ ವಿಚಾರಣಾ ಆಯೋಗದ ವಿಚಾರಣಾ ವ್ಯಾಪ್ತಿ ಸಲ್ಲಿಸಬೇಕು ಎಂದು ಸರ್ಕಾರಕ್ಕೆ ನಿರ್ದೇಶಿಸಿರುವ ನ್ಯಾಯಾಲಯವು ವಿಚಾರಣೆಯನ್ನು ಮಂಗಳವಾರಕ್ಕೆ ಮುಂದೂಡಿದೆ.

ವಿಚಾರಣೆ ಆರಂಭವಾಗುತ್ತಿದ್ದಂತೆ ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದ ಹೈಕೋರ್ಟ್ ಕೇಳಿದ್ದ 9 ಪ್ರಶ್ನೆಗಳಿಗೆ ಉತ್ತರ ನೀಡಿದ ವರದಿಯನ್ನು ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಿದರು. ಎಲ್ಲಾ ದಾಖಲೆಗಳು ಕನ್ನಡದಲ್ಲಿದ್ದು, ಎರಡು ದಿನಗಳಲ್ಲಿ ಇಂಗ್ಲಿಷ್‌ಗೆ ಅನುವಾದಿಸಿ ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು ಎಂದು ಭರವಸೆ ನೀಡಿದರು.

ವಿಚಾರಣೆಯ ಒಂದು ಹಂತದಲ್ಲಿ ಪೀಠವು ಮ್ಯಾಜಿಸ್ಟೀರಿಯಲ್ ಮತ್ತು ನಿವೃತ್ತ ನ್ಯಾಯಮೂರ್ತಿ ಮೈಕೆಲ್ ಕುನ್ಹಾ ನೇತೃತ್ವದ ವಿಚಾರಣಾ ಆಯೋಗಕ್ಕೆ ವಿಚಾರಣಾ ವ್ಯಾಪ್ತಿ ನಿಗದಿಪಡಿಸಲಾಗಿದೆಯೇ ಸಾಕಷ್ಟು ಸಂವಹನ ನಡೆದಿರುವುದರಿಂದ ಇದನ್ನು ಕೇಳಲಾಗುತ್ತಿದೆ ಎಂದಿತು.

ಇದಕ್ಕೆ ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಇಲ್ಲ. ಆದರೆ, ಎಲ್ಲಾ ದಾಖಲೆಗಳನ್ನೂ ಸಲ್ಲಿಸಲಾಗಿದೆ. ನ್ಯಾಯಾಲಯ ಏನು ಸೂಚಿಸುತ್ತದೆ. ಅದಕ್ಕೆ ನಾಳೆಯೊಳಗೆ ಉತ್ತರಿಸಲಾಗುವುದು. ಎರಡು ಆಯೋಗಗಳಿಗೆ ವಿಚಾರಣಾ ವ್ಯಾಪ್ತಿ ಸ್ಪಷ್ಟಪಡಿಸಲಾಗಿದೆ. ಎಲ್ಲಾ ಹೇಳಿಕೆಗಳಿಗೂ ಪೂರಕವಾಗಿ ದಾಖಲೆಗಳನ್ನು ಒದಗಿಸಲಾಗಿದೆ ಎಂದರು.

ಈ ನಡುವೆ ಪೀಠವು ಎಲ್ಲಾ ದಾಖಲೆಗಳನ್ನು ಸಂರಕ್ಷಿಸಿಡಲು ರಾಜ್ಯ ಸರ್ಕಾರವು ಯಾರಿಗಾದರೂ ಉಸ್ತುವಾರಿ ನೀಡಿದೆಯೇ ಸರ್ಕಾರದ ಇಲಾಖೆಗಳು ಆದೇಶದಲ್ಲಿ ತಿದ್ದುಪಡಿ ಮಾಡಬಹುದು. ಹೀಗಾಗಿ, ರಾಜ್ಯ ಸರ್ಕಾರದ ಅತ್ಯುನ್ನತ ಅಧಿಕಾರಿಯಾಗಿರುವ ಮುಖ್ಯ ಕಾರ್ಯದರ್ಶಿ ಉಸ್ತುವಾರಿಗೆ ಎಲ್ಲಾ ದಾಖಲೆಗಳನ್ನು ನೀಡಬೇಕು. ತನಿಖೆ ಏನೇ ಆದರೂ ಅದು ನಮಗೆ ಅನ್ವಯ ಅಲ್ಲ ಎಂದಿತು.

ಇನ್ನು, ನ್ಯಾಯಾಂಗ ವಿಚಾರಣಾ ಆಯೋಗದ ವರದಿ ಬಂದ ಬಳಿಕ ಮಧ್ಯಪ್ರವೇಶಿಕೆ ಅರ್ಜಿ ಸಲ್ಲಿಕೆ ಮಾಡಿರುವವರ ಪೈಕಿ ಯಾರಿಗೆಲ್ಲಾ ಅವಕಾಶ ನೀಡಬೇಕು ಎಂಬುದನ್ನು ನ್ಯಾಯಾಲಯ ನಿರ್ಧರಿಸಬಹುದು. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಮಾರ್ಗಸೂಚಿಯನ್ನು ಪಾಲಿಸಲಾಗಿದೆಯೇ ಎಂಬುದು ವಾಸ್ತವಿಕ ಅಂಶಗಳನ್ನು ಒಳಗೊಂಡ ಪ್ರಶ್ನೆಯಾಗಿದೆ. ಅವುಗಳನ್ನು ಸಾಬೀತುಪಡಿಸಬೇಕಿದೆ. ಎಲ್ಲವನ್ನೂ ನ್ಯಾಯಾಲಯ ಪರಿಶೀಲಿಸಬಹುದಾಗಿದ್ದು, ಏನನ್ನೂ ಬಚ್ಚಿಡುವುದಿಲ್ಲ. ಭವಿಷ್ಯದಲ್ಲಿ ಇಂಥ ದುರ್ಘಟನೆಯಾಗದಂತೆ ತಡೆಯಬಹುದು ಎಂಬುದರ ವಿಚಾರದಲ್ಲಿ ನಾವು ಪಾರದರ್ಶಕವಾಗಿದ್ದೇವೆ ಎಂದರು.

ಬೆಂಗಳೂರು ಪೊಲೀಸ್ ಆಯುಕ್ತರಾಗಿದ್ದ ಬಿ ದಯಾನಂದ್ ಸೇರಿ ಐವರು ಅಧಿಕಾರಿಗಳ ವಾದ ಆಲಿಸದೇ ಅವರನ್ನು ಅಮಾನತು ಮಾಡಲಾಗಿದೆ ಎಂದು ವಕೀಲರೊಬ್ಬರು ವಾದಿಸಲು ಮುಂದಾದರು. ಇದಕ್ಕೆ ನ್ಯಾಯಾಲಯ ಅವಕಾಶ ನೀಡಲಿಲ್ಲ. ಎನ್‌ಡಿಆರ್‌ಎಫ್ ಮಾರ್ಗಸೂಚಿಗಳನ್ನು 2014ರಿಂದಲೂ ರಾಜ್ಯದಲ್ಲಿ ಪಾಲಿಸಲಾಗುತ್ತಿಲ್ಲ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಮೋಹನ್ ಕೊಂಡಜ್ಜಿ ಪ್ರತಿನಿಧಿಸಿದ್ದ ವಕೀಲ ಕೆ ದಿವಾಕರ್ ಪೀಠದ ಗಮನಸೆಳೆದರು.

ಹಿರಿಯ ವಕೀಲ ಎಂ ಬಿ ನರಗುಂದ್ ಅವರು ಕೋವಿಡ್ ಸಂದರ್ಭದಲ್ಲಿ ಚಾಮರಾಜನಗರದಲ್ಲಿ ಆಮ್ಲಜನಕ ಕೊರತೆಯಿಂದ ಸಾಕಷ್ಟು ಮಂದಿ ಮೃತಪಟ್ಟಿದ್ದರು. ಈ ಘಟನೆಯ ಮೇಲೆ ಹೈಕೋರ್ಟ್ ನಿಗಾ ಇಟ್ಟಿತ್ತು. ಈ ಪ್ರಕರಣದಲ್ಲೂ ಹಾಗೇ ಮಾಡಬೇಕು ಎಂದು ಕೋರಿದರು.

# ಕೇರಳ ಮೃಗಾಲಯಕ್ಕೆ ತಾಂತ್ರಿಕ ನೈಪುಣ್ಯದ ವಿನಿಮಯಕ್ಕೆ ಸಮ್ಮತಿ

**ಬೆಂಗಳೂರು, ಜೂ.12:** ಕೇರಳದ ತ್ರಿಶೂರ್ ಜಿಲ್ಲೆಯ ಪುಥೂರ್ ನಲ್ಲಿ ನೂತನವಾಗಿ ಆರಂಭಿಸುತ್ತಿರುವ ಜೈವಿಕ ಉದ್ಯಾನದಲ್ಲಿ ವನ್ಯಜೀವಿ ಮತ್ತು ಪಕ್ಷಿಗಳ ನಿರ್ವಹಣೆಗೆ ಅಗತ್ಯವಾದ ನೈಪುಣ್ಯತೆ ಮತ್ತು ಜ್ಞಾನ ವಿನಿಮಯಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸಮ್ಮತಿಸಿದ್ದಾರೆ.

ವಿಕಾಸಸೌಧದಲ್ಲಿಂದು ತಮ್ಮನ್ನು ಭೇಟಿಯಾದ ಕೇರಳ ಅರಣ್ಯ ಸಚಿವ ಎ.ಕೆ. ಸಶೀಂದ್ರನ್, ಕೇರಳ ಅರಣ್ಯ ಇಲಾಖೆಯಿಂದ ಆರಂಭಿಸಲಾಗುತ್ತಿರುವ ಪ್ರಥಮ ಜೈವಿಕ ಉದ್ಯಾನದಲ್ಲಿ ವನ್ಯಜೀವಿಗಳ ನಿರ್ವಹಣೆ ಕುರಿತಂತೆ ತಾಂತ್ರಿಕ ನೈಪುಣ್ಯತೆ ಹಂಚಿಕೊಳ್ಳುವಂತೆ ಮಾಡಿದ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದರು.

ವಿಶ್ವ ವಿಖ್ಯಾತ ಮೃಗಾಲಯ ವಿನ್ಯಾಸಕಾರ ಆಸ್ಟ್ರೇಲಿಯಾದ ಜಾನ್ ಸಿಯೋ ಅವರಿಂದ ಜೈವಿಕ ಉದ್ಯಾನದ ವಿನ್ಯಾಸ ಮಾಡಿಸಿದ್ದು, 136.8 ಎಕರೆ ಪ್ರದೇಶದಲ್ಲಿ ಇದು ಸಾಕಾರವಾಗುತ್ತಿದ್ದು, ಬರುವ ಆಗಸ್ಟ್ ಅಂತ್ಯಕ್ಕೆ ಕಾರ್ಯಾರಂಭ ಮಾಡಲಿದೆ ಎಂದು ಸಚಿವ ಸಶೀಂದ್ರನ್ ಮಾಹಿತಿ ನೀಡಿದರು, ಹೊಸ ಮೃಗಾಲಯಕ್ಕೆ ಕರ್ನಾಟಕದ ಮೃಗಾಲಯಗಳಲ್ಲಿ ಹೆಚ್ಚುವರಿಯಾಗಿರುವ ಕೆಲವು ವನ್ಯಜೀವಿಗಳನ್ನು ನೀಡುವಂತೆಯೂ ಮನವಿ ಮಾಡಿದರು.

ಈ ಭೇಟಿಯ ವೇಳೆ ಕೇರಳ ರಾಜ್ಯದಲ್ಲಿ ಡೀಮ್ಡ್ ಅರಣ್ಯ ಕುರಿತಂತೆ ಕೈಗೊಂಡಿರುವ ಕ್ರಮಗಳು, ಕಸ್ತೂರಿ ರಂಗನ್ ವರದಿಯ ಕುರಿತಂತೆ ಕೈಗೊಳ್ಳಲಾಗಿರುವ ನಿರ್ಣಯಗಳ ಕುರಿತಂತೆಯೂ ಸಮಾಲೋಚಿಸಲಾಯಿತು.

ಕೇರಳ ಅರಣ್ಯ ಇಲಾಖೆಯ ಮುಖ್ಯ ವನ್ಯಜೀವಿ ಪರಿಪಾಲಕ ಪ್ರಮೋದ್ ಜಿ ಕೃಷ್ಣನ್ ಮತ್ತು ಕರ್ನಾಟಕದ ಅರಣ್ಯ ಇಲಾಖೆಯ ಉನ್ನತಾಧಿಕಾರಿಗಳಾದ ಮೀನಾಕ್ಷಿ ನೇಗಿ, ಸುಭಾಷ್ ಮಲ್ಕಡೆ, ಸುನೀಲ್ ಪನ್ವಾರ್, ಸೂರ್ಯ ಸೇನ್ ಮತ್ತಿತರರು ಸಭೆಯಲ್ಲಿ ಭಾಗಿಯಾಗಿದ್ದರು.

# ಅಕ್ರಮ ವಲಸಿಗರ ಹೆಸರು ಎನ್‌ಆರ್‌ಸಿಯಲ್ಲಿದ್ದರೂ ಗಡೀಪಾರು: ಅಸ್ಸಾಂ ಸಿಎಂ ಹಿಮಂತ ಬಿಸ್ವಾ



**ಗುವಾಹಟಿ, ಜೂ. 12:** ಅಕ್ರಮ ವಲಸಿಗರು ಎಂದು ಹೇಳಲಾದವರನ್ನು ರಾಷ್ಟ್ರೀಯ ನಾಗರಿಕರ ನೋಂದಣಿಯಲ್ಲಿ ಹೆಸರಿಸಿದ್ದರೂ ಸಹ ಬಾಂಗ್ಲಾದೇಶಕ್ಕೆ ಗಡೀಪಾರು ಮಾಡಲಿದ್ದೇವೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಸ್ಪಷ್ಟಪಡಿಸಿದ್ದಾರೆ. ಅವರು ಅಕ್ರಮ ವಲಸಿಗರು ಎಂದು ನಮಗೆ ಖಚಿತವಾಗಿದ್ದರೆ, ನಾವು ಅವರನ್ನು ತಕ್ಷಣವೇ ಗಡಿಪಾರು ಮಾಡಲಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ಅಸ್ಸಾಂನಲ್ಲಿ ಭಾರತೀಯ ನಾಗರಿಕರನ್ನು ರಾಜ್ಯದಲ್ಲಿ ವಾಸಿಸುವ ದಾಖಲೆರಹಿತ ವಲಸಿಗರಿಂದ ಬೇರ್ಪಡಿಸುವ ಉದ್ದೇಶದಿಂದ ಆಗಸ್ಟ್ 2019 ರಲ್ಲಿ ರಾಷ್ಟ್ರೀಯ ನಾಗರಿಕರ ನೋಂದಣಿಯನ್ನು ಪ್ರಕಟಿಸಲಾಯಿತು. ಪಟ್ಟಿಯಲ್ಲಿ ಸೇರಿಸಬೇಕಾದರೆ ನಿವಾಸಿಗಳು ಮಾರ್ಚ್ 24, 1971 ರ ಮಧ್ಯರಾತ್ರಿಯ ಮೊದಲು ಅಸ್ಸಾಂಗೆ ಪ್ರವೇಶಿಸಿದ್ದಾರೆ ಎಂದು ಸಾಬೀತುಪಡಿಸಬೇಕಾಗಿತ್ತು.


19 ಲಕ್ಷಕ್ಕೂ ಹೆಚ್ಚು ಜನರು, ಅಥವಾ ಅರ್ಜಿದಾರರಲ್ಲಿ 5.77% ರಷ್ಟು ಜನರನ್ನು ಅಂತಿಮ ಪಟ್ಟಿಯಿಂದ ಹೊರಗಿಡಲಾಗಿದೆ. ಬಿಜೆಪಿ ನೇತೃತ್ವದ ರಾಜ್ಯ ಸರ್ಕಾರ ಮತ್ತು ಅಸ್ಸಾಂ ರಾಷ್ಟ್ರೀಯತಾವಾದಿ ಗುಂಪುಗಳು ಮರುಪರಿಶೀಲನೆಗೆ ಒತ್ತಾಯಿಸಿದ ನಂತರ ಕೇಂದ್ರ ಸರ್ಕಾರವು NRC ಗೆ ಅಧಿಸೂಚನೆ ಹೊರಡಿಸಿಲ್ಲ. ರಾಜ್ಯ ಸರ್ಕಾರವು ಮಂಗಳವಾರ 19 ಅಕ್ರಮ ವಲಸಿಗರನ್ನು ಗಡಿಪಾರು ಮಾಡಿದೆ ಮತ್ತು ಇನ್ನೂ ಒಂಬತ್ತು ಜನರನ್ನು ಗಡೀಪಾರು ಮಾಡಲಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಿಎಂ ಹೇಳಿದ್ದಾರೆ.

ಹಲವು ಹೆಸರುಗಳನ್ನು ವಂಚನೆಯಿಂದ ನಾಗರಿಕರ ರಾಷ್ಟ್ರೀಯ ನೋಂದಣಿಯಲ್ಲಿ ಸೇರಿಸಲಾಗಿದೆ. NRC ಪ್ರಕ್ರಿಯೆಯನ್ನು ನಡೆಸಿದ ರೀತಿ ಗಂಭೀರ ಅನುಮಾನಗಳು ಮತ್ತು ಕಳವಳಗಳನ್ನು ಹುಟ್ಟುಹಾಕಿದೆ. ಯಾರನ್ನಾದರೂ ಅಕ್ರಮ ವಲಸಿಗರಲ್ಲ ಎಂದು ನಿರ್ಧರಿಸಲು ರಿಜಿಸ್ಟರ್‌ನಲ್ಲಿ ಹೆಸರಿರುವುದು ಮಾತ್ರ ಸಾಕಾಗುವುದಿಲ್ಲ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ವಿದೇಶಿಯರೆಂದು ಘೋಷಿಸಲ್ಪಟ್ಟ ವ್ಯಕ್ತಿಗಳನ್ನು ಕಾನೂನು ಚೌಕಟ್ಟಿನ ಅಡಿಯಲ್ಲಿ ಬಾಂಗ್ಲಾದೇಶಕ್ಕೆ ಹಿಂದಕ್ಕೆ ತಳ್ಳಲಾಗುತ್ತಿದೆ ಎಂದು ಸಿಎಂ ಹೇಳಿಕೊಂಡ ನಾಲ್ಕು ದಿನಗಳ ನಂತರ ಈ ಹೇಳಿಕೆ ಬಂದಿದೆ. ಜೂ.7 ರಂದು, 1955 ರ ಪೌರತ್ವ ಕಾಯ್ದೆಯ ಸೆಕ್ಷನ್ 6೦ಯ ವಿರುದ್ಧ ಸಲ್ಲಿಸಲಾದ ಅರ್ಜಿಯ ವಿಚಾರಣೆ ನಡೆಸುವ ವೇಳೆ ಸುಪ್ರೀಂಕೋರ್ಟ್, ವಿದೇಶಿಯರನ್ನು ಗುರುತಿಸಲು ಅಸ್ಸಾಂ ಸರ್ಕಾರವು ಯಾವಾಗಲೂ ನ್ಯಾಯಾಂಗವನ್ನು ಸಂಪರ್ಕಿಸಲು ಯಾವುದೇ ಕಾನೂನು ಅವಶ್ಯಕತೆಯಿಲ್ಲ ಎಂದು ಹೇಳಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

ವಲಸಿಗರ ಹೊರಹಾಕುವ ಆದೇಶ ಎಂಬ ಹಳೆಯ ಕಾನೂನು ಅಸ್ತಿತ್ವದಲ್ಲಿದೆ. ಈ ಕಾನೂನು ಇನ್ನೂ ಜಾರಿಯಲ್ಲಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಈ ಕಾನೂನಿನ ಪ್ರಕಾರ, ಜಿಲ್ಲಾಧಿಕಾರಿಗೆ ಆದೇಶ ಹೊರಡಿಸುವ ಮತ್ತು ತಕ್ಷಣದ ನಿರಾಕರಣೆಗೆ ಅವಕಾಶ ನೀಡುವ ಅಧಿಕಾರವಿದೆ. ಎಂದು ಅವರು ಹೇಳಿದ್ದಾರೆ. ಅಕ್ಟೋಬರ್‌ನಲ್ಲಿ, ಸುಪ್ರೀಂಕೋರ್ಟ್ 1955 ರ ಪೌರತ್ವ ಕಾಯ್ದೆಯ ಸೆಕ್ಷನ್ 6೦ ಯ ಸಾಂವಿಧಾನಿಕ ಸಿಂಧುತ್ವವನ್ನು ಎತ್ತಿಹಿಡಿದಿತ್ತು.

1985 ರಲ್ಲಿ ಕೇಂದ್ರ ಸರ್ಕಾರ ಮತ್ತು ಅಸ್ಸಾಂ ಚಳವಳಿಯ ನಾಯಕರ ನಡುವೆ ಅಸ್ಸಾಂ ಒಪ್ಪಂದಕ್ಕೆ ಸಹಿ ಹಾಕಿದಾಗ ಕಾಯಿದೆಯಡಿಯಲ್ಲಿ ವಿಶೇಷ ನಿಬಂಧನೆಯಾಗಿ ಸೆಕ್ಷನ್ 6A ಅನ್ನು ಪರಿಚಯಿಸಲಾಯಿತು. ಇದು ಜನವರಿ 1, 1966 ಮತ್ತು ಮಾರ್ಚ್ 25, 1971ರ ನಡುವೆ ಅಸ್ಸಾಂಗೆ ಬಂದ ವಿದೇಶಿಯರಿಗೆ ಭಾರತೀಯ ಪೌರತ್ವವನ್ನು ಪಡೆಯಲು ಅವಕಾಶ ನೀಡುತ್ತದೆ. ಅಸ್ಸಾಂನಲ್ಲಿರುವ ಸ್ಥಳೀಯ ಗುಂಪುಗಳು ಕಾಯಿದೆಯಲ್ಲಿನ ಈ ನಿಬಂಧನೆಯು ಬಾಂಗ್ಲಾದೇಶದಿಂದ ವಲಸೆ ಬಂದವರ ಒಳನುಸುಳುವಿಕೆಯನ್ನು ಕಾನೂನುಬದ್ಧಗೊಳಿಸಿದೆ ಎಂದು ಆರೋಪಿಸಿವೆ.

ಸೋಮವಾರ ಅಸ್ಸಾಂ ಸರ್ಕಾರವು 303 ವಿದೇಶಿಯರನ್ನು ಹಿಂದಕ್ಕೆ ತಳ್ಳಿದೆ(ಗಡೀಪಾರು ಮಾಡಿದೆ) ಮತ್ತು 1950 ರ ಅಸ್ಸಾಂನಿಂದ ವಲಸಿಗರ ಹೊರಹಾಕುವಿಕೆ ಕಾಯ್ದೆಯಡಿಯಲ್ಲಿ ಅದನ್ನು ಮುಂದುವರಿಸುತ್ತದೆ ಎಂದು ಸಿಎಂ ಹೇಳಿದ್ದಾರೆ.



ನವದೆಹಲಿಯಲ್ಲಿ ಎನ್‌ಸಿಸಿ ಪರ್ವತಾರೋಹಣ ದಂಡಯಾತ್ರೆ ತಂಡವನ್ನು ಗುರುವಾರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸನ್ಮಾನಿಸಿದರು.

# ಬಾಟ್ಲಾ ಹೌಸ್ ಧ್ವಂಸ ಪ್ರಕರಣದ ಅರ್ಜಿ ತಿರಸ್ಕಾರ

**ನವದೆಹಲಿ, ಜೂ. 12:** ಬಾಟ್ಲಾ ಹೌಸ್ ಪ್ರದೇಶದಲ್ಲಿ ನಡೆದ ಕಟ್ಟಡ ಧ್ವಂಸ ಕಾರ್ಯಾಚರಣೆಗೆ ಸಂಬಂಧಿಸಿದಂತೆ ಆಮ್ ಆದ್ಮಿ ಪಕ್ಷದ (ಎಎಪಿ) ಶಾಸಕ ಅಮಾನತ್‌ಉಲ್ಲಾ ಖಾನ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯಲ್ಲಿ (ಪಿಐಎಲ್) ಯಾವುದೇ ಪರಿಹಾರ ನೀಡಲು ದೆಹಲಿ ಹೈಕೋರ್ಟ್ ಬುಧವಾರ ನಿರಾಕರಿಸಿದೆ. ಧ್ವಂಸ ಕಾರ್ಯವನ್ನು ಅದೇ ದಿನ ನಡೆಸಲು ನಿರ್ಧರಿಸಲಾಗಿತ್ತು.

ಈ ರೀತಿಯ ಸಾರ್ವಜನಿಕ ಹಿತಾಸಕ್ತಿ ದಾವೆಯಡಿಯಲ್ಲಿ ಸಾಮಾನ್ಯ ರಕ್ಷಣಾ ಆದೇಶ ಹೊರಡಿಸುವುದರಿಂದ ತಮ್ಮದೇ ಆದ ಕಾನೂನು ಪ್ರಕರಣಗಳನ್ನು ಸಲ್ಲಿಸಿದ ಅಥವಾ ಸಲ್ಲಿಸಲು ಬಯಸಬಹುದಾದ ವ್ಯಕ್ತಿಗಳ ಹಕ್ಕುಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಎಂದು ನ್ಯಾಯಮೂರ್ತಿಗಳಾದ ಗಿರೀಶ್ ಕಠ್ಪಾಲಿಯಾ ಮತ್ತು ತೇಜಸ್ ಕರಿಯಾ ಅವರ ಪೀಠ ಸ್ಪಷ್ಟಪಡಿಸಿದೆ. ನ್ಯಾಯಮೂರ್ತಿಗಳಾದ ಗಿರೀಶ್ ಕಠ್ಪಾಲಿಯಾ ಮತ್ತು ತೇಜಸ್ ಕರಿಯಾ ಅವರ ವಿಭಾಗೀಯ ಪೀಠವು, ಪ್ರಸ್ತಾವಿತ ಧ್ವಂಸಸ್ಥಳದ ಹೊರಗೆ ತಮ್ಮ ಆಸ್ತಿಗಳು ಅಸ್ತಿತ್ವದಲ್ಲಿವೆ ಎಂದು ನೊಂದ ನಿವಾಸಿಗಳು ಮಾತ್ರ ಹೇಳಿಕೊಳ್ಳಬಹುದು ಎಂದು ಅಭಿಪ್ರಾಯಿಸಿದೆ.

ಯಾವುದೇ ಪರಿಹಾರವನ್ನು ವಿಸ್ತರಿಸಲು ದೆಹಲಿ ಹೈಕೋರ್ಟ್ ನಿರಾಕರಿಸಿದ್ದನ್ನು ಗಮನಿಸಿ ಎಎಪಿ ನಾಯಕನ ಪರವಾಗಿ ಹಾಜರಾದ ಹಿರಿಯ ವಕೀಲರು ಅರ್ಜಿಯನ್ನು ಹಿಂಪಡೆಯಲು ಅನುಮತಿ ಕೋರಿದರು. ಅರ್ಜಿಯನ್ನು ಹಿಂಪಡೆಯಲು ಅನುಮತಿ ನೀಡುವ ತನ್ನ ಆದೇಶದಲ್ಲಿ, ನ್ಯಾಯಮೂರ್ತಿ ಕಠ್ಪಾಲಿಯಾ ನೇತೃತ್ವದ ಪೀಠವು ದೆಹಲಿಯ ಓಖ್ಲಾ ಕ್ಷೇತ್ರದ ಶಾಸಕರು ಮೂರು ಕೆಲಸದ ದಿನಗಳಲ್ಲಿ ಕಾನೂನು ಕ್ರಮಗಳನ್ನು ಸಲ್ಲಿಸುವ ಹಕ್ಕನ್ನು ನಿವಾಸಿಗಳಿಗೆ ತಿಳಿಸುತ್ತಾರೆ ಎಂದು ಅಭಿಪ್ರಾಯಿಸಿದೆ. ದೆಹಲಿ ಅಭಿವೃದ್ಧಿ ಪ್ರಾಧಿಕಾರ (ಡಿಡಿಎ) ವು ಬಾಟ್ಲಾ ಹೌಸ್ ಪ್ರದೇಶದ ನಿವಾಸಿಗಳಿಗೆ ಸಾಮಾನ್ಯ ನೋಟಿಸ್ ನೀಡಿದೆ. ಇದು ನಾಗರಿಕರ ಮೂಲಭೂತ ಹಕ್ಕುಗಳನ್ನು ಕಸಿದುಕೊಳ್ಳುತ್ತದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

ಉತ್ತರಪ್ರದೇಶದ ನೀರಾವರಿ ಇಲಾಖೆಯ ನೆಲಸಮ ಯೋಜನೆಗಳನ್ನು ಸದ್ಯಕ್ಕೆ ತಡೆಹಿಡಿದು, ಕೆಲವು ನಿವಾಸಿಗಳಿಗೆ ತಾತ್ಕಾಲಿಕ ಪರಿಹಾರ ನೀಡಿದೆ ಎಂಬುದನ್ನು ದೆಹಲಿ ಹೈಕೋರ್ಟ್ ನೆನಪಿಸಿದೆ. ಸಾರ್ವಜನಿಕ ಭೂಮಿಯಲ್ಲಿನ ಅತಿಕ್ರಮಣಗಳನ್ನು ತೆರವುಗೊಳಿಸಲು ಆದೇಶಿಸಿದ ಸುಪ್ರೀಂ ಕೋರ್ಟ್ ನಿರ್ದೇಶನದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಡಿಡಿಎ ತಿಳಿಸಿದೆ. ಆದಾಗ್ಯೂ, ಅನೇಕ ನಿವಾಸಿಗಳು ಸರಿಯಾದ ಪ್ರಕ್ರಿಯೆಯನ್ನು ಅನುಸರಿಸಲಾಗಿಲ್ಲ ಎಂದು ಹೇಳಿಕೊಂಡಿದ್ದಾರೆ ಮತ್ತು ತೆರವು ಸೂಚನೆಗಳನ್ನು ಸ್ವೀಕರಿಸುವ ಮೊದಲು ಅವರಿಗೆ ಮಾಲೀಕತ್ವವನ್ನು ಸಾಬೀತುಪಡಿಸಲು ಅಥವಾ ಪರ್ಯಾಯ ಪುನರ್ವಸತಿ ನೀಡಲು ಅವಕಾಶ ನೀಡಲಾಗಿಲ್ಲ. ಈ ವಿಷಯವು ಸುಪ್ರೀಂ ಕೋರ್ಟ್‌ಗೆ ತಲುಪಿದೆ. ಆದರೆ ನ್ಯಾಯಮೂರ್ತಿಗಳಾದ ಸಂಜಯ್ ಕರೋಲ್ ಮತ್ತು ಸತೀಶ್‌ಚಂದ್ರ ಶರ್ಮಾ ಅವರ ಪೀಠವು ಜುಲೈನಲ್ಲಿ ವಿಚಾರಣೆಗೆ ನಿಯಮಿತ ಪೀಠದ ಮುಂದೆ ನಿವಾಸಿಗಳ ಅರ್ಜಿಯನ್ನು ಪಟ್ಟಿ ಮಾಡಲು ಆದೇಶಿಸಿದೆ. ಮೇ 22 ಮತ್ತು 26ರಂದು ಉತ್ತರ ಪ್ರದೇಶ ನೀರಾವರಿ ಇಲಾಖೆಯಿಂದ ಮತ್ತು ಡಿಡಿಎಯಿಂದ ಇನ್ನೊಂದು ಪ್ರತ್ಯೇಕ ನೋಟಿಸ್ ನೀಡಲಾಯಿತು. ಇದು ಪೀಡಿತ ಪ್ರದೇಶದಲ್ಲಿ ಖಾಸ್ರಾ ಸಂಖ್ಯೆ 277 ಮತ್ತು 279 ಅನ್ನು ಉಲ್ಲೇಖಿಸುತ್ತದೆ. ಈ ಕ್ರಮದ ಸಮಯ ಮತ್ತು ಹಠಾತ್ ಬದಲಾವಣೆಯು ಭಯಭೀತಗೊಳಿಸಿದೆ. ಸ್ಥಳೀಯರು ಕಾನೂನು ಪರಿಹಾರವನ್ನು ಪಡೆಯಲು ಪರದಾಡಿದರು.

# ವಿವಿ ಆವರಣದಲ್ಲಿ ಮಹಿಳಾ ಇನ್‌ಫ್ಲುಯೆನ್ಸರ್ ಶವ ಪತ್ತೆ

**ಲೂಧಿಯಾನ, ಜೂ. 12:** ಪಂಜಾಬ್‌ನ ಇನ್‌ಫ್ಲುಯೆನ್ಸರ್ ಕಾಂಚನ್ ಅಲಿಯಾಸ್ ಕಮಲ್ ಕೌರ್ ಬಟಿಂಡಾ ವೈದ್ಯಕೀಯ ವಿಶ್ವವಿದ್ಯಾಲಯದ ಆವರಣದಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಆದೇಶ್ ವೈದ್ಯಕೀಯ ವಿಶ್ವವಿದ್ಯಾಲಯದ ಆವರಣದಲ್ಲಿ ನಿಲ್ಲಿಸಿದ್ದ ಕಾರಿನೊಳಗೆ ಅವರ ಶವ ಪತ್ತೆಯಾಗಿದೆ. ಮೃತರನ್ನು ಲುಧಿಯಾನದ ಲಕ್ಷ್ಮಣ್ ನಗರದ ನಿವಾಸಿ ಕಾಂಚನ್ ಎಂದು ಗುರುತಿಸಲಾಗಿದೆ. ಆಕೆಯ ಶವ ಪತ್ತೆಯಾದ ವಾಹನವು ಆಕೆಯ ಹೆಸರಿನಲ್ಲಿ ನೋಂದಣಿಯಾಗಿದೆ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ. ಕಾಂಚನ್ ಸಾಮಾಜಿಕ ಮಾಧ್ಯಮದಲ್ಲಿ ತಮ್ಮನ್ನು ಗುರುತಿಸಿಕೊಂಡಿದ್ದರು.ಹಾಗೆಯೇ ಹಲವು ವಿವಾದದಲ್ಲಿ ಸಿಲುಕಿಕೊಂಡಿದ್ದರು.



ಪೊಲೀಸರು ತನಿಖೆ ಆರಂಭಿಸಿದ್ದು, ಇಂದು ಮರಣೋತ್ತರ ಪರೀಕ್ಷೆ ನಡೆಯಲಿದೆ. ವಿಧಿವಿಜ್ಞಾನ ತಂಡವೂ ಸ್ಥಳಕ್ಕೆ ತಲುಪಿದ್ದು, ಸಂಪೂರ್ಣ ಪರಿಶೀಲನೆ ನಡೆಸುತ್ತಿದೆ. ಸಂಶೋಧನೆಗಳ ಆಧಾರದ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಸಂಗತಿಗಳನ್ನು ತನಿಖೆ ಮಾಡಲಾಗುವುದು ಮತ್ತು ಅಪರಾಧಿಗಳನ್ನು ಪತ್ತೆಹಚ್ಚಲಾಗುವುದು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇನ್ಸ್ಟಾಗ್ರಾಂನಲ್ಲಿ 3.86 ಲಕ್ಷ ಅನುಯಾಯಿಗಳಿದ್ದಾರೆ.ಮೃತದೇಹ ಪತ್ತೆಯಾದ ಕಾರನ್ನು ಮಂಗಳವಾರದಿಂದ ಅಪರಾಧ ಸ್ಥಳದಲ್ಲಿ ನಿಲ್ಲಿಸಲಾಗಿತ್ತು. ಕಾರಿನ ಒಳಗಿನಿಂದ ಕೆಟ್ಟ ವಾಸನೆ ಬರುತ್ತಿತ್ತು. ಸಿಸಿಟಿವಿ ದೃಶ್ಯಾವಳಿ ಪರಿಶೀಲಿಸಲಾಗುತ್ತಿದೆ. ಕೊಲೆಯನ್ನು ಬೇರೆಡೆ ಮಾಡಿ ಶವವನ್ನು ತಂದು ಇಲ್ಲಿ ಇರಿಸಲಾಗಿದೆ ಎಂದು ಹೇಳಲಾಗುತ್ತಿದೆ. 7 ತಿಂಗಳ ಹಿಂದೆ, ಭಯೋತ್ಪಾದಕ ಅರ್ಶ್ ಡಲ್ಲಾ ಅವರ ಆಡಿಯೋ ವೈರಲ್ ಆಗಿತ್ತು, ಅದರಲ್ಲಿ ಅವರು ಕಮಲ್ ಕೌರ್‌ಗೆ ಬೆದರಿಕೆ ಹಾಕಲಾಗಿತ್ತು. ಈಕೆ ಸಾಮಾಜಿಕ ಮಾಧ್ಯಮದಲ್ಲಿ ಬಹಳಷ್ಟು ಕೆಟ್ಟ ಪೋಸ್ಟ್‌ಗಳನ್ನು ಹಾಕುತ್ತಾಳೆ. ಪಂಜಾಬ್‌ನ ಯುವಕರು ಅವಳಿಂದಾಗಿ ಹಾಳಾಗುತ್ತಿದ್ದಾರೆ. ಅವಳ ಕುಟುಂಬದ ಒಬ್ಬ ಸದಸ್ಯ ಸತ್ತರೆ ಯಾವುದೇ ವ್ಯತ್ಯಾಸವಾಗುವುದಿಲ್ಲ ಎಂದು ಹೇಳಿದ್ದರು.

# ಭಯೋತ್ಪಾದನೆಗೆ ಕುಮ್ಮಕ್ಕು ಪಾಕಿಸ್ತಾನದ ಪಾತ್ರ ಸ್ಪಷ್ಟ: ಭಾರತ

**ನವದೆಹಲಿ, ಜೂ.12:** ಒಸಾಮಾ ಬಿನ್ ಲಾಡೆನ್‌ಗೆ ಆಶ್ರಯ ನೀಡುವುದು ಸೇರಿದಂತೆ ಭಯೋತ್ಪಾದನೆಯನ್ನು ಬೆಂಬಲಿಸುವ ಇಸ್ಲಾಮಾಬಾದ್‌ನ ಇತಿಹಾಸವನ್ನು ಅಮೆರಿಕಕ್ಕೆ ನೆನಪಿಸಲು ಭಾರತ ಗುರುವಾರ ಪ್ರಯತ್ನಿಸಿದೆ. ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರ ಈ ಹೇಳಿಕೆಯು, ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಪಾಕಿಸ್ತಾನವು "ಅದ್ಭುತ ಭಯೋತ್ಪಾದನಾ ನಿಗ್ರಹ ಪಾಲುದಾರ" ಎಂದು ಹೇಳಿದ ಒಂದು ದಿನದ ನಂತರ ಬಂದಿದೆ ಮತ್ತು ಐಸಿಸ್ ವಿರುದ್ಧದ ಕಾರ್ಯಾಚರಣೆಗಳಲ್ಲಿ ಬೆಂಬಲ ನೀಡಿದ್ದಕ್ಕಾಗಿ ಅದನ್ನು ಶ್ಲಾಘಿಸಿದರು.

"ಪಹಲ್ಗಾಮ್ ದಾಳಿಯು ಗಡಿಯಾಚೆಗಿನ ಭಯೋತ್ಪಾದನೆಯ ಇತ್ತೀಚಿನ ಉದಾಹರಣೆ ಮಾತ್ರ ಎಂದು ನಮಗೆಲ್ಲರಿಗೂ ತಿಳಿದಿದೆ. 26/11 ತಹವ್ವೂರ್ ರಾಣಾ ಅವರ ಪಿತೂರಿಗಾರರಲ್ಲಿ ಒಬ್ಬನನ್ನು ಇತ್ತೀಚೆಗೆ ಅಮೆರಿಕದಿಂದ ಭಾರತಕ್ಕೆ ಹಸ್ತಾಂತರಿಸಲಾಯಿತು ಎಂದು ನಾನು ನಿಮಗೆ ನೆನಪಿಸುತ್ತೇನೆ" ಎಂದು ವಾರದ ಬ್ರೀಫಿಂಗ್‌ನಲ್ಲಿ ಜೈಸ್ವಾಲ್ ಹೇಳಿದರು. ಪಾಕಿಸ್ತಾನ ಮೂಲದ ಕೆನಡಾದ ಪ್ರಜೆಯಾಗಿರುವ ರಾಣಾ, ಪಾಕಿಸ್ತಾನ ಮೂಲದ ಲಷ್ಕರ್-ಎ-ತೈಬಾ (ಐಇಖಿ) ಭಯೋತ್ಪಾದಕ ಸಂಘಟನೆಯೊಂದಿಗೆ ಸಂಬಂಧ ಹೊಂದಿದ್ದು, 2008 ರ ಮುಂಬೈ ಭಯೋತ್ಪಾದಕ ದಾಳಿಯ ಪ್ರಮುಖ ಸಂಚುಕೋರರಲ್ಲಿ ಒಬ್ಬರಾಗಿದ್ದರು. "ಒಸಾಮಾ ಬಿನ್ ಲಾಡೆನ್‌ಗೆ ಪಾಕಿಸ್ತಾನ ಆಶ್ರಯ ನೀಡಿತ್ತು ಎಂಬುದನ್ನು ನಾವು ಯಾರೂ ಮರೆತಿಲ್ಲ ಎಂಬುದು ಸ್ಪಷ್ಟ. ಒಸಾಮಾ ಬಿನ್ ಲಾಡೆನ್ ಅನ್ನು ಪತ್ತೆಹಚ್ಚಲು ಸಹಾಯ ಮಾಡಿದ ಡಾ. ಶಕೀಲ್ ಅಫ್ರಿದಿ ಇನ್ನೂ ಪಾಕಿಸ್ತಾನಿ ಮಿಲಿಟರಿಯ ಜೈಲಿನಲ್ಲಿದ್ದಾರೆ ಎಂಬುದು ಆ ವ್ಯಕ್ತಿ ಮತ್ತು ನಿಮಗೆ ತಿಳಿದಿರುವುದು ಗಮನಾರ್ಹ" ಎಂದು ಅವರು ಹೇಳಿದರು. ಅಲ್-ಖೈದಾ ಭಯೋತ್ಪಾದಕ ಜಾಲದ ಮುಖ್ಯಸ್ಥ ಲಾಡೆನ್ನನ್ನು ಮೇ 2011 ರಲ್ಲಿ ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್ ಬಳಿಯ ಅಬೋಟಾಬಾದ್‌ನಲ್ಲಿರುವ ವಸತಿ ಮನೆಯಲ್ಲಿ ಮತ್ತು ಮಿಲಿಟರಿ ಕಂಟೋನ್ಮೆಂಟ್‌ಗೆ ಹತ್ತಿರದಲ್ಲಿ ನಡೆಸಿದ ಶಸ್ತ್ರಚಿಕಿತ್ಸಾ ಕಾರ್ಯಾಚರಣೆಯಲ್ಲಿ ಅಮೆರಿಕದ ವಿಶೇಷ ಪಡೆಗಳು ಪತ್ತೆಹಚ್ಚಿ ಕೊಂದವು ಎಂದರು.

# ಪಾಕ್ ಪರ ಬೇಹುಗಾರಿಕೆ: ಜ್ಯೋತಿ ಜಾಮೀನು ಅರ್ಜಿ ತಿರಸ್ಕೃತ

**ನವದೆಹಲಿ, ಜೂ. 12:** ಪಾಕಿಸ್ತಾನ ಪರ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಮೇ 17 ರಂದು ಬಂಧಿಸಲ್ಪಟ್ಟ ಯೂಟ್ಯೂಬರ್ ಜ್ಯೋತಿ ಮಲ್ಹೋತ್ರಾ ಅವರಿಗೆ ಹರಿಯಾಣ ನ್ಯಾಯಾಲಯ ಬುಧವಾರ ಜಾಮೀನು ನಿರಾಕರಿಸಿದೆ . ಜೂನ್ 23 ರವರೆಗೆ ನ್ಯಾಯಾಂಗ ಬಂಧನವನ್ನು ವಿಸ್ತರಿಸಿದ ಒಂದು ದಿನದ ನಂತರ ಜ್ಯೋತಿ ಜಾಮೀನು ಅರ್ಜಿ ಸಲ್ಲಿಸಿದ್ದರು.



ವಿದೇಶದ ಲಾಭಕ್ಕಾಗಿ ಬೇಹುಗಾರಿಕೆ ಮತ್ತು ತಪ್ಪು ಮಾಹಿತಿ ಸಂವಹನಕ್ಕೆ ಸಂಬಂಧಿಸಿದ ಅಧಿಕೃತ ರಹಸ್ಯ ಕಾಯ್ದೆಯ ವಿಭಾಗಗಳು ಮತ್ತು ಭಾರತದ ಸಾರ್ವಭೌಮತ್ವ, ಏಕತೆ ಮತ್ತು ಸಮಗ್ರತೆಗೆ ಅಪಾಯವನ್ನುಂಟುಮಾಡುವ ಕೃತ್ಯಗಳನ್ನು ಶಿಕ್ಷಿಸುವ ಭಾರತೀಯ ನ್ಯಾಯ ಸಂಹಿತಾದ ನಿಬಂಧನೆಯ ಅಡಿಯಲ್ಲಿ ಅವರ ಮೇಲೆ ಆರೋಪ ಹೊರಿಸಲಾಗಿದೆ.

2023 ರಲ್ಲಿ ಜ್ಯೋತಿ ಮಲ್ಹೋತ್ರಾ ಪಾಕಿಸ್ತಾನಕ್ಕೆ ಪ್ರಯಾಣಿಸಲು ವೀಸಾ ಪಡೆದರು ಮತ್ತು ಎರಡು ಬಾರಿ ಅಲ್ಲಿಗೆ ಪ್ರಯಾಣಿಸಿದರು ಎಂದು ಪೊಲೀಸರು ತಿಳಿಸಿದ್ದಾರೆ. ಅವರ ಒಂದು ಪ್ರವಾಸದ ಸಮಯದಲ್ಲಿ, ಅವರು ಇಬ್ಬರು ಪಾಕಿಸ್ತಾನಿ ಗುಪ್ತಚರ ಅಧಿಕಾರಿಗಳಾದ ಶಕೀರ್ ಮತ್ತು ರಾಣಾ ಶಹಬಾಜ್ ಅವರನ್ನು ಪರಿಚಯ ಮಾಡಿಕೊಂಡರು ಎಂದು ಆರೋಪಿಸಲಾಗಿದೆ. ಜ್ಯೋತಿ ಪಾಕಿಸ್ತಾನಿ ಅಧಿಕಾರಿಗಳೊಂದಿಗೆ ಭಾರತದ ಪ್ರಮುಖ ಸ್ಥಾಪನೆಗಳ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಹಂಚಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

ಬುಧವಾರ, ಜ್ಯೋತಿ ಅವರ ವಕೀಲರು ಎಫ್‌ಐಆರ್‌ನಲ್ಲಿ ಪಟ್ಟಿ ಮಾಡಲಾದ ಆರೋಪಗಳನ್ನು ಪ್ರಶ್ನಿಸಿ, ಬೇಹುಗಾರಿಕೆ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಯಾವುದೇ ಬಲವಾದ ಪುರಾವೆಗಳನ್ನು ಪ್ರಸ್ತುತಪಡಿಸಲು ಪ್ರಾಸಿಕ್ಯೂಷನ್ ವಿಫಲವಾಗಿದೆ ಎಂದು ವಾದಿಸಿದರು. ಭಾರತೀಯ ನ್ಯಾಯ ಸಂಹಿತಾ ಜಾರಿಗೆ ಬರುವ ಮೊದಲು ಮತ್ತು ಭಾರತೀಯ ದಂಡ ಸಂಹಿತೆ ಇನ್ನೂ ಅನ್ವಯವಾಗುತ್ತಿದ್ದಾಗ 2023 ರಲ್ಲಿ ಜ್ಯೋತಿ ಪಾಕಿಸ್ತಾನಿ ಹೈಕಮಿಷನ್‌ಗೆ ಭೇಟಿ ನೀಡಿದ್ದರು ಎಂದು ವಕೀಲರು ಹೇಳಿದ್ದರು.

ಎಫ್‌ಐಆರ್‌ನಲ್ಲಿ ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ 152 ಅನ್ನು ಸೇರಿಸಲಾಗಿದ್ದು, ಅದು ಈ ಹಿಂದೆ ಭಾರತೀಯ ದಂಡ ಸಂಹಿತೆಯ ಅಡಿಯಲ್ಲಿ ಸೆಕ್ಷನ್ 124೦ ಆಗಿತ್ತು. ಆದರೆ ಸುಪ್ರೀಂಕೋರ್ಟ್ ಆ ಸೆಕ್ಷನ್ ಅನ್ನು ತಡೆಹಿಡಿದಿತ್ತು ಎಂದು ಮಲ್ಹೋತ್ರಾ ಅವರ ವಕೀಲರು ವಾದಿಸಿದ್ದಾರೆ. ಜ್ಯೋತಿ ಅವರಿಗೆ ಅಧಿಕೃತ ರಕ್ಷಣಾ ಮಾಹಿತಿ ಸಿಗಲು ಯಾವುದೇ ಸಾಧ್ಯತೆಯಿಲ್ಲದಿದ್ದರೂ, ಪಾಕಿಸ್ತಾನದ ಗುಪ್ತಚರದೊಂದಿಗೆ ಸಂಪರ್ಕ ಹೊಂದಿರುವ ವ್ಯಕ್ತಿಗಳೊಂದಿಗೆ ಅವರು ಸಂಪರ್ಕದಲ್ಲಿದ್ದರು ಎಂದು ಹಿಸಾರ್ ಪೊಲೀಸರು ಹೇಳಿದ್ದಾರೆ. ಬೇಹುಗಾರಿಕೆ ಆರೋಪಗಳ ಜೊತೆಗೆ, ಜ್ಯೋತಿ ಅವರು ತಮ್ಮ ವಿಚಾರದ ಮೂಲಕ ಪಾಕಿಸ್ತಾನದ ಬಗ್ಗೆ ಅನುಕೂಲಕರ ಇಮೇಜ್ ಅನ್ನು ಪ್ರಚಾರ ಮಾಡಿದ್ದಾರೆ ಎಂಬ ಆರೋಪವೂ ಇದೆ. ಏಪ್ರಿಲ್ 22 ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಪಾಕಿಸ್ತಾನಕ್ಕಾಗಿ ಬೇಹುಗಾರಿಕೆ ನಡೆಸಿದ ಮತ್ತು ಆಪರೇಷನ್ ಸಿಂಧೂರ್ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಸೋರಿಕೆ ಮಾಡಿದ ಆರೋಪದ ಮೇಲೆ ದೇಶಾದ್ಯಂತ ಕನಿಷ್ಠ 16 ಜನರನ್ನು ಬಂಧಿಸಲಾಯಿತು.

# ಗುಜರಾತ್: ಪಡಿತರವಿಲ್ಲದೆ ಬಳಲುತ್ತಿರುವ 10 ಲಕ್ಷ ಜನರು

**ಅಹಮದಾಬಾದ್, ಜೂ. 12:** ಇ-ಕೆವೈಸಿ ಲೋಪದಿಂದಾಗಿ ಗುಜರಾತ್‌ನ 10 ಲಕ್ಷ ಜನರು ಪಡಿತರವಿಲ್ಲದೆ ಬಳಲುತ್ತಿದ್ದಾರೆ. 2025ರ ಏಪ್ರಿಲ್, ಮೇ ಮತ್ತು ಜೂನ್‌ನಲ್ಲಿ ಸುಮಾರು 10 ಲಕ್ಷ ಫಲಾನುಭವಿಗಳು ಅಪೂರ್ಣ ಕೆವೈಸಿ ಔಪಚಾರಿಕತೆಗಳಿಂದಾಗಿ ಪಡಿತರವನ್ನು ಪಡೆಯಲು ಸಾಧ್ಯವಾಗಲಿಲ್ಲ ಎಂದುಎಂದು ಖಿಓಖಇ ವರದಿ ಮಾಡಿದೆ. ಗರ್ಭಾವಸ್ಥೆಯ ಹಂತದಿಂದ ಪ್ರೌಢಾವಸ್ಥೆಯವರೆಗೆ ಪ್ರತಿಯೊಬ್ಬ ನಾಗರಿಕರಿಗೂ ಆಹಾರವನ್ನು ಖಾತರಿಪಡಿಸುವುದು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಲ್ಲಿ ಕಡ್ಡಾಯವಾಗಿದೆ. ಆದಾಗ್ಯೂ, ಗುಜರಾತ್ನಲ್ಲಿ ಈ ಹಕ್ಕನ್ನು ರಕ್ಷಿಸಲು ಉದ್ದೇಶಿಸಲಾದ ವ್ಯವಸ್ಥೆಯಲ್ಲಿ ಬಿರುಕು ಬಿಟ್ಟಿದೆ ಎಂದು ವರದಿ ಸೂಚಿಸಿದೆ. ನೀತಿಯ ಭರವಸೆಗಳು ಮತ್ತು ವಾಸ್ತವ ವಿತರಣೆಯ ನಡುವಿನ ಅಂತರವನ್ನು ಈ ಬೃಹತ್ ಲೋಪ ಬಹಿರಂಗಪಡಿಸಿದ್ದು, ಇದರಿಂದಾಗಿ ಲಕ್ಷಾಂತರ ದುರ್ಬಲ ನಾಗರಿಕರು ಅಧಿಕಾರಶಾಹಿ ಅಡೆತಡೆಗಳ ನಡುವೆ ಹಸಿವಿನಿಂದ ಬಳಲುತ್ತಿದ್ದಾರೆ. ಅನ್ನ ಸುರಕ್ಷಾ ಅಧಿಕಾರ ಅಭಿಯಾನದ ಪ್ರಕಾರ, ಕೇಂದ್ರದ NDPS ಪೋರ್ಟಲ್ ಗುಜರಾತ್‌ನಲ್ಲಿ 3.82 ಕೋಟಿ ಫಲಾನುಭವಿಗಳನ್ನು ಪಟ್ಟಿ ಮಾಡಿದೆ. ಆದರೂ, ಕಳೆದ ಮೂರು ತಿಂಗಳುಗಳಲ್ಲಿ, ನಿಜವಾದ ಫಲಾನುಭವಿಗಳ ಸಂಖ್ಯೆ ಕೇವಲ 3.72 ಕೋಟಿಯಿಂದ 3.76 ಕೋಟಿಯವರೆಗೆ ಇದೆ. ಸುಮಾರು 10 ಲಕ್ಷ ಅರ್ಹ ಜನರು ಈ ಯೋಜನೆ ಪ್ರಯೋಜನದಿಂದ ವಂಚಿತರಾಗಿದ್ದಾರೆ. ಕಡ್ಡಾಯ ಇ-ಕೆವೈಸಿಯಲ್ಲಿ ವಿಳಂಬ ಮತ್ತು ದೋಷಗಳು ಇದರ ಲೋಪಕ್ಕೆ ಕಾರಣ ಎಂದು ಹೇಳಲಾಗಿದ್ದರೂ, ಅದು ಒಂದೇ ಸಮಸ್ಯೆಯಲ್ಲ ಎಂದು ವರದಿ ಉಲ್ಲೇಖಿಸಿದೆ. ನಿರ್ದಿಷ್ಟ ಅವಧಿಯವರೆಗೆ ಪಡಿತರ ಅಂಗಡಿಗಳಿಂದ ಆಹಾರ ಧಾನ್ಯವನ್ನು ಖರೀದಿಸದ ಸೈಲೆಂಟ್ ಪಡಿತರ ಚೀಟಿಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಕೂಡಾ ಮತ್ತೊಂದು ಬಿಕ್ಕಟ್ಟನ್ನು ಸೃಷ್ಟಿಸಿದೆ. ಕಳೆದ ಮೂರು ತಿಂಗಳಲ್ಲಿ ಗುಜರಾತ್‌ನಲ್ಲಿ 4 ಲಕ್ಷಕ್ಕೂ ಹೆಚ್ಚು ಸೈಲೆಂಟ್ ಕಾರ್ಡ್‌ಗಳು ದಾಖಲಾಗಿವೆ ಎಂದು ವರದಿ ಹೇಳಿದೆ. ಅನ್ನಾ ಸುರಕ್ಷಾ ಅಧಿಕಾರ ಅಭಿಯಾನ ಸಂಯೋಜಕಿ ಪಂಕ್ತಿ ಜೋಗ್ ಮಾತನಾಡಿ, ದಾಖಲೆಯಲ್ಲಿ ಜನರು ಪಡಿತರ ಸಂಗ್ರಹಿಸುವುದನ್ನು ನಿಲ್ಲಿಸಿದಂತೆ ಕಾಣುತ್ತದೆ. ಆದರೆ, ಅಪೂರ್ಣ ಇ-ಕೆವೈಸಿಯಿಂದಾಗಿ ಪಡಿತರ ವಿತರಕರು ತಮ್ಮನ್ನು ಹಿಂತಿರುಗಿ ಹೋಗುವಂತೆ ಹೇಳುತ್ತಿದ್ದಾರೆ ಎಂದು ಕುಟುಂಬಗಳು ಹೇಳಿಕೊಳ್ಳುತ್ತಿವೆ. ಅವರು ಆಹಾರವಿಲ್ಲದೆ ಉಳಿದಿದ್ದು, ವ್ಯವಸ್ಥೆಯ ಕಾರಣಕ್ಕೆ ಅವರ ಪಡಿತರ ಚೀಟಿಗಳು ನಿಷ್ಕ್ರಿಯವಾಗಿದೆ ಎಂದು ಹೇಳಿದ್ದಾರೆ. ಇದು ತೀಕ್ಷ್ಣವಾದ ಮತ್ತು ಗಂಭೀರ ಪ್ರಶ್ನೆಯನ್ನು ಹುಟ್ಟುಹಾಕುತ್ತದೆ. ಇ-ಕೆವೈಸಿ ಸಮಸ್ಯೆಗಳಿಂದಾಗಿ ಜನರಿಗೆ ಪಡಿತರ ನಿರಾಕರಿಸಲ್ಪಟ್ಟರೆ ಮತ್ತು ಅವರ ಕಾರ್ಡ್‌ಗಳನ್ನು ಸೈಲೆಂಟ್ ಎಂದು ಗುರುತಿಸಿದರೆ, ಲಕ್ಷಾಂತರ ಜನರನ್ನು ಅನೈಚ್ಛಿಕ ಹಸಿವಿಗೆ ತಳ್ಳುವಂತೆ ಮಾಡಿದ ಹೊಣೆ ಯಾರು ಹೊತ್ತುಕೊಳ್ಳಬೇಕು ಪ್ರತಿ ಪಡಿತರ ಚೀಟಿ ಸಾಮಾನ್ಯವಾಗಿ ಮೂರು ಅಥವಾ ಹೆಚ್ಚಿನ ಕುಟುಂಬ ಸದಸ್ಯರಿದ್ದರೆ, ಬಾಧಿತ ವ್ಯಕ್ತಿಗಳ ನಿಜವಾದ ಸಂಖ್ಯೆ 10 ಲಕ್ಷಕ್ಕೂ ಹೆಚ್ಚಿರಬಹುದು, ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಗುಜರಾತ್ ರಾಜ್ಯವು ಏಪ್ರಿಲ್ 1, 2016 ರಿಂದ ಈ ಕಾಯ್ದೆಯನ್ನು ಜಾರಿಗೆ ತಂದಿದ್ದು, ತನ್ನ ಗ್ರಾಮೀಣ ಜನಸಂಖ್ಯೆಯ 75% ಮತ್ತು ನಗರದ 50%ರಷ್ಟು ಜನರಿಗೆ ಸಬ್ಸಿಡಿ ಧಾನ್ಯಗಳು 2/ಕೆಜಿಗೆ ಗೋಧಿ, 3/ಕೆಜಿಗೆ ಅಕ್ಕಿ ಮತ್ತು 1/ಕೆಜಿಗೆ ಕಡಿಮೆ ಸಂಸ್ಕರಿತ ಧಾನ್ಯಗಳು ನೀಡುವ ಭರವಸೆ ನೀಡಲಾಗಿತ್ತು. ಹೆಚ್ಚುವರಿ ಪೋಷಣೆಗಾಗಿ ದ್ವಿದಳ ಧಾನ್ಯಗಳು, ಬೇಳೆಕಾಳು ಮತ್ತು ಎಣ್ಣೆಯೊಂದಿಗೆ ಇದನ್ನು ವಿಸ್ತರಿಸಲು ರಾಜ್ಯಗಳಿಗೆ ಅವಕಾಶ ನೀಡಲಾಯಿತು.

# ಮೂಡಬಿದರೆಯ ಜೈನ ವಸತಿ ಪದವಿಪೂರ್ವ ಕಾಲೇಜು ಶೈಕ್ಷಣಿಕ ತರಗತಿಗಳು ಶುಭಾರಂಭ

**ಮುಂಬಯಿ, ಜೂ.12:** ಸ್ವಸ್ತಿಶ್ರೀ ಜೈನ ವಸತಿ ಪದವಿ ಪೂರ್ವ ಕಾಲೇಜು ಮೂಡಬಿದರೆ ಇಲ್ಲಿ ದಿನಾಂಕ ಗುರುವಾರ 12.6.2025ರಂದು 2025-26ನೆ ಸಾಲಿನ ಶೈಕ್ಷಣಿಕ ತರಗತಿಗಳು ಶುಭಾರಂಭ ಗೊಂಡಿತ್ತು. ಜಗದ್ಗುರು ಡಾ, ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟರಕ ಪಂಡಿತಾಚಾರ್ಯ ಪಟ್ಟಾಚಾರ್ಯವರ್ಯ ಮಹಾಸ್ವಾಮೀಜಿ ಯವರು ಅಧ್ಯಕ್ಷತೆ ವಹಿಸಿ ಉದ್ಘಾಟಿಸಿ ವಿಧ್ಯೆ ಯಾರೂ ಅಪಹರಿಸಲಾಗದ ಅಮೂಲ್ಯ ನಿಧಿ ಅದನ್ನು ಉತ್ತಮ ಮನಸ್ಸೆಂಬ ಕುಂಭ ದಲ್ಲಿ ಭೋದಕ ರ ಅಮೃತ ವಾಣಿ ತುಂಬಿ ಉದಾಸೀನ ಮರೆವು ಎಂಬ ಕೊಳೆಯನ್ನು ತೊಳೆದು



ಯಶಸ್ವಿ ಜೀವನಕ್ಕಾಗಿ ಉಪಯೋಗಿಸಿ ಎಂದು ಆಶೀರ್ವಾದ ನೀಡಿದರು ಇಂದಿನ ಕಾರ್ಯಕ್ರಮವು ಬೆಳಗ್ಗೆ 10 ಗಂಟೆಗೆ ರಮಾ ರಾಣಿ ಶೋಧ ಸಂಸ್ಥಾನ ಬಳಿ ಸ್ವಸ್ತಿಶ್ರೀ ಭಟ್ಟಾರಕ ಭವನ ದಲ್ಲಿ ಶುಭಾರಂಭಗೊಂಡಿತು.

ಧವಳತ್ರಯ ಜೈನಕಾಶಿ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳಿಗೆ ಲೇಖನ ಸಾಮಗ್ರಿ ನೀಡಲಾಯಿತು ಮೂಡಬಿದ್ರೆ ಎಂ.ಸಿ.ಸಿ.ಬ್ಯಾಂಕ್‌ನ ಅಧ್ಯಕ್ಷರೂ ಸಂಸ್ಥೆಯ ಆಡಳಿತ ಮಂಡಳಿ ಯಾವರೂ ಅದಯಂ ಬಾಹುಬಲಿ ಪ್ರಸಾದ್ ಅವರು 2024_25ರ ಶೈಕ್ಷಣಿಕ ಸಾಲಿನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಾದ ಕು ಮನಸ್ವಿನಿ, ಶ್ರೀ ರೋಹಿತ್, ಕು ಶ್ರುತಿ ಇವರಿಗೆ ನಗದು ಮೊತ್ತ ಬಹುಮಾನ ವಿತರಿಸಿ, ವಿದ್ಯಾರ್ಥಿಗಳಿಗೆ ವಿಧ್ಯೆ ಯ ಮಹತ್ವ ವನ್ನು ತಿಳಿಸಿಕೊಟ್ಟರು.

ಮೂಡಬಿದಿರೆ ಯ ಖ್ಯಾತ ನ್ಯಾಯವಾದಿಗಳು ಹಾಗೂ ನೋಟರಿ ಹಾಗೂ ಸಂಸ್ಥೆ ಯ ನೂತನ ಬಾಲಕ ಪಾಲಕ ಸಮಿತಿ ಅಧ್ಯಕ್ಷ ರಾಗಿ ನಿಯುಕ್ತ ಗೊಂಡ ಶ್ವೇತಾ ಜೈನ್ ಇವರು ಇನ್ನರವೀಲ್ ಕ್ಲಬ್ ನ ಮೂಲಕ ಕಾಲೇಜ್‌ಗೆ ಕುಡಿಯುವ ನೀರಿನ ಡ್ರಮ್ ಅನ್ನು ತಮ್ಮ ತಂಡ ಸದಸ್ಯ ರೊಂದಿಗೆ ಕೊಡುಗೆ ಯಾಗಿ ನೀಡಿ ಮಾತಾಡಿದ ಅವರು.ಮೂಡು ಬಿದಿರೆ ವಿದ್ಯಾರ್ಥಿಗಳ ಎಲ್ಲಾ ಬೇಡಿಕೆ ಗಳನ್ನು ಈಡೇರಿಸುವ ವಿದ್ಯಾ ಕೇಂದ್ರ ಎಂದರು. ಸಂಜಯಂತ ಕುಮಾರ್ ಶೆಟ್ಟಿ ಶುಭ ಕೋರಿದರು ವಿದ್ಯಾರ್ಥಿಗಳಿಗೆ ದವಳತ್ರಯ ಟ್ರಸ್ಟ್ ವತಿಯಿಂದ ಉಚಿತ ಪುಸ್ತಕಗಳನ್ನು ನೀಡಲಾಯಿತು.

ಕಾರ್ಯಕ್ರಮ ದಲ್ಲಿ ಇನ್ನರ್‌ವೀಲ್ ಪದಾಧಿಕಾರಿಗಳಾದ ಅನಿತಾ ಪೃಥ್ವಿರಾಜ್, ಸುಮಂಗಲ ತಂತ್ರಿ, ದಿವ್ಯ ಹರ್ಷಪಡಿವಾಳ, ಶೋಭಾ ಸಿಕ್ವೆರಾ, ರೇಷ್ಮಾ ಮಹೇಂದ್ರವರ್ಮ, ವೀಣಾ ರತ್ನರಾಜ್, ಪದ್ಮಜಾ ಮಹೇಂದ್ರ ಉಪಸ್ಥಿತರಿದ್ದರು.

ಉಪನ್ಯಾಸಕರಾದ ಹಿತೇಶ್ ರಾವ್ ಕಾರ್ಯಕ್ರಮ ನಿರೂಪಿಸಿದರು. ಸುಷ್ಮಾ ಸ್ವಾಗತಿದರು. ಉಪನ್ಯಾಸಕಿ ಸುಜಾತಾ ಧನ್ಯವಾದವಿತ್ತರು.

# ಅಹ್ಮದಾಬಾದ್ ವಿಮಾನ ದುರಂತ: ಆಕಾಶದಲ್ಲಿ ನಶಿಸಿದ ಕನಸುಗಳು, ಮಾನವತೆ ಕಣ್ಣೀರಿಡುವ ಕ್ಷಣ

**ಮುಂಬಯಿ, ಜೂ.12:** ಜೂ.12ರಂದು ಬೆಳಗಿನ ಆಕಾಶದಲ್ಲಿ ಮಂಜು ಕವಿದ ಮೋಡಗಳ ಮಧ್ಯೆ ತಮ್ಮ ಕನಸುಗಳೊಂದಿಗೆ ಅಗಸಕ್ಕೇರಿದವರ ಹಾರಾಟವು ನಸುಕಿನ ಕನಸಾಗದೆ ಕಗ್ಗತ್ತಲೆಯಾಗಿ ದುಃಖದ ಕಥೆಯಾಗಿದೆ. ಏರ್ ಇಂಡಿಯಾ ಫ್ಲೈಟ್ ಎಐ171, ಅಹ್ಮದಾಬಾದ್‌ನಿಂದ ಲಂಡನ್‌ಗೆ ತನ್ನ ಪಯಣ ಆರಂಭಿಸಿತ್ತು. ಬೋಯಿಂಗ್ 787 ಹೆಸರಾಂತ ಡ್ರೀಮ್‌ಲೈನರ್. ಆದರೆ ಆ 'ಡ್ರೀಮ್' ಈ ದಿನ ಶವಗಳ ರಾಶಿಯೊಂದಿಗೆ ಸುಟ್ಟು ಭಸ್ಮವಾಯಿತು.



ವಿಮಾನ ಹಾರಿದ ಕೆಲ ನಿಮಿಷಗಳಲ್ಲೇ ಎಲ್ಲವೂ ಬದಲಾಯಿತು ಪೈಲಟ್‌ನ ತುರ್ತುಕರೆ ನನಗೆ ಸಹಾಯ ಮಾಡಿ ಗಗನವನ್ನೇ ಕಂಪಿತಗೊಳಿಸಿತು. ನೋಡುತ್ತಿದ್ದಂತೆಯೇ ಮೇಘನಿ ನಗರ ಪ್ರದೇಶದ ಮೇಲೆ ವಿಮಾನ ಪತನಗೊಂಡಿತು. ತಕ್ಷಣವೇ ಹೊತ್ತಿ ಉರಿದ ದೇಹಗಳು, ಮನೆ, ಮಂದಿರ, ರಸ್ತೆಗಳಲ್ಲಿ ಓಡಿದ ಜನರ ಕಿರುಚಾಟ ಎಲ್ಲವೂ ನಿಶ್ಯಬ್ದತೆಯ ಕರಾಳ ಚಿತ್ರವಾಗಿ ಮನದಲ್ಲಿ ಉಳಿಯಿತು. ನಂತರ ಸಿಕ್ಕಿದ್ದು ಮೌನ, ಹೊಗೆ ಮತ್ತು ಶೂನ್ಯತೆ.

ಅಲ್ಲಿ ಇದ್ದವನು ತಂದೆ ಆಗಿರಬಹುದು, ತಾಯಿ ಆಗಿರಬಹುದು, ವಿದ್ಯಾರ್ಥಿನಿ ಆಗಿರಬಹುದು ಯುವಕನಾಗಿರಬಹುದು ಯುವತಿ ಆಗಿರಬಹುದು ಆದರೆ ಈ ದುರಂತ ಅವರ ಹೆಸರುಗಳನ್ನು ತಲೆಬರಹವನ್ನಾಗಿ ಮಾಡಿದ್ದು ಮಾತ್ರ ನಿಜ. ಪ್ರಯಾಣಿಕರು ವಿಮಾನ ಏರಿದಾಗ 241 ಕನಸುಗಳು ಕೂಡ ವಿಮಾನ ಏರಿದವು. ಇಂದು 241 ವೇದನೆಯ ಕರೆಗಳು ಆಕಾಶದಲ್ಲಿ ಕರೆಯುತ್ತಿವೆ 'ಬಾ ನನ್ನ ಉಳಿಸು' ಅದು ಸಾಧ್ಯವೇ 241 ಪ್ರಯಾಣಿಕರು ಹಾಗೂ ಅವರ 241 ಕಥೆಗಳು.... ನಿಂತ ನೀರಾಗಿದೆ. ಅವರ ಮನೆಯ ಬಾಗಿಲು ಇನ್ನೂ ತೆರೆದಿದೆ ಆದರೆ ಅವರು ಮರಳಿ ಬರುವ ಬಾಗಿಲು ಮಾತ್ರ ಮುಚ್ಚಿ ಹೋಗಿದೆ.!

ಅವರಲ್ಲಿ ಕೆಲವು ಮಕ್ಕಳು ಮೊದಲ ಬಾರಿಗೆ ವಿಮಾನ ಏರಿದ್ದರು. ಹಾರುವ ಬದುಕನ್ನು ನೋಡುವ ತೀವ್ರ ಆಸೆ ಆದರೆ ಇಂದು ಅದು ಅಂತ್ಯ ಕಂಡಿತು. ಅವರ ತಾಯಂದಿರು ಅವರ ಕೈ ಹಿಡಿದಿದ್ದರೂ, ಮರಣದ ಹೊತ್ತಿನಲ್ಲಿ ಆ ಕೈಗಳು ಬಿಸುಟುಹೋಗಿದ್ದವು.

**ತಾತನ ಕೈಯಲ್ಲಿ ಮೊಬೈಲ್:** ಕೊನೆಯ ವಾಯ್ಸ್ ಮೆಸೇಜ್ ಪುಟ್ಟ ಮೊಮ್ಮಗನಿಂದ ತಾತಾ ನಾನೀಗ ಹಾರ್ತಾ ಇದ್ದೀನಿ ಈ ಪ್ರಶ್ನೆಗೆ ಉತ್ತರ ಕೊಡ ಬೇಕಾದರೂ ಅದಕ್ಕಿಂತ ಮುಂಚೆ, ಆ ತಾತನ ಕಣ್ಣೀರಿಗೆ ಆಸರೆ ಬೇಕು. ಒಬ್ಬ ತಾಯಿ,ಮಗಳ ಬಳಿಗೆ ಲಂಡನ್‌ಗೆ ಹೊರಟಿದ್ದಳು. ಮಗಳು ಕಳೆದ ತಿಂಗಳು ಮಗುವಿಗೆ ಜನ್ಮ ನೀಡಿದ್ದಳು. ಈ ತಾಯಿ ಕೈಯಲ್ಲಿ ಇತ್ತು ಮಗುವಿಗೆ ಚಿನ್ನದ ಬಳೆ. ಆಸೆಯೊಂದಿಗೆ ಬಾರದೂರಿಗೆ ಪಯಣ.

ವಿಮಾನದಲ್ಲಿ 6 ತಿಂಗಳ ಗರ್ಭಿಣಿ ಯುವತಿ ಮತ್ತು ಅವಳ ಪತಿ ಇದ್ದರು. ಅವರು ಲಂಡನ್‌ಗೆ ಹೊಸ ಬದುಕು ಕಟ್ಟಲು ಹೊರಟಿದ್ದರು. ತಾಯಿ ಕಾಲನ್ನು ಮುಟ್ಟಿ ಆಶೀರ್ವಾದದೊಂದಿಗೆ ಹೊರಟ ಅವರಿಗೆ ಆಶೀರ್ವಾದ ಫಲಿಸಲಿಲ್ಲ. ಇಂತಹ ಇನ್ನೂ 241 ಕತೆಗಳು ಮಣ್ಣಾಗಿ ಹೋಗಿದೆ. ಪ್ರತಿಯೊಂದು ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರು ಕೇವಲ ಟಿಕೆಟ್‌ನ ಸಂಖ್ಯೆಯಲ್ಲ, ಅವರು ಒಂದು ಕುಟುಂಬ, ಒಂದು ಕನಸು, ಒಂದು ಕಥೆ. ಒಂದು ಜೀವನ! ಈ ದುಃಖದ, ವೇದನೆ ಮತ್ತು ಕಷ್ಟದ ನಡುವೆ, ಕೂಡ ಮಾನವೀಯತೆಯ ರೆಕ್ಕೆಗಳು ಹಾರಾಡುತ್ತಿವೆ, ತಕ್ಷಣದ ನೆರವು, ಅಪರಿಚಿತರ ಸಹಾಯ, ಔದ್ಯೋಗಿಕರು ತಮ್ಮ ಜೀವದ ಹಂಗಿಲ್ಲದೇ ಬೆಂಕಿಗೆ ನುಗ್ಗಿ ಉಳಿಸಿದ ಕೆಲವರ ಕಥೆಗಳು ಮಾದರಿಯಾಗುತ್ತಿದೆ.

### ಇಂದು ದೇಶ ಕಣ್ಣೀರಿಡುತ್ತಿದೆ?

ಇಂದು ಅಹ್ಮದಾಬಾದ್ ಅಳುತ್ತಿದೆ. ಲಂಡನ್ ಕಣ್ಣೀರಿಟ್ಟು ಕರೆದಿದೆ. ಭಾರತ ತನ್ನ ಮಕ್ಕಳನ್ನು ಕಳೆದುಕೊಂಡ ದುಃಖದಲ್ಲಿ ತೀವ್ರವಾಗಿ ಮರುಗುತಿದೆ. ಹಾರಿದವರು ಮರಳಲಿಲ್ಲ, ಆದರೆ ನೆನಪುಗಳಾಗಿ ಉಳಿದಿದ್ದಾರೆ ಬದುಕು ಹಾಗೇನೆ...! ಈ ದುರಂತದಲ್ಲಿ ನಾವು ಕಳೆದುಕೊಂಡವರು ಕೇವಲ ಸಂಖ್ಯೆ ಅಲ್ಲ ಅವರು ಒಂದೊಂದು ಕುಟುಂಬದ ದೀಪಗಳು. ಒಂದೊಂದು ಮನೆಯ ಹೊಳೆಯುವ ಕನಸುಗಳು. ಅವರು ಹತ್ತಿರದವರು ನಮ್ಮೊಳಗೇ ಇರುವವರು. ಹಾರಿದ ಹಕ್ಕಿಗಳು ಮರಳಲಿಲ್ಲ, ಆದರೆ ನೆನಪಾಗಿ ಉಳಿದಿದ್ದಾರೆ ಭಾವಪೂರ್ಣ ಶ್ರದ್ಧಾಂಜಲಿ!

ದಿವಾಕರ್ ಶೆಟ್ಟಿ ಅಡ್ಯಾರ್

ಜಾತಿಗಣತಿಗಾಗಿ 10 ವರ್ಷಗಳಿಂದ ಹಣ ಖರ್ಚು, 2 ಆಯೋಗಗಳ ರಚನೆ

# ಸರ್ಕಾರದ ವಿರುದ್ಧ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತೀವ್ರ ವಾಗ್ದಾಳಿ



**ಮಂಗಳೂರು, ಜೂ.12–** ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಹೊಸದಾಗಿ ಜಾತಿ ಗಣತಿ ನಡೆಸುವ ಮೂಲಕ ಅಲ್ಪಸಂಖ್ಯಾತರ ಮೀಸಲಾತಿಯನ್ನು ಹೆಚ್ಚಿಸಲು ಪಿತೂರಿ ನಡೆಸುತ್ತಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಗುರುವಾರ ಆರೋಪಿಸಿದ್ದಾರೆ.

ಇಂದು ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕರಂದ್ಲಾಜೆ, ಸಿದ್ದರಾಮಯ್ಯ ಸರ್ಕಾರದ ಜಾತಿ ಗಣತಿ ಮರು ಸಮೀಕ್ಷೆಯ ಹಿಂದೆ ಒಂದು ಅಂಶದ ಕಾರ್ಯಸೂಚಿ ಇದೆ. ಅದು ಅಲ್ಪ ಸಂಖ್ಯಾತರ ಜನಸಂಖ್ಯೆ ಹೆಚ್ಚಾಗಿದೆ ಎಂದು ತೋರಿಸುವುದು ಮತ್ತು ಆ ಮೂಲಕ ಅವರಿಗೆ ಮೀಸಲಾತಿಯನ್ನು ಹೆಚ್ಚಿಸುವುದು ಎಂದಿದ್ದಾರೆ.

ಇದಲ್ಲದೆ, ಸಿದ್ದರಾಮಯ್ಯ ಅಧಿಕಾರಕ್ಕೆ ಬಂದಾಗಲೆಲ್ಲಾ ಅವರು ಧರ್ಮ ಮತ್ತು ಜಾತಿಯ ಆಧಾರದ ಮೇಲೆ ಜನರನ್ನು ವಿಭಜಿಸಲು ಯತ್ನಿಸುತ್ತಾರೆ. ಹೊಸದಾಗಿ ಜಾತಿ ಗಣತಿ ನಡೆಸುವ ಮೂಲಕ ಜನರನ್ನು ಮತ್ತಷ್ಟು ವಿಭಜಿಸುವ ಉದ್ದೇಶ ಹೊಂದಿದೆ. ಆದರೆ ರಾಜ್ಯದ ಜನ ಇದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ. ವಿರೋಧದ ಹೊರತಾಗಿಯೂ ಜಾತಿಗಣತಿ ವರದಿ ಜಾರಿಗೆ ತರುವುದಾಗಿ ಮುಖ್ಯಮಂತ್ರಿ ದೃಢವಾಗಿ ಹೇಳಿರುವುದನ್ನು ಪ್ರಶ್ನಿಸಿದ ಕೇಂದ್ರ ಸಚಿವೆ. "ಕಳೆದ 10 ವರ್ಷಗಳ ಇದಕ್ಕಾಗಿ ಸಿಕ್ಕಾಪಟ್ಟೆ ಹಣ ಖರ್ಚು ಮಾಡಲಾಗಿದೆ. ಎರಡು ಆಯೋಗ ಗಳನ್ನು ನೇಮಿಸಲಾಗಿದೆ" ಎಂದು ವಾಗ್ದಾಳಿ ನಡೆಸಿದರು. 90 ದಿನಗಳಲ್ಲಿ ಜಾತಿ ಗಣತಿ ಮರು ಸಮೀಕ್ಷೆ ಪೂರ್ಣಗೊಳ್ಳುವ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಅವರು, ಎಸಿ ಕೊಠಡಿಗಳಲ್ಲಿ ಕುಳಿತು ಜಾತಿಗಳ ಸಂಖ್ಯೆಯನ್ನು ಬರೆಯಲಾಗುತ್ತದೆಯೇ ಎಂದು ಪ್ರಶ್ನಿಸಿದರು. "ಜಯಪ್ರಕಾಶ್ ಹೆಗ್ಡೆ ಆಯೋಗ, ನಿಮ್ಮ ಜಾತಿಯನ್ನು ಪರಿಶೀಲಿಸಲು ನಿಮ್ಮ ಮನೆ ಭೇಟಿ ನೀಡಿದೆಯೇ?" ಎಂದು ಶೋಭಾ ಪ್ರಶ್ನಿಸಿದರು.

ಬೆಂಗಳೂರಿನಲ್ಲಿ ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣದಿಂದ ಜನರ ಗಮನವನ್ನು ಬೇರೆಡೆ ಸೆಳೆಯುವ ಉದ್ದೇಶದಿಂದ ಜಾತಿ ಗಣತಿ ಮರು ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಅವರು ಟೀಕಿಸಿದರು.




ಹಂಪಿ ಬಳಿ ಗುರುವಾರ ಭಾರಿ ಮಳೆಯಿಂದಾಗಿ ಬಾಳೆತೋಟ ಜಲಾವೃತಗೊಂಡಿವೆ.

# ಮೋದಿ ಪ್ರಧಾನಿ ಆದ ನಂತರ ದೇಶವು ಅಭಿವೃದ್ಧಿ, ಸ್ವಾವಲಂಬನೆಯತ್ತ ವೇಗವಾಗಿ ಸಾಗುತ್ತಿದೆ: ವಿ.ಸೋಮಣ್ಣ

**ಹುಬ್ಬಳ್ಳಿ, ಜೂ.12–** 'ನರೇಂದ್ರ ಮೋದಿ ಅವರು ಪ್ರಧಾನಿ ಆದ ನಂತರ ದೇಶವು ಅಭಿವೃದ್ಧಿ ಮತ್ತು ಸ್ವಾವಲಂಬನೆಯತ್ತ ವೇಗವಾಗಿ ಸಾಗುತ್ತಿದೆ. ಜಗತ್ತಿನ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮುತ್ತಿದೆ' ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು. ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ತನ್ನ ಮೂರನೇ ಅವಧಿಯ ಮೊದಲ ವರ್ಷವನ್ನು ಪೂರೈಸಿದ ಹಿನ್ನೆಲೆಯಲ್ಲಿ ಗುರುವಾರ ನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

'ಹಿಂದಿನ ಯುಪಿಎ ಸರ್ಕಾರದಲ್ಲಿ ಸ್ಪಷ್ಟವಾದ ನೀತಿಗಳಿರಲಿಲ್ಲ. ಬಲವಾದ ನಾಯಕತ್ವ ಇರಲಿಲ್ಲ. ಹಗರಣಗಳಿಂದ ತುಂಬಿತ್ತು. ನಮ್ಮ ಸರ್ಕಾರ ಆಡಳಿತಕ್ಕೆ ಬಂದು 11 ವರ್ಷಗಳನ್ನು ಪೂರೈಸಿದೆ. ಮೋದಿ ಅವರ ನೇತೃತ್ವದಲ್ಲಿ ನಾವು ಸುಸ್ಥಿತ ಆಡಳಿತ ನೀಡುತ್ತಿದ್ದು, ದೇಶದ ಆರ್ಥಿಕತೆ ಮತ್ತು ಭದ್ರತೆಗೆ ಆದ್ಯತೆ ನೀಡಲಾಗಿದೆ. ರಕ್ಷಣಾ ವ್ಯವಸ್ಥೆಯಲ್ಲಿ ಸ್ವಾವಲಂಬನೆಯನ್ನೂ ಸಾಧಿಸಿದ್ದೇವೆ' ಎಂದರು. 'ಪಿಎಂ ಸ್ವನಿಧಿ ಯೋಜನೆ ಜಾರಿಯಿಂದಾಗಿ ಬೀದಿ ಬದಿ ವ್ಯಾಪಾರಿಗಳ ಆರ್ಥಿಕ ಸ್ಥಿತಿಯು ಉತ್ತಮವಾಗಿದೆ. ಸ್ಟಾರ್ಟ್‌ಅಪ್ಗಳು ಬೆಳವಣಿಗೆಗೆ ಆದ್ಯತೆ



ನೀಡಲಾಗಿದೆ. ದೇಶದ 160 ವಿವಿಧ ಭಾಗಗಳಲ್ಲಿ ವಿಮಾನ ನಿಲ್ದಾಣಗಳು ನಿರ್ಮಾಣವಾಗಿವೆ' ಎಂದು ಹೇಳಿದರು.

**ರೈಲ್ವೆ ಅಭಿವೃದ್ಧಿಗೂ ಆದ್ಯತೆ:** 2025–26ನೇ ಹಣಕಾಸು ವರ್ಷದಲ್ಲಿ ದೇಶದಾದ್ಯಂತ ರೈಲ್ವೆ ಅಭಿವೃದ್ಧಿಗೆ ?2,65,200 ಕೋಟಿ ಅನುದಾನವನ್ನು ಹಂಚಿಕೆ ಮಾಡಲಾಗಿದೆ. ಇದು 2009–14ರ ಅವಧಿಯಲ್ಲಿ ಹಂಚಿಕೆಯಾಗಿದ್ದಕ್ಕಿಂತ ಸುಮಾರು ಆರು ಪಟ್ಟು ಹೆಚ್ಚಿನದ್ದಾಗಿದೆ' ಎಂದರು.

'ರಾಜ್ಯದ ರೈಲು ಸಂಪರ್ಕ ಮತ್ತು ಮೂಲಸೌಕರ್ಯ ಸುಧಾರಣೆಗಾಗಿ ಆದ್ಯತೆ ನೀಡಲಾಗಿದ್ದು, 2014ರಿಂದ ರಾಜ್ಯದಲ್ಲಿ ಒಟ್ಟು 1,652 ಕಿಮೀ., ಹೊಸ ರೈಲ್ವೆ ಮಾರ್ಗಗಳನ್ನು ನಿರ್ಮಿಸುವ ಮೂಲಕ ರಾಜ್ಯದಾದ್ಯಂತ ರೈಲ್ವೆ ಸಂಪರ್ಕವನ್ನು ಇನ್ನಷ್ಟೂ ಬಲಪಡಿಸಲಾಗಿದೆ' ಎಂದರು. '3,233 ಕಿಮೀ., ರೈಲು ಮಾರ್ಗಗಳನ್ನು ವಿದ್ಯುದ್ದೀಕರಣ ಮಾ+ಡಲಾಗಿದೆ. ಇದು ರಾಜ್ಯದ ರೈಲ್ವೆ ಜಾಲದ ಶೇ 96 ಒಳಗೊಂಡಿದ್ದು, ಪರಿಸರ ಸ್ನೇಹಿ, ವೇಗದ ಪ್ರಯಾಣವಾಗಿದೆ. ಇದರೊಂದಿಗೆ 3,840 ಕಿಮೀ., ವ್ಯಾಪ್ತಿಯ 31 ಹೊಸ ರೈಲ್ವೆ ಯೋಜನೆಗಳು ಪ್ರಗತಿಯಲ್ಲಿವೆ. ಪ್ರಯಾಣಿಕರ ಅನುಕೂಲಕ್ಕಾಗಿ ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ 61 ರೈಲ್ವೆ ನಿಲ್ದಾಣಗಳನ್ನು ಆಧುನೀಕರಿಸಲಾಗುತ್ತಿದೆ. ರಾಜ್ಯದ 12 ಜಿಲ್ಲೆಗಳ ನಡುವೆ 10 ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸಂಚಾರ ಕಲ್ಪಿಸಲಾಗಿದೆ' ಎಂದರು.

'ಪ್ರಯಾಣಿಕರ ಸುರಕ್ಷತೆ ಹೆಚ್ಚಿಸಲು, ನೈರುತ್ಯ ರೈಲ್ವೆಯಲ್ಲಿ ಸುಧಾರಿತ ಕವಚ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ. ಮೂರು ವಿಭಾಗಗಳಲ್ಲಿ ಕವಚ ಸಂಬಂಧಿತ ಕಾರ್ಯಗಳನ್ನು ಸ್ಥಾಪಿಸಲು ಮತ್ತು ಕಾರ್ಯಗತಗೊಳಿಸಲು ಇ–ಟೆಂಡರ್ ನೀಡಲಾಗಿದೆ. ರಸ್ತೆ– ರೈಲ್ವೆ ಸುರಕ್ಷತೆಗಾಗಿ ಅಗತ್ಯವಿರುವೆಡೆ ಮೇಲ್ಸೇತುವೆ, ಕೆಳಸೇತುವೆಗಳನ್ನು ನಿರ್ಮಿಸಲಾಗಿದೆ.

601 ಲೆವೆಲ್ ಕ್ರಾಸಿಂಗ್ ಗೇಟ್ಗಳನ್ನು ಮುಚ್ಚುವ ಮೂಲಕ ಗೇಟ್ನಲ್ಲಿ ಆಗುವ ವಿಳಂಬವನ್ನು ನಿವಾರಿಸಲಾಗಿದೆ' ಎಂದರು. ಜೋಡಿ ಮಾರ್ಗ, ಹೊಸ ಲೈನ್ ಯೋಜನೆ: 'ಗದಗ– ಹೊಟಗಿ, ಹುಬ್ಬಳ್ಳಿ– ಚಿಕ್ಕಜಾಜೂರು, ಅರಸೀಕೆರೆ– ತುಮಕೂರು ಸೇರಿದಂತೆ ಪ್ರಮುಖ ನಗರಗಳನ್ನು ಸಂಪರ್ಕಿಸಲು ನೂತನ ಜೋಡಿಮಾರ್ಗ ರೈಲ್ವೆ ಯೋಜನೆ ಅನುಷ್ಠಾನಕ್ಕೆ ಕ್ರಮವಹಿಸಲಾಗಿದೆ' ಎಂದರು.

'ಗದಗ– ವಾಡಿ, ಬಾಗಲಕೋಟೆ– ಕುಡಚಿ, ಬೆಳಗಾವಿ– ಧಾರವಾಡ (ಕಿತ್ತೂರು ಮೂಲಕ), ಹುಬ್ಬಳ್ಳಿ– ಅಂಕೋಲಾ ಸೇರಿದಂತೆ ಕೆಲ ನಗರಗಳನ್ನು ಸಂಪರ್ಕಿಸಲು ಹೊಸ ಲೈನ್ ಯೋಜನೆಗಳ ಜಾರಿಗೂ ಅಗತ್ಯ ಅನುದಾನ ಹಂಚಿಕೆ ಮಾಡಲಾಗಿದೆ' ಎಂದು ಮಾಹಿತಿ ನೀಡಿದರು.

### ಬೆಂಗಳೂರಿಗೆ ತುಮಕೂರು ಸೇರ್ಪಡೆ: ಸೋಮಣ್ಣ ಆಕ್ಷೇಪ

ರಾಮನಗರವನ್ನು ಬೆಂಗಳೂರು ದಕ್ಷಿಣ ಎಂದು ಮರು ನಾಮಕರಣದ ಮಾಡಿದ ರೀತಿ ತುಮಕೂರನ್ನು ಬೆಂಗಳೂರಿನಲ್ಲಿ ಸೇರಿಸುವ ಚಿಂತನೆ ಒಪ್ಪಲಾಗದು. ತುಮಕೂರಿಗೆ ಅದರದ್ದೇ ಆದ ಇತಿಹಾಸವಿದೆ. ಜನರನ್ನು ಅನಗತ್ಯವಾಗಿ ದಾರಿ ತಪ್ಪಿಸುವ ಕೆಲಸ ನಡೆದಿದೆ' ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಆರೋಪಿಸಿದರು.'ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಲ್ಲಿ ಒಗ್ಗಟ್ಟು ಇಲ್ಲ ಎಂಬುದು ರಾಜ್ಯದ ಆಡಳಿತ ವೈಖರಿಯಲ್ಲಿ ಗೊತ್ತಾಗುತ್ತಿದೆ' ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

# ಬುದ್ಧ, ಬಸವ, ಅಂಬೇಡ್ಕರ್ ಜಾಗತಿಕ ನಾಯಕರು: ಸಚಿವ ಬೋಸರಾಜು



**ರಾಯಚೂರು, ಜೂ.12–** ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರು ಜಾಗತಿಕ ಮಟ್ಟದ ಮಹಾನ್ ದಾರ್ಶನಿಕರಾಗಿದ್ದಾರೆ. ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಇಂದಿನ ಪೀಳಿಗೆಯು ಸಾಗಬೇಕಾಗಿದೆ ಎಂದು ಸಚಿವ ಎನ್.ಎಸ್.ಬೋಸರಾಜು ಹೇಳಿದರು.

ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಗೌತಮ ಬುದ್ಧ ಅವರು ಈ ಸಮಾಜಕ್ಕೆ ಶಾಂತಿ, ಅಹಿಂಸೆಯ ಸಂದೇಶ ನೀಡಿ–ದರು. ಬಸವಣ್ಣನವರು ವಚನ ಸಾಹಿತ್ಯದ ಮೂಲಕ ಸಮಾಜ ಸುಧಾರಣೆ ಮಾಡಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚಿಸಿ ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎನ್ನುವ ಸಂದೇಶ ನೀಡಿದರು. ಈ ಮಹಾನ್ ನಾಯಕರು ನೀಡಿದ ಸಿದ್ಧಾಂತಗಳ ಮೇಲೆ ನಡೆದಾಗ ಮಾತ್ರ ನಾವು ಮನುಷ್ಯರಾಗಲು ಸಾಧ್ಯವಿದೆ. ಇದರಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ನೆಲೆಸಲಿದೆ. ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು, ಬುದ್ಧ, ಬಸವ, ಅಂಬೇಡ್ಕರ್ ಅವರು ಶೋಷಣೆಗೆ ಒಳಗಾದ ಸಮುದಾಯಗಳನ್ನು ಮೇಲೆತ್ತಿದರು. ಮನುಷ್ಯರನ್ನು ಮನುಷ್ಯರಂತೆ ಕಾಣುವ ಸಂದೇಶ ನೀಡಿದರು. ವಿಧಾನ ಪರಿಷತ್ ಸದಸ್ಯರಾದ ಎ.ವಸಂತ ಕುಮಾರ ಅವರು, ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ವಿಚಾರಧಾರಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರು ಬೇರೆ ಬೇರೆ ಕಾಲಘಟ್ಟದಲ್ಲಿ ಜನಿಸಿದರು ಅವರು ನೀಡಿರ ಸಮತಾ ಸಮಾಜದ ಸಂದೇಶ ಮಹತ್ವದ್ದಾಗಿದೆ ಎಂದರು.

ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಅವರು, ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ಆದರ್ಶ, ಜೀವನ ಮೌಲ್ಯಗಳನ್ನು ಇಂದಿನ ಯುವ ಸಮೂಹ ನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.ನಡೆ–ನುಡಿ ಒಂದೇ ಇರಬೇಕು. ಮೌಢ್ಯ ತೊಲಗಬೇಕು. ದೇವರ ಹೆಸರಿನಲ್ಲಿ ಮೋಸ ನಡೆಯುವುದು ನಿಲ್ಲಬೇಕು ಎಂಬುದಾಗಿ ಬಸವಣ್ಣನವರು ತಿಳಿಸಿದರು.

ಅವಮಾನ ಹಸಿವಿಗಿಂತ ಘೋರ. ಜಾತಿಯ ಕಾರಣಕ್ಕೆ ಅವಮಾನ ಎದುರಿಸುವುದು ನಿಲ್ಲಬೇಕು. ಜಾತಿಯಲ್ಲಿ ಮೇಲು ಕೀಳು ಎಂಬುದು ಇರಬಾರದು ಎಂದು ಡಾ.ಬಿ.ಆರ್.ಅಂಬೇಡ್ಕರ್ ಅವರು ತಿಳಿಸಿದರು. ಸಂವಿಧಾನವನ್ನು ಪೂರ್ತಿಯಾಗಿ ಓದಿದಾಗಲೇ ಅದರ ಮಹತ್ವ ತಿಳಿಯುತ್ತದೆ ಎಂದರು.

# ನಾಗೂರ ಗ್ರಾಮದಲ್ಲಿ ವಾಂತಿ, ಭೇದಿ: ಅಧಿಕಾರಿಗಳ ದೌಡು



**ಬೀದರ್, ಜೂ. 12:** ಜಿಲ್ಲೆಯ ಔರಾದ ತಾಲೂಕಿನ ಜೋಜನಾ ಗ್ರಾಪಂ ವ್ಯಾಪ್ತಿಯ ನಾಗುರ(ಎಂ) ದಲ್ಲಿ ಸಮರ್ಪಕವಾದ ಚರಂಡಿ ವ್ಯವಸ್ಥೆಯಿಲ್ಲದೇ ಕಲುಷಿತ ನೀರು ನಡು ರಸ್ತೆಗಳಲ್ಲಿ ಸಂಗ್ರಹವಾಗಿ, ವಿಪರೀತ ಸೊಳ್ಳೆಗಳ ಕಾಟದಿಂದ ಜನರು ಸಾಂಕ್ರಮಿಕ ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಗ್ರಾಮದಲ್ಲಿ ನೀರಿನ ಸೌಕರ್ಯ ಕಲ್ಪಿಸುವ ಮೂಲ ಪೈಪ್ ಲೈನ್ ಗೆ ಕೆಲವೊಬ್ಬರು ಅನಧಿಕೃತವಾಗಿ ಪೈಪ್ ಒಡೆದ ಕಾರಣ ಅದರಿಂದ ಬರುವ ಚರಂಡಿ ಮಲಿನ ನೀರು ಸೇವಿಸಿ ಈಗಾಗಲೇ ಮೂರ್‍ನಾಲ್ಕು ಜನರಿಗೆ ವಾಂತಿ ಭೇದಿ ಸಂಭವಿಸಿ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಈ ಸುದ್ದಿ ಅರಿತು ತಾಪಂ ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಭೇಟಿ ನೀಡಿ ಅಲ್ಲಿನ ನೈಜ ಪರಿಸ್ಥಿತಿ ಅರಿಯಲು ಮುಂದಾಗಿದ್ದಾರೆ.

ಇದೆ ವೇಳೆ ತಾಲೂಕು ಆರೋಗ್ಯಾಧಿಕಾರಿ ಓಣಿಯ ನಿವಾಸಿಗಳಿಗೆ ಭೇಟಿ ನೀಡಿ ಮಾತನಾಡಿದ ಅವರು, ಎಲ್ಲ ಜನರಿಗೆ ಭೇಟಿ ನೀಡಿ ಅವರಿಗೆ ಮುನ್ನೆಚ್ಚರಿಕೆ ಮತ್ತು ಸ್ವಚ್ಛತೆಗೆ ಬಗ್ಗೆ ತಿಳಿ ಹೇಳಲಾಗಿದೆ.

ನೀರಿನ ಸ್ಯಾಂಪಲ್ ಕೂಡ ಸಂಗ್ರಹ ಮಾಡಿ, ತಪಾಸಣೆಗೆ ಒಳಪಡಿಸಲಾಗುತ್ತದೆ ಗ್ರಾಮದಲ್ಲಿ ಹೆಚ್ಚಿನ ರೋಗ ಉಲ್ಬಣಿಸದಂತೆ ಮುನ್ನೆಚ್ಚರವಾಗಿ ಐದಾರು ದಿನಗಳವರೆಗೆ ಆರೋಗ್ಯ ಕ್ಯಾಂಪ್ ಹಾಕಿ, ಸಾರ್ವಜನಿಕರಿಗೆ ಅಲ್ಲಿಯೇ ತಪಾಸಣೆ ಮಾಡುವ ವ್ಯವಸ್ಥೆ ಮಾಡುವುದಾಗಿ ತಿಳಿಸಿದ್ದಾರೆ.

ತಾಪಂ ಸಹಾಯಕ ನಿರ್ದೇಶಕ ಶಿವಕುಮಾರ್ ಘಾಟೆ ಮಾತನಾಡಿ, ಗ್ರಾಮದಲ್ಲಿ ಸಿಸಿ ರಸ್ತೆ, ಸೂಕ್ತವಾದ ಚರಂಡಿಗಳಿಲ್ಲದೇ ಮಲಿನ ನೀರು ನಿಲ್ಲುತ್ತಿರುವುದು ನೋಡಿದ್ದೆವೆ ಮುಖ್ಯ ನೀರಿನ ಪೈಪ್ ಲೈನ್ ಗೆ ಅಳವಡಿಸಿಕೊಂಡಿರುವ ಸಂಪರ್ಕಗಳನ್ನು ತೆಗೆದುಹಾಕಲು ತಿಳಿಸಲಾಗುತ್ತದೆ. ಮಲಿನ ನೀರು ನಿಂತ ಸ್ಥಳಗಳಲ್ಲಿ ತಾತ್ಕಾಲಿಕವಾಗಿ ಮರೂಮ್ ಹಾಕಿಸಲು ತಿಳಿಸಲಾಗಿದೆ.

ತಾಲೂಕಿನಎಲ್ಲ ಗ್ರಾಮಗಳಲ್ಲಿ ಜೆಜೆಎಂ ಕಾಮಗಾರಿ ಪೂರ್ಣಗೊಂಡ ನಂತರ ನಮ್ಮ ಗ್ರಾಪಂ ಸುಪರ್ದಿಗೆ ಬರುವತನಕ ಸಿಸಿ ರಸ್ತೆ ನಿರ್ಮಿಸಲು ಹಿಂದೇಟು ಹಾಕಲಾಗಿದೆ. ಸಧ್ಯಕ್ಕೆ ಸ್ವಚ್ಛತೆ ಮತ್ತು ಬ್ಲೀಚಿಂಗ್ ಪೌಡರ್ ದಿನಾಲು ಮಾಡಲು ತಿಳಿಸಲಾಗಿದೆ. ಆದಷ್ಟು ಬೇಗನೇ ಸಿಸಿ ರಸ್ತೆ ಮತ್ತುಚರಂಡಿ ವ್ಯವಸ್ಥೆ ಮಾಡಿಸಲಾಗುವುದೆಂದು ತಿಳಿಸಿದರು.

## ಕಾಂಗ್ರೆಸ್ ಸಂಸದರು-ಶಾಸಕರ ಮನೆ ಮೇಲೆ ಇ.ಡಿ ದಾಳಿ ಸಂಪೂರ್ಣ ರಾಜಕೀಯ ಪ್ರೇರಿತ ಮುಂಡ್ರಿಗಿ ನಾಗರಾಜ ಆಕ್ರೋಶ

**ಬಳ್ಳಾರಿ, ಜೂ.12–**ವಾಲ್ಮೀಕಿ ನಿಗಮದ ಹಣ ಲೋಕಸಭೆ ಚುನಾವಣೆಗೆ ಬಳಸಿದ ಆರೋಪದ ಮೇಲೆ ಬಳ್ಳಾರಿಯಲ್ಲಿ ಕಾಂಗ್ರೆಸ್ ಸಂಸದ ಈ. ತುಕಾರಾಂ, ಮಾಜಿ ಸಚಿವ ಬಿ ನಾಗೇಂದ್ರ, ಕಂಪ್ಲಿ ಶಾಸಕ ಜೆ ಎನ್ ಗಣೇಶ್, ಕೂಡ್ಲಿಗಿ ಶಾಸಕ ಎನ್.ಟಿ.ಶ್ರೀನಿವಾಸ ಹಾಗೂ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಮನೆ ಹಾಗೂ ಕಚೇರಿಗಳ ಮೇಲೆ ಇಂದು ಜಾರಿ ನಿರ್ದೇಶನಲಾಯ ದಾಳಿ ನಡೆಸಿದ್ದು ಇದು ಸಂಪೂರ್ಣ ರಾಜಕೀಯ ಪ್ರೇರಿತ ದಾಳಿ ಎಂದು ಡಾ. ಬಾಬು ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡ್ರಿಗಿ ನಾಗರಾಜ ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಇಂದಿನವರೆಗೂ ಸ್ವತಂತ್ರ ಸಂಸ್ಥೆಗಳಾದ ಐಟಿ, ಇಡಿ ಮತ್ತು ಸಿಬಿಐ ನಂತಹ ಫೆಡರಲ್ ತನಿಖಾ ಸಂಸ್ಥೆಗಳನ್ನು ಕೇಂದ್ರ ಸರ್ಕಾರವು ತನ್ನ ರಾಜಕೀಯ ವಿರೋಧಿಗಳನ್ನು, ಬಿಜೆಪಿಯನ್ನು ಬೆಂಬಲಿಸದ, ಬಿಜೆಪಿಯನ್ನು ವಿರೋಧಿಸುವ ನಾಯಕರನ್ನು ಕುಗ್ಗಿಸುವ ಸಲುವಾಗಿ ಸುಳ್ಳು ಆರೋಪ ಮಾಡಿ ಪ್ರಕರಣ ದಾಖಲಿಸುತ್ತಿದ್ದಾರೆ.


ಜಾರಿ ನಿರ್ದೇಶನಾಲಯ (ಇಡಿ) ಕಳೆದ 10 ವರ್ಷಗಳಲ್ಲಿ ವಿವಿಧ ರಾಜಕಾರಣಿಗಳು, ಸಂಸತ್ ಸದಸ್ಯರು ಮತ್ತು ಶಾಸಕರ ವಿರುದ್ಧ ಒಟ್ಟು 193 ಪ್ರಕರಣಗಳನ್ನು ದಾಖಲಿಸಿದೆ ಆದರೆ ಕೇವಲ ಎರಡು ಪ್ರಕರಣಗಳಲ್ಲಿ ಮಾತ್ರ ಶಿಕ್ಷೆ ವಿಧಿಸಲಾಗಿದೆ ಎಂದು ಕೇಂದ್ರದ ಹಣಕಾಸು ಖಾತೆಯ ರಾಜ್ಯ ಸಚಿವ ಪಂಕಜ್ ಚೌಧರಿಯವರೇ ರಾಜ್ಯಸಭೆಯಲ್ಲಿ ಸಂಸತ್ತಿಗೆ ಮಾಹಿತಿ ನೀಡಿದ್ದಾರೆ. ಹಾಗಾದರೆ ಈ ದಾಳಿಗಳ ಹಿಂದಿನ ಉದ್ದೇಶ ರಾಜಕೀಯ ವಿರೋಧಿಗಳನ್ನು ಮುಗಿಸುವ ಪ್ರಯತ್ನವಲ್ಲದೆ ಮತ್ತೇನೂ ಅಲ್ಲ ಎಂದು ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದರು.

# ಮೇಯರ್ ಮುಲ್ಲಂಗಿ ನಂದೀಶ್ ಹುಟ್ಟುಹಬ್ಬ ಆಚರಣೆ



**ಬಳ್ಳಾರಿ, ಜೂ.12–** ಬಳ್ಳಾರಿ ಮಹಾನಗರ ಪಾಲಿಕೆ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರ ಹುಟ್ಟು ಹಬ್ಬವನ್ನು ಗುರುವಾರರಂದು ಅವರ ಅಭಿಮಾನಿಗಳು ಮತ್ತು ಸ್ನೇಹಿತರು ಕೇಕ್ ಕತ್ತರಿಸುವ ಮೂಲಕ ಆಚರಿಸಿ ನಂದೀಶ್ ಅವರಿಗೆ ಶುಭ ಕೋರಿದರು.

# 50 ಕೋಟಿ ಸಾಲ ಕೊಡಿಸುವುದಾಗಿ ಮಹಿಳೆಗೆ 60 ಲಕ್ಷ ವಂಚನೆ: ಆರೋಪಿ ಬಂಧನ



**ಹುಬ್ಬಳ್ಳಿ, ಜೂ. 12:** ವಂಚಕನೋರ್ವ ಸಾಲ ಕೊಡಿಸುವುದಾಗಿ ಹೇಳಿ ನಂಬಿಸಿ ಮಹಿಳೆಯಿಂದ 60 ಲಕ್ಷ ರೂ ಪಡೆದು, 50 ಕೋಟಿ ನಕಲಿ ನೋಟು ನೀಡಿ ವಂಚಿಸಿದ ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ.

ಮೈಸೂರು ಮೂಲದ ಆರೋಪಿ ಮೊಹ್ಮದ್ ಅಸೀದ್ ವಂಚಿಸಿದ ವ್ಯಕ್ತಿ. ಮಹ್ಮದ ಅಸೀಫ್ ಪುಣೆ ಮೂಲದ ಮಹಿಳೆಗೆ ಕಟ್ಟಡ ಕೆಲಸಕ್ಕಾಗಿ ಕಡಿಮೆ ಬಡ್ಡಿ ದರದಲ್ಲಿ 50 ಕೋಟಿ ರೂ ಹಣ ಸಾಲ ಕೊಡಿಸುವುದಾಗಿ ಹೇಳಿದ್ದಾನೆ. ಪ್ರೊಸೆಸಿಂಗ್ ಶುಲ್ಕ ಅಂತ ಮಹಿಳೆಯಿಂದ 60 ಲಕ್ಷ ರೂ. ಹಣ ಪಡೆದಿದ್ದಾನೆ. ನಂತರ, ಮೊದಲ ಕಂತಿನ ರೂಪದಲ್ಲಿ ಮಹಿಳೆಗೆ 1.87 ಕೋಟಿ ರೂ. ನೀಡಿದ್ದಾನೆ. ಹಣ ಸಿಕ್ಕ ಖುಷಿಯಲ್ಲಿದ್ದ ಮಹಿಳೆ ಬ್ಯಾಗ್ ತೆರೆದು ನೋಡಿದಾಗ, ನಕಲಿ ನೋಟುಗಳು ಕಂಡಿದ್ದು, ಆಘಾತಕ್ಕೆ ಒಳಗಾಗಿದ್ದಾರೆ.

ಮಹಮ್ಮದ್ ಆಸೀಪ್, ಸುಧೀರ್ ಮೆಹ್ತಾ ಅಂತ ಎಲ್ಲರಿಗೂ ಪರಿಚಯ ಮಾಡಿಕೊಂಡು ವಂಚಿಸುತ್ತಿದ್ದನು. ಒಂದು ವರ್ಷದ ಹಿಂದೆ ಮೈಸೂರಿಗೆ ಬಂದಿದ್ದ ಪುಣಾ ಮೂಲದ ಓರ್ವ ಮಹಿಳೆಗೆ ಆರೋಪಿ ಮಹಮ್ಮದ್ ಆಸೀಫ್ ಪರಿಚಯವಾಗಿದ್ದನು. ಆಗ ಮಹಿಳೆಗೆ, ಮಹಮ್ಮದ್ ಆಸೀಫ್ ತಾನು ಅನೇಕ ಉದ್ಯಮಿಗಳಿಗೆ ಸಾಲ ಕೊಡಿಸುತ್ತೇನೆ, ತನಗೆ ದೊಡ್ಡ ದೊಡ್ಡ ಫೈನಾನ್ಸ್‌ಗಳು ಪರಿಚಯ ವಿದ್ದಾರೆ ಅಂತ ಹೇಳಿದ್ದನು. ಈತನ ಮಾತನ್ನು ನಂಬಿದ್ದ ಮಹಿಳೆ, ನನ್ನ ಮಗಳು ಮುಂಬೈನಲ್ಲಿ ಕಟ್ಟಡದ ಕಾಮಗಾರಿ ಆರಂಭಿಸುವವಳಿದ್ದಾಳೆ, ಅದಕ್ಕಾಗಿ ಐವತ್ತು ಕೋಟಿ ರೂಪಾಯಿ ಸಾಲ ಬೇಕು ಎಂದು ಹೇಳಿದ್ದರಂತೆ.

ಆಗ, ಮಹಮ್ಮದ್ ಆಸೀಫ್ ಸಾಲ ಕೊಡಿಸುವುದಾಗಿ ಹೇಳಿದ್ದನಂತೆ. ಐವತ್ತು ಕೋಟಿ ರೂಪಾಯಿಗೆ ಪ್ರೊಸೆಸಿಂಗ್ ಚಾರ್ಜ್ ಅಂತ 60 ಲಕ್ಷ ರೂಪಾಯಿ ನೀಡಬೇಕು ಅಂತ ಹೇಳಿದ್ದನಂತೆ. ಈತನ ಮಾತನ್ನು ನಂಬಿದ್ದ ಮಹಿಳೆ, ಕೆಲ ದಿನಗಳ ಹಿಂದೆ ಮಹಮ್ಮದ್ ಆಸೀಫ್‌ಗೆ 60 ಲಕ್ಷ ಹಣ ನೀಡಿದ್ದರಂತೆ. ಸಾಲದ ಮೊದಲ ಕಂತಿನ ಭಾಗವಾಗಿ, ನಿಮಗೆ 2ಕೋಟಿ ಹಣ ನೀಡುತ್ತೇನೆ, ಹುಬ್ಬಳ್ಳಿಗೆ ಬನ್ನಿ ಅಂತ ಮಹಮ್ಮದ್ ಆಸೀಫ್ ಕರೆದಿದ್ದನಂತೆ. ಈತನ ಮಾತು ನಂಬಿದ್ದ ಮಹಿಳೆ, ತನ್ನ ಜೊತೆ ಕೆಲ ಪರಿಚಿತರನ್ನು ಕರೆದುಕೊಂಡು ಜೂನ್ 5 ರಂದು ಹುಬ್ಬಳ್ಳಿಗೆ ಬಂದಿದ್ದರಂತೆ.

ಹುಬ್ಬಳ್ಳಿಯ ಗೋಕುಲ್ ರಸ್ತೆಯಲ್ಲಿರುವ ಹೋಟೆಲ್‌ವೊಂದರ ಮುಂದೆ ಎರಡು ಸೂಟ್ ಕೇಸ್‌ನಲ್ಲಿ ಹಣ ತುಂಬಿ ಮಹಮ್ಮದ್ ಆಸೀಪ್ ಮಹಿಳೆಗೆ ನೀಡಿದ್ದನಂತೆ. ಸದ್ಯ ನಿಮಗೆ 1 ಕೋಟಿ 87 ಲಕ್ಷದ 45 ಸಾವಿರ ಹಣ ನೀಡಿದ್ದೇನೆ. ಉಳಿದ 48 ಕೋಟಿಯನ್ನು ಮತ್ತೆ ಕೊಡಿಸುತ್ತೇನೆ ಅಂತ ಹೇಳಿದ್ದನಂತೆ. ಹಣ ಸಿಕ್ಕ ಖುಷಿಯಲ್ಲಿದ್ದ ಮಹಿಳೆ, ಸೂಟ್‌ಕೇಸ್‌ನಲ್ಲಿದ್ದ ಹಣ ಪರಿಶೀಲಿಸದೆ ಅದನ್ನು ತಾವು ಉಳಿದುಕೊಂಡಿದ್ದ ಹೋಟೆಲ್‌ಗೆ ತೆಗೆದುಕೊಂಡು ಹೋಗಿದ್ದರು. ನಂತರ ಆ ಹಣವನ್ನು ಹೇಗೆ ಮುಂಬೈಗೆ ತೆಗೆದುಕೊಂಡು ಹೋಗುವುದು ಅಂತ ಯೋಚನೆ ಮಾಡಿ, ಹಣದ ಬ್ಯಾಗ್ ತಗೆದು ನೋಡಿದಾಗ ಮಹಮ್ಮದ್ ಆಸೀಫ್ ನೀಡಿರುವುದು ಅಸಲಿ ನೋಟ್ ಅಲ್ಲ, ನಕಲಿ ನೋಟು ಎಂದು ಗೊತ್ತಾಗಿದೆ. ಮಹಮ್ಮದ್ ಆಸೀಫ್, ಮಹಿಳೆಗೆ ನೀಡಿದ್ದ 1.87 ಕೋಟಿ ಹಣದಲ್ಲಿ, ಐದು ಸಾವಿರ ರೂ. ನೋಟುಗಳು ಮಾತ್ರ ಅಸಲಿಯಾಗಿದ್ದವು. ಮಹಮ್ಮದ್ ಆಸೀಫ್ ಹಣದ ಬಂಡಲ್ ಮೇಲೆ ಮಾತ್ರ 500 ಬೆಲೆಯ ಒಂದೊಂದು ಅಸಲಿ ನೋಟು ಇಟ್ಟಿದ್ದನು. ಉಳಿದ ಎಲ್ಲ ನೋಟುಗಳನ್ನು ಖೋಟಾ ನೋಟು ಇಟ್ಟಿದ್ದನು. ಕೋಟಾ ನೋಟು ನೋಡಿ ಶಾಕ್ ಆಗಿದ್ದ ಮಹಿಳೆ, ಹುಬ್ಬಳ್ಳಿ ಸಿಸಿಬಿ ಪೊಲೀಸರಿಗೆ ಮಾಹಿತಿ ನೀಡಿದ್ದರು. ಈ ಬಗ್ಗೆ ವಿದ್ಯಾನಗರ ಠಾಣೆಯಲ್ಲಿ ದೂರು ದಾಖಲಾಗಿತ್ತು. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಸಿಸಿಬಿ ಪೊಲೀಸರು, ಆರೋಪಿ ಪತ್ತೆಗೆ ಮುಂದಾದರು. ಖಚಿತ ಮಾಹಿತಿ ಮೇರೆಗೆ ಮುರ್ಡೇಶ್ವರದಲ್ಲಿ ಆರೋಪಿಯನ್ನು ಪತ್ತೆ ಮಾಡಿ, ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಮಳೆಗಾಲದಲ್ಲಿ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಿ: ದರ್ಶನಾಪುರ



**ಯಾದಗಿರಿ, ಜೂ. 12–** ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಬಗೆಹರಿಸಲು ಮುಂಜಾಗ್ರತೆ ಕ್ರಮಗಳ ವಹಿಸುವ ಮೂಲಕ ಅಧಿಕಾರಿಗಳು ಸಾರ್ವಜನಿಕರ ಕಷ್ಟಗಳಿಗೆ ಸ್ಪಂದಿಸಬೇಕು ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪೂರ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇಂದು ಜಿಲ್ಲೆಯ ಕುಡಿಯುವ ನೀರಿನ ಸ್ಥಿತಿಗತಿಗಳ ಬಗ್ಗೆ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಕುಡಿಯುವ ನೀರಿನ ಸಮಸ್ಯೆ ಮತ್ತು ಪರಿಹಾರವಾಗಿ ಬಾಡಿಗೆ ಕೊಳವೆಬಾವಿಗಳ ಮೂಲಕ ನೀರು ಪೂರೈಸುತ್ತಿರುವ ಗ್ರಾಮಗಳಿಗೆ ಸ್ವಚ್ಛ, ಶುದ್ಧ ನೀರು ಒದಗಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಅಮೃತ 2.0 ಯೋಜನೆಯಡಿ ಒಟ್ಟು 7 ಪಟ್ಟಣಗಳು ಆಯ್ಕೆಯಾಗಿದ್ದು, ಒಟ್ಟು 340.92 ಕೋ.ರೂ.ಗಳ ಹಂಚಿಕೆಯಾಗಿರುತ್ತದೆ. ಕೇಂದ್ರ ಸರ್ಕಾರದ ಪಾಲು ಶೇ.50 ರಷ್ಟು, ರಾಜ್ಯ ಸರ್ಕಾರದ ಪಾಲು ಶೇ.40 ರಷ್ಟು, ಸ್ಥಳೀಯ ಸಂಸ್ಥೆಯ ಪಾಲು ಶೇ.10 ರಷ್ಟು ಇರುತ್ತದೆ ಎಂದು ತಿಳಿಸಿದರು. ಅಮೃತ 2.0 ಯೋಜನೆಯಡಿಯಲ್ಲಿ ನೀರು ಸರಬರಾಜು ಕಾಮಗಾರಿಗಳನ್ನು ಒಟ್ಟು 5 ಹಂತಗಳಲ್ಲಿ ಕೈಗೊಳ್ಳಲಾಗಿದೆ, ಈ ಯೋಜನೆಯಡಿ 7 ಪಟ್ಟಣಗಳಾದ ಹುಣಸಗಿ, ಕೆಂಭಾವಿ, ಕಕ್ಕೇರಾ, ಶಹಾಪೂರ, ಭೀಮರಾಯನಗುಡಿ, ಯಾದಗಿರಿ, ಗುರುಮಿಠಕಲ್ ಕಾಮಗಾರಿಗಳು ಪ್ರಗತಿಯಲ್ಲಿವೆ, ಈ ಕಾಮಗಾರಿಗಳನ್ನು 2 ವರ್ಷಗಳಲ್ಲಿ ಪೂರ್ಣಗೊಳಿಸಲು ಉದ್ದೇಶಿಸಿದೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ, 1ನೇ ಕಂತು ಅನುದಾನ ಕ್ರಿಯಾ ಯೋಜನೆಗೆ ನೀಡಲಾಗಿದ್ದು, ಒಟ್ಟು 8 ಕಾಮಗಾರಿಗಳಲ್ಲಿ 4 ಪೂರ್ಣಗೊಂಡಿ–ದ್ದು, ಉಳಿದ ಕಾಮಗಾರಿಗಳು ಶೀಘ್ರದಲ್ಲಿ ಮುಗಿಯುವ ಹಂತದಲ್ಲಿರುತ್ತದೆ. 2ನೇ ಕಂತು ಅನುದಾನಕ್ಕೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ. ಒಟ್ಟು 8 ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. 3 ಮತ್ತು 4ನೇ ಕಂತು ಅನುದಾನ ನೇರವಾಗಿ ನಗರ ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆ ಯಾಗಲಿದ್ದು, ಕೆಂಭಾವಿ, ಗುರುಮಿಠಕಲ್, ಹುಣಸಗಿ, ಸಂಸ್ಥೆಗಳ ಕ್ರಿಯಾ ಯೋಜನೆ ಅನುಮೋದನೆಯಾಗಿದ್ದು, ಶಹಾಪೂರ, ಸುರಪುರ, ನಗರಸಭೆಗಳು ಕ್ರಿಯಾ ಯೋಜನೆ ಸಲ್ಲಿಸಿದ್ದು, ಅನುಮೋದನೆ ನೀಡಬೇಕಾಗಿದೆ, ಯಾದಗಿರಿ ಕಕ್ಕೇರಾ ನಗರ ಸ್ಥಳೀಯ ಸಂಸ್ಥೆಗಳಿಂದ ಕ್ರಿಯಾ ಯೋಜನೆ ಪಡೆಯಬೇಕಾಗಿದೆ ಸೂಚಿಸಿದರು.

ಪ್ರಸ್ತುತ ಸಾಲಿನ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರಿಗಾಗಿ ಬಿಡುಗಡೆ ಮಾಡಿರುವ ಅನುದಾನ ಯಾದಗಿರಿ, ಶಹಾಪೂರ, ಸುರಪುರ, ನಗರಸಭೆ ಹಾಗೂ ಗುರುಮಿಠಕಲ್, ಕೆಂಭಾವಿ, ಕಕ್ಕೇರಾ ಪುರಸಭೆ, ಮತ್ತು ಹುಣಸಗಿ ಪಟ್ಟಣ ಪಂಚಾಯತ್ ಸೇರಿ ಜಿಲ್ಲೆಯಾದ್ಯಂತ ಒಟ್ಟು 50.96 ಕೋ.ರೂ.ಗಳ ಅನುದಾನ ಸರ್ಕಾರದಿಂದ ಬಿಡುಗಡ ಯಾಗಿದೆ.ಎಸ್‌ಎಫ್ ಕುಡಿಯುವ ನೀರು ಅನುದಾನವು ನೇರವಾಗಿ ನಗರ ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆ ಯಾಗಿದ್ದು, ಶಹಾಪೂರ, ಗುರುಮಿಠಕಲ್, ಕೆಂಭಾವಿ, ಕಕ್ಕೇರಾ ಸಂಸ್ಥೆಗಳ ಕ್ರಿಯಾ ಯೋಜನೆ ಅನುಮೋದನೆಯಾಗಿದ್ದು, ಸುರಪುರ ಹಾಗೂ ಹುಣಸಗಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಬೇಕಾಗಿದೆ, ಯಾದಗಿರಿಯಿಂದ ಮಾತ್ರ ಕ್ರಿಯಾ ಯೋಜನೆ ಪಡೆಯಬೇಕಾಗಿದೆ ಸೂಚಿಸಿದರು.

ಕುಡಿಯುವ ನೀರು ಸರಬರಾಜು ಯೋಜನೆಗಳು ಮಂಡಳಿಯಿಂದ ಅನುಷ್ಠಾನಗೊಂಡು ನಿರ್ವಹಣೆಯಲ್ಲಿರುವ ಯೋಜನೆಗಳಡಿ ಸುರಪುರ ನಗರದ 2ನೇ ಹಂತದ ಕುಡಿಯುವ ನೀರು ಸರಬರಾಜು ಯೋಜನೆಯನ್ನು 2023ರ ಮಾರ್ಚ್ 18 ರಂದು ಪೂರ್ಣಗೊಳಿಸಿ ಚಾಲನೆಗೊಳಿಸಿದೆ. ಈ ಯೋಜನೆಯ 5 ವರ್ಷದ ನಿರ್ವಹಣೆಯಂತೆ 2023ರ ಏಪ್ರಿಲ್ 1 ರಿಂದ ಪ್ರಾರಂಭಿಸಲಾಗಿದೆ. ಈ ಯೋಜನೆ ಯಿಂದ ಸುರಪುರ ನಗರ–ಕ್ಕೆ 24*7 ನಿರಂತರ ನೀರು ಸರಬರಾಜು ಮಾಡಲಾಗುತ್ತಿದೆ ಎಂದರು.

ಶಹಾಪೂರ ನಗರಕ್ಕೆ ಸನ್ನತ್ತಿ ಬ್ರಿಡ್ಜ ಕಮ್ ಬ್ಯಾ–ರೇಜ್ ಮೂಲಕ ಸಗಟು ಕುಡಿಯುವ ನೀರು ಸರಬರಾಜು ಯೋಜನೆಯ ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ. ಈ ಯೋಜನೆಯನ್ನು 2025ರ ಜೂನ್ 30 ರಂದು ಚಾಲನೆಗೊಳಿಸಲು ಉದ್ದೇಶಿಸಿದೆ. ಶಹಾಪೂರ ನಗರದ ಒಳಚರಂಡಿ ಯೋಜನೆಯ ಸರ್ಕಾರದಿಂದ ಅನುಮೋದನೆಯಾಗಿರುತ್ತದೆ. ಈ ಯೋಜನೆಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ ಎಂದು ತಿಳಿಸಿದರು.



ಬೆಂಗಳೂರಿನ ಗಾಂಧಿ ಪಾರ್ಕ್ ಎಂಜಿ ರಸ್ತೆಯಲ್ಲಿ ಗುರುವಾರ ನಡೆದ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ರ್ಯಾಲಿಯಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಆರ್‌ಸಿಬಿ ಕಾಲ್ತುಳಿತದ ಸಾವು ಮರೆಮಾಚಲು ಮರು ಜಾತಿಗಣತಿ: ಯಶಪಾಲ್ ಸುವರ್ಣ



**ಕಲಬುರಗಿ, ಜೂ.12–** ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ವಿಜಯೋತ್ಸವದಲ್ಲಿ ಹನ್ನೊಂದು ಜನ ಅಭಿಮಾನಿಗಳ ಸಾವಿನ ಪ್ರಕರಣವನ್ನು ಮರೆಮಾಚಲು ರಾಜ್ಯ ಸರ್ಕಾರವು ಮರು ಜಾತಿಗಣತಿಗೆ ಆದೇಶ ನೀಡಿದ್ದು, ಕೂಡಲೇ ಆರ್‌ಸಿಬಿ ಅಭಿಮಾನಿಗಳ ದುರ್ಮರಣದ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜೀನಾಮೆ ಕೊಡಬೇಕು ಎಂದು ಉಡುಪಿ ಶಾಸಕ ಹಾಗೂ ಬಿಜೆಪಿ ಓಬಿಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಯಶಪಾಲ್ ಸುವರ್ಣ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 4ರಂದು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಹನ್ನೊಂದು ಜನರ ಸಾವಿನ ಪ್ರಕರಣವು ಕಾಂಗ್ರೆಸ್ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಆ ಇಕ್ಕಟ್ಟಿನಿಂದ ಪಾರಾಗಲು ಮತ್ತೊಮ್ಮೆ ಜಾತಿ ಗಣತಿಯನ್ನು ಮುನ್ನಲೆಗೆ ತರಲಾಗಿದೆ. ಜನರಿಗೆ ಮೂರ್ಖ ಮಾಡುವುದನ್ನು ಬಿಟ್ಟು ನೈತಿಕ ಹೊಣೆ ಹೊತ್ತು ಕೂಡಲೇ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳು ರಾಜೀನಾಮೆ ಕೊಡಬೇಕು. ಆರ್‌ಸಿಬಿ ವಿಜಯೋತ್ಸವದ ಲಾಭ ಪಡೆದು ಪುಕ್ಕಟ್ಟೆ ಪ್ರಚಾರ ಗಿಟ್ಟಿಸಿಕೊಳ್ಳಲು ಪೋಲಿಸ್ ಅಧಿಕಾರಿಗಳ ಸಲಹೆಗಳನ್ನು ಧಿಕ್ಕರಿಸಿ ವಿಧಾನಸೌಧ ಮತ್ತು ಚಿನ್ನಸ್ವಾಮಿ ಕ್ರೀಡಾಂಗಣ ಎರಡೆರಡು ಕಡೆಗಳಲ್ಲಿ ಯಾವುದೇ ಪೂರ್ವ ಯೋಜನೆ ಕೈಗೊಳ್ಳದೇ ಕಾಲ್ತುಳಿತದಲ್ಲಿ ಹನ್ನೊಂದು ಜನರು ಮೃತಪಟ್ಟಿರುವುದು ಇಡೀ ರಾಜ್ಯದ ಜನರಿಗೆ ಆಘಾತಕಾರಿ ಸಂಗತಿಯಾಗಿದೆ. ಇದರಿಂದ ಧೃತಿಗೆಟ್ಟ ಸರ್ಕಾರ ಅಧಿಕಾರಿಗಳ ಸಲಹೆಗಳನ್ನು ಧಿಕ್ಕರಿಸಿ ಕಾರ್ಯಕ್ರಮ ಆಯೋಜನೆ ಮಾಡಿರುವ ಅವರೇ, ತಮ್ಮ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ಪೋಲಿಸ್ ಅಧಿಕಾರಿಗಳನ್ನು ಅಮಾನತ್ತು ಮಾಡಿದ್ದು ನಾಚಿಕೆ ಗೇಡಿತನದ್ದು ಎಂದು ಟೀಕಿಸಿದರು.

ಆತುರದಿಂದ ಕಾರ್ಯಕ್ರಮ ನಿಯೋಜನೆ ಮಾಡಿರುವ ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕಾಂಗ್ರೆಸ್ ಸರ್ಕಾರವೇ ಹನ್ನೊಂದು ಜನ ಅಮಾಯಕರ ಸಾವಿಗೆ ನೇರ ಹೊಣೆ. ಆದ್ದರಿಂದ ಅದನ್ನು ಮರೆಮಾಚಲು ಜಾತಿ ಜನಗಣತಿ ಜಾರಿಗೆ ತಂದಿದ್ದಾರೆ ಎಂದು ಅವರು ದೂರಿದರು.

ಕಳೆದ 2014–2015ನೇ ಸಾಲಿನಲ್ಲಿ ರಾಜ್ಯದಲ್ಲಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸಿ ಹಿಂದುಳಿದ ವರ್ಗಗಳ ಸಮುದಾಯದವರಿಗೆ ನ್ಯಾಯ ಒದಗಿಸುವ ದೃಷ್ಟಿಯಿಂದ ಕಾಂತರಾಜು ಅವರ ನೇತೃತ್ವದಲ್ಲಿ ವರದಿ ಸಿದ್ಧಪಡಿಸಲು ಸುಮಾರು 165 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದರು. ಆದಾಗ್ಯೂ, ತಮ್ಮ ರಾಜಕೀಯ ದುರುದ್ದೇಶದಿಂದ ದಲಿತರು, ಹಿಂದುಳಿದ ವರ್ಗದವರನ್ನು ಮತ್ತು ಅಲ್ಪಸಂಖ್ಯಾತರನ್ನು ದುರುಪಯೋಗ ಮಾಡಿಕೊಂಡಿರುವ ಸಿದ್ಧರಾಮಯ್ಯ ಅವರು ತೆಲಂಗಾಣ ಮತ್ತು ಬಿಹಾರ್ ಮಾದರಿಯಲ್ಲಿ ಕರ್ನಾಟಕದಲ್ಲಿಯೂ ಕೂಡ ಒಂದೇ ವರ್ಷದಲ್ಲಿ ವರದಿ ಜಾರಿಗೆ ತರಬಹುದಿತ್ತು. ಆದಾಗ್ಯೂ, ನಿನ್ನೆ ವರಿಷ್ಠರು ಸಭೆ ಸೇರಿ ಕರ್ನಾಟಕ ಸರ್ಕಾರದ ವಿವಾದಿತ ಕಾಂತರಾಜ್ ವರದಿಯನ್ನು ಕೈಬಿಡಲು ನಿರ್ಧರಿಸಿತು. ಈ ನಿರ್ಧಾರವನ್ನು ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರು ಘೋಷಿಸಿದ್ದು, ಗೊಂದಲಗಳನ್ನು ಹುಟ್ಟುಹಾಕಿದೆ. ಸಚಿವ ಸಂಪುಟದಲ್ಲಿ ಕೈಗೊಳ್ಳಬೇಕಾದ ನಿರ್ಧಾರವನ್ನು ವೇಣುಗೋಪಾಲ್ ಅವರು ಹೇಗೆ ಪ್ರಕಟಿಸಿದರು? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಸುಮಾರು ಹತ್ತು ವರ್ಷಗಳಿಂದ ಜಾತಿ ಜಾತಿಗಳ ಮಧ್ಯೆ ಜಗಳ ಹಚ್ಚಿ ಯಾವುದೇ ವರದಿ ಜಾರಿಗೊಳಿಸದೇ ತಮಾಷೆ ನೋಡಿಕೊಂಡಿರುವ ಅವರು ಹಿಂದುಳಿದ ವರ್ಗಗಳ ಮುಖವಾಡ ಧರಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು 165 ಕೋಟಿ ರೂ.ಗಳನ್ನು ಖರ್ಚು ಮಾಡಿರುವುದೇಕೆ? ಈಗ ಮತ್ತೊಮ್ಮೆ ಜಾತಿ ಜನಗಣತಿ ಮಾಡುವುದಾದರೆ ಮತ್ತೆ 500 ಕೋಟಿ ರೂ.ಗಳನ್ನು ಕೊಡುವವರು ಯಾರು? ಸರ್ಕಾರದ ದುಡ್ಡು ಮನಬಂದಂತೆ ಖರ್ಚು ಮಾಡುವ ಅಧಿಕಾರ ಅವರಿಗಿದೆಯೇ? ಖಜಾನೆಗೆ ಆದ 165 ಕೋಟಿ ರೂ.ಗಳ ನಷ್ಟವನ್ನು ಯಾರು ಭರಿಸುತ್ತಾರೆ? ಕೂಡಲೇ ಆ ಹಣವನ್ನು ಸಿದ್ಧರಾಮಯ್ಯ ಅವರೇ ಭರಿಸಬೇಕು ಎಂದು ಅವರು ಒತ್ತಾಯಿಸಿದರು.

ಕೇಂದ್ರದಲ್ಲಿ ನರೇಂದ್ರ ಮೋದಿ ಅವರು ದೇಶಾದ್ಯಂತ ಜನಗಣತಿ ಜೊತೆಗೆ ಜಾತಿ ಗಣತಿ ಮಾಡುವ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಇಂತಹ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ವರಿಷ್ಠರು ಮತ್ತು ರಾಜ್ಯ ಸರ್ಕಾರ ಹನ್ನೊಂದು ಜನ ಅಮಾಯಕರು ಸಾವನ್ನಪ್ಪಿರುವ ವಿಷಯ ದೇಶಾದ್ಯಂತ ಹರಡುತ್ತಿದೆ. ಹೀಗಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ಇಕ್ಕಟ್ಟಿಗೆ ಸಿಲುಕಿದೆ. ಅದನ್ನು ಮರೆಮಾಚಲು ಒಂದೇ ಕಲ್ಲಿಗೆ ಎರಡು ಹಣ್ಣುಗಳನ್ನು ಹೊಡೆಯುವ ದೃಷ್ಟಿಯಿಂದ ಜಾತಿ ಜನಗಣತಿ ಮಾಡಿ ನಾವು ಹಿಂದುಳಿದವರ ಪರ ಇದ್ದೇವೆ ಎಂದು ತೋರಿಸಿರುವುದು ಅಮಾಯಕರ ಸಾವಿನ ಕ್ಲಿಷ್ಟಕರ ವಾತಾವರಣ ತಿಳಿಗೊಳಿಸುವ ಪ್ರಯತ್ನವಾಗಿದೆ. ರಾಜ್ಯ ಸರ್ಕಾರಗಳಿಗೆ ಈ ರೀತಿ ಜಾತಿಗಣತಿ ನಡೆಸುವ ಅಧಿಕಾರ ಸಂವಿಧಾನದ ಕಲಂ–246ರ ಪ್ರಕಾರ ಇಲ್ಲ. ಹೀಗಾಗಿ ಸಿದ್ಧರಾಮಯ್ಯ ಸರ್ಕಾರವು ಜಾತಿ ಜನಗಣತಿ ನಾಟಕವನ್ನು ನಿಲ್ಲಿಸಬೇಕು ಎಂದು ಅವರು ಒತ್ತಾಯಿಸಿದರು.

# ಕೃಷಿ ವಿವಿ–ಹಟ್ಟಿ ಚಿನ್ನದ ಗಣಿಗೆ ವಿಧಾನ ಪರಿಷತ್ ಭರವಸೆ ಸಮಿತಿ ಭೇಟಿ: ಶರವಣ



ಕಲಬುರಗಿಯಲ್ಲಿ ವಿಧಾನ ಪರಿಷತ್ ಭರವಸೆಗಳ ಸಮಿತಿ ಅಧ್ಯಕ್ಷ ಶರವಣ ಟಿಎ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

**ಕಲಬುರಗಿ, ಜೂ.12–** ರಾಯಚೂರು ಜಿಲ್ಲೆಯ ಲಿಂಗಸೂರು ತಾಲ್ಲೂಕಿನ ಹಟ್ಟಿ ಚಿನ್ನದ ಗಣಿ, ಕೃಷಿ ಶ್ವವಿದ್ಯಾಲಯ, ವಾಣಿಜ್ಯ, ಕೈಗಾರಿಕೆ ಭರವಸೆ ಸಮಿತಿಯ ಭೇಟಿ ನೀಡಲಿದ್ದು, ಅಲ್ಲಿನ ಅಧಿಕಾರಿ ಗಳೊಂದಿಗೆ ಸಭೆಯನ್ನು ನಡೆಸಲಾ ಗುವುದು ಎಂದು ವಿಧಾನ ಪರಿಷತ್ತು ಭರವಸೆಗಳ ಸಮಿತಿಯ ಅಧ್ಯಕ್ಷ ಶರವಣ ಟಿ.ಎ ಅವರು ತಿಳಿಸಿದರು.

ನಗರದ ಐವಾನ ಶಾಹಿ ಸರ್ಕಾರಿ ಅತಿಥಿಗೃಹದಲ್ಲಿ ಪತ್ರಕರ್ತರನ್ನು ಉದ್ದೇಶಿ ಮಾತನಾಡಿ, ಈಗಾಗಲೇ ಕಲಬುರಗಿ ಜಿಲ್ಲೆಯ ಕಿದ್ವಾಯಿ ಆಸ್ಪತ್ರೆ 35 ವರ್ಷದಿಂದ ಅಭಿವೃದ್ಧಿ ಯಾಗಿಲ್ಲ. ಇದರ ಬಗ್ಗೆ ಮಹತ್ವದ ಸಭೆಯನ್ನು ಇಂದು ಮಾಡಿದ್ದೇವೆ. ಅಧಿಕಾರಿಗಳು ಇದರ ಬಗ್ಗೆ ಪ್ರಸ್ತಾವನೆ ಸಲ್ಲಿಸಿದ್ದರು. ಕಾರ್ಯರೂಪಕ್ಕೆ ಬಂದಿಲ್ಲ. ಈಗಾಗಲೇ ಸಮಿತಿಯಿಂದ ಮಾಹಿತಿ ಪಡೆದುಕೊಂಡು ಪ್ರಸ್ತಾವನೆ ಯನ್ನು ಸಾಧನದಲ್ಲಿ ಸಲ್ಲಿಸಲಾಗುವುದು ಎಂದು ಹೇಳಿದರು.

ಕಿದ್ವಾಯಿ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಆರ್ಥಿಕ ಹಣದ ಕೊರತೆ ಸಿಬ್ಬಂದಿಗಳ ಕೊರತೆ ನಾವೇ ಖುದ್ದಾಗಿ ತಿಳಿದುಕೊಂಡು ವೀಕ್ಷಣೆ ಮಾಡಿ ಎಲ್ಲ ಸಮಸ್ಯೆಗಳ ಬಗ್ಗೆ ತಿಳಿದುಕೊಳ್ಳಲು ಪ್ರಯತ್ನ ಮಾಡಿದ್ದೇವೆ ಹಾಗೂ ಆಸ್ಪತ್ರೆ ಭೇಟಿ ನೀಡಿ ರೋಗಿಗಳ ಕುಂದು ಕೊರತೆಗಳನ್ನು ಆಲಿಸಿದ್ದೇವೆ ಎಂದು ಹೇಳಿದರು.

ಬೆಂಗಳೂರಿನ ಕ್ವಿದಾಯಿ ಆಸ್ಪತ್ರೆಗಳಿಗೆ ಅನೇಕ ದೇಶಗಳಿಂದ ಬಂದು ಕ್ಯಾನ್ಸರ ಚಿಕಿತ್ಸೆ ಪಡೆದುಕೊಂಡು ಗುಣಮುಖರಾಗಿ ಹೋಗುತ್ತಾರೆ. ಕರ್ನಾಟಕ ಎಲ್ಲಾ ಜಿಲ್ಲೆಯಲ್ಲಿ ದೊಡ್ಡಮಟ್ಟದ ಆಸ್ಪತ್ರೆ ಕಟ್ಟಿಸಲು ಸಾಧ್ಯವಾಗದಿದ್ದರೆ ಬೇಸಿಕ್ ಚಿಕಿತ್ಸೆಯನ್ನು ಪ್ರತಿಯೊಂದು ಆಸ್ಪತ್ರೆಯಲ್ಲಿ ನೀಡಲು ಪ್ರಯತ್ನಿಸಲಾ ಗುವುದು ಎಂದು ಹೇಳಿದರು.

ಕರ್ನಾಟಕ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ಕ್ಯಾನ್ಸರ್ ಆಸ್ಪತ್ರೆಗಳು ಸ್ಥಾಪಿಸುವ ಉದ್ದೇಶವಿದ್ದು ಎಲ್ಲಿ ಸ್ಥಳದ ಅವಕಾಶ ಇರುವುದಿಲ್ಲ ಅಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ಥಳವನ್ನು ತೆಗೆದುಕೊಂಡು ಕಾರ್ಯ ನಿರ್ವಾಹಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿದ್ದೇನೆ ಎಂದರು.

# ಆರ್ಥಿಕ ಬಲವರ್ಧನೆಗೆ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಡಿಸಿ ಕರೆ



ಬೀದರ ನಗರದಲ್ಲಿ ಜಿಲ್ಲಾಡಳಿತ ಮತ್ತು ಕೆಎಂಎಫ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಸಂಸದ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರ ಅನುದಾನದಲ್ಲಿ ಹಾಲು ಉತ್ಪಾದಕ ಸಹಕಾರಿ ಸಂಘಗಳಿಗೆ ಹಾಲಿನ ಕ್ಯಾನ್‌ಗಳನ್ನು ಒದಗಿಸಿಕೊಡುವ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶಿಲ್ಪ ಶರ್ಮ ಪಾಲ್ಗೊಂಡಿದ್ದರು.

**ಬೀದರ್, ಜೂ.12–** ಎಸ್. ಎಸ್. ಹಾಲಿನ ಕ್ಯಾನ್ ಮತ್ತು ಡಿಪಿಎಂಸಿಯುಗಳನ್ನು ಒದಗಿಸಿ ಕೊಡುವುದರಿಂದ ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘದ ಸದಸ್ಯರಿಗೆ ಬಹಳಷ್ಟು ಉಪಯುಕ್ತವಾಗಲಿದೆ. ಹಾಲು ಉತ್ಪದಕರು ತಮ್ಮ ಆರ್ಥಿಕ ಬಲವರ್ಧನೆ ಪ್ರಯತ್ನಿಸಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ತಿಳಿಸಿದರು.

ನಗರದಲ್ಲಿ ಜಿಲ್ಲಾಡಳಿತ ಬೀದರ ಸಂಯುಕ್ತಾಶ್ರಯದಲ್ಲಿ ಬೀದರನ ಕೆ.ಎಮ್.ಎಫ್.ಡೈರಿ ಚಿಕ್ಕಪೇಟದಲ್ಲಿ ಹಮ್ಮಿಕೊಂಡಿದ್ದ ಸಂಸದ ಡಾ.ವೀರೇಂದ್ರ ಹೆಗ್ಗಡೆ ಅವರ 2023–24ನೇ ಸಾಲಿನ ಸಂಸದರ ಅನುದಾನದಲ್ಲಿ ಬೀದರ ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲಿನ ಕ್ಯಾನಗಳು ಒದಗಿಸಿಕೊಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಆಕಳ ಹಾಲು ಮತ್ತು ಎಮ್ಮೆಯ ಹಾಲನ್ನು ಹಾಲಿನ ಈಚಿಣ & ಖಓಈ ಖಿಢಣ ಮಾಡುವುದರ ಮೂಲಕ 35 ರೂ. ರಿಂದ 65 ರೂ. ಪ್ರತಿ ಲೀಟರ ದೊರಕಲಿದ್ದು, ಅವರ ಆರ್ಥಿಕ ಆದಾಯ ಹೆಚ್ಚಲಿರುವುದರಿಂದ ಈ ಯೋಜನೆಯ ಸದುಪಯೋಗ ಪಡೆದುಕೊಂಡು ಹಾಲು ಉತ್ಪಾದಕರ ಸಹಕಾರ ಸಂಘಗಳು ಆರ್ಥಿಕವಾಗಿ ಬಲವರ್ಧನೆಗೊಳ್ಳಬೇಕೆಂದು ತಿಳಿಸಿದರು.

ಜಿಲ್ಲೆಯ 192 ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲಿನ ಕ್ಯಾನ್‌ಗಳನ್ನು 51 ಲಕ್ಷ ರೂ. ಅನುದಾನದಲ್ಲಿ ಹಾಗೂ 89 ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ತಲಾ ಒಂದು ಆಕಒಅಗ ಗಳನ್ನು 97 ಲಕ್ಷ ರೂ. ಅನುದಾನದಲ್ಲಿ ಒದಗಿಸಿಕೊಡಲಾಗಿರುತ್ತದೆಂದು ತಿಳಿಸಿದರು.

# ಸಕಾಲ ಪ್ರಗತಿ ಪರಿಶೀಲನೆ: ಸಕಾಲದಲ್ಲಿ ಅರ್ಜಿ ವಿಲೇವಾರಿಯಾಗದಿದ್ದರೆ ದಂಡ– ಕಲಬುರಗಿ ಡಿ.ಸಿ



**ಕಲಬುರಗಿ, ಜೂ. 12–** ಸಾರ್ವಜನಿಕರ ಅರ್ಜಿ ತ್ವರಿತವಾಗಿ ಮತ್ತು ಕಾಲಮಿತಿಯಲ್ಲಿ ವಿಲೇವಾರಿ ಮಾಡಲು "ಸಕಾಲ್" ಯೋಜನೆ ಜಾರಿಗೊಳಿಸಿದ್ದು, ಇಲ್ಲಿಯೂ ಬಾಕಿ ಇಟ್ಟುಕೊಂಡರೆ ಮುಲಾಜಿಲ್ಲದೆ ಸಂಬಂಧಪಟ್ಟ ಅಧಿಕಾರಿ–ಸಿಬ್ಬಂದಿಗಳ ಸಂಬಳದಲ್ಲಿ ಕಡಿತ ಮಾಡಿ ದಂಡ ಪಾವತಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಕಾಲ್, ಐ.ಪಿ.ಜಿ ಆರ್.ಎಸ್, ಸಿ.ಸಿ.ಎಮ್.ಎಸ್., ಸಿ.ಎಂ.ಜನಸ್ಪಂದನ, ಕಲಬುರಗಿ ಕನೆಕ್ಟ್ ಅರ್ಜಿ ವಿಲೇವಾರಿ ಸಂಬಂಧ ಪ್ರಗತಿ ಪರಿಶೀಲನೆ ನಡೆಸಿದ ಅವರು, ಸಾರ್ವಜನಿಕರಿಗೆ ತ್ವರಿತವಾಗಿ ಸೇವೆ ಒದಗಿಸಲು "ಇಂದು ನಾಳೆ ಇನ್ನಿಲ್ಲ, ಹೇಳಿದ ದಿನ ತಪ್ಪೊಲ್ಲ" ಎಂಬ ಘೋಷವಾಕ್ಯದ ಕರ್ನಾಟಕ ಸಕಾಲ್ ಅಧಿನಿಯಮ–2011 ಜಾರಿಗೆ ತಂದಿದ್ದು, ಅಧಿಕಾರಿ–ಸಿಬ್ಬಂದಿಗಳು ಇದರ ಉದ್ದೇಶ ಅರಿತು ಕೆಲಸ ಮಾಡಬೇಕು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರ ಕನಸಿನ ಯೋಜನೆ ಇದಾಗಿದ್ದು, ಕೂಡಲೆ ಬಾಕಿ ಅರ್ಜಿ ವಿಲೇವಾರಿ ಮಾಡಬೇಕು. ಜಿಲ್ಲೆಯಲ್ಲಿ ಕಲಬುರಗಿ ಮಹಾನಗರ ಪಾಲಿಕೆಯಲ್ಲಿ 98 ಸೇರಿದಂತೆ ಇಂದಿನ ದಿನಕ್ಕೆ ವಿವಿಧ ಇಲಾಖೆಯಲ್ಲಿ ಒಟ್ಟಾರೆ 328 ಅರ್ಜಿ ವಿಲೇವಾರಿಗೆ ಬಾಕಿ ಇದ್ದು, ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಇಲಾಖಾವಾರು ಲಾಗಿನ್ ನಲ್ಲಿ ಅರ್ಜಿ ವಿಲೇವಾರಿಗೊಳಿಸಿ ಶೂನಕ್ಕೆ ತನ್ನಿ ಎಂದರು.

ಸಕಾಲ್‌ನಲ್ಲಿ ಸಲ್ಲಿಕೆಯಾದ ಅರ್ಜಿಯನ್ನು 30 ದಿನದಲ್ಲಿ ವಿಲೇವಾರಿಗೆ ಸಮಯ ಇದೆ. ಈ ಅವಧಿ ಅರ್ಜಿ ವಿಲೇವಾರಿಗೆ ಸಾಕಾಗುತ್ತಿದೆ. ಕಾಲಮಿತಿಯಲ್ಲಿ ಸೇವೆ ನೀಡಲು ವಿಳಂಬವಾದಲ್ಲಿ ಸಂಬಂಧಪಟ್ಟ ಅಧಿಕಾರಿ–ಸಿಬ್ಬಂದಿಗಳ ವೇತನ ಬಡ್ತಿಗೂ ತಡೆ ಹಿಡಿಯಿರಿ ಎಂದ ಡಿ.ಸಿ. ಅವರು, ಕೆಲವೊಂದು ಇಲಾಖೆಯಲ್ಲಿ ತಾಂತ್ರಿಕ ಸಮಸ್ಯೆ ಕಾರಣ ಅರ್ಜಿ ವಿಲೇವಾರಿಗೆ ಸಮಸ್ಯೆಯಾಗುತ್ತಿರುವುದರಿಂದ ಸಕಾಲ್ ಮಿಷನ್ ನಿರ್ದೇಶಕರಿಗೆ ಪತ್ರ ಬರೆಯಬೇಕು ಎಂದರು.

ಐ.ಪಿ.ಜಿ.ಆರ್.ಎಸ್. ಬಾಕಿ ಅರ್ಜಿ ಶುಕ್ರವಾರದೊಳಗೆ ವಿಲೇವಾರಿಯಾಗದಿದ್ದಲ್ಲಿ, ಸಂಬಂಧ ಪಟ್ಟವರಿಗೆ ನೋಟಿಸ್ ಜಾರಿಗೊಳಿಸಿ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರಿಗೆ ಸೂಚಿಸಿದ ಡಿ.ಸಿ. ಅವರು, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಕನಸಿನ ಯೋಜನೆ "ಕಲಬುರಗಿ ಕನೆಕ್ಟ್" ನಲ್ಲಿ 95 ಅರ್ಜಿ ವಿಲೇವಾರಿಗೆ ಬಾಕಿ ಇದ್ದು, ಕೂಡಲೆ ವಿಲೇವಾರಿಗೊಳಿಸಿ ಎಂದರು.

ಕೋರ್ಟ್ ಕೇಸ್ ಮಾನಿಟರಿಂಗ್ ಸಿಸ್ಟಮ್ ನಲ್ಲಿ ಜಿಲ್ಲೆಯಾದ್ಯಂತ ವಿವಿಧ ಇಲಾಖೆಗೆ ಸಂಬಂಧಿಸಿದ 1,203 ಪ್ರಕರಣಗಳು ನ್ಯಾಯಲಯದಲ್ಲಿ ಬಾಕಿ ಇದ್ದು, ತ್ವರಿತವಾಗಿ ವಿಲೇವಾರಿಗೆ ಮುಂದಾಗಬೇಕು. ರಿಟ್ ಪಿಟೀಷನ್, ರಿಟ್ ಅಪೀಲ್ ಪ್ರಕರಣಗಳಲ್ಲಿ ಕೋರ್ಟ್ ನಲ್ಲಿ ಕೇಸ್ ದಾಖಲಾಗಿದ್ದ ಮಾಹಿತಿ ದೊರೆತ ಕೂಡಲೆ ಲಿಟಿಗೇಷನ್ ಕಂಡಕ್ಟಿಂಗ್ ಆಫೀಸರ್ ನೇಮಿಸಬೇಕು. ಸರ್ಕಾರಿ ವಕೀಲರನ್ನು ಭೇಟಿಯಾಗಿ ಇಲಾಖೆಯ ವಾದ ಮಂಡಿಸಬೇಕು. ಪ್ರಕರಣ ವಿಲೇವಾರಿ ನಂತರ ಕೋರ್ಟ್ ತೀರ್ಪಿನಂತೆ ಕ್ರಮ ವಹಿಸಲು ಇಲಾಖಾ ಮುಖ್ಯಸ್ಥರಿಗೆ ಮಾಹಿತಿ ನೀಡಬೇಕು ಎಂದರು.

## ಬ್ರಾಹ್ಮಣ ಮಹಾಸಭಾ ಸದಸ್ಯತ್ವ ಅಭಿಯಾನ

# ಒಂದು ವಾರದಲ್ಲಿ 500 ಸದಸ್ಯರ ನೋಂದಣಿ: ವೆಂಕಟ ಕುಲಕರ್ಣಿ



ಬೀದರ್‌ಜಿಲ್ಲೆಯಲ್ಲಿ ಕೇವಲ 30 ಸದಸ್ಯತ್ವ ಹೊಂದಿದ್ದ ಬ್ರಾಹ್ಮಣ ಮಹಾಸಭಾ ವೆಂಟರಾವ್ ಕುಲಕರ್ಣಿ ನೇತೃತ್ವದಲ್ಲಿ ಸದಸ್ಯತ್ವ ಅಭಿಯಾನದಲ್ಲಿ ಕೇವಲ ಒಂದು ವಾರದಲ್ಲಿ 500 ಸದಸ್ಯರ ನೋಂದಣಿ ಮಾಡಲಾಗಿದೆ.

ಬೀದರ್, ಜೂ. 12 : ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಲ್ಲಾ ಘಟಕದಿಂದ ಹಾಗೂ ಆಯಾ ತಾಲ್ಲೂಕು ಘಟಕಗಳ ಜೊತೆಗೂಡಿ ಜಿಲ್ಲೇಯಲ್ಲಿ ಸದಸ್ಯತ್ವ ಅಭಿಯಾನ ಯಶಸ್ವಿಯಾಗಿ ನಡೆಯುತ್ತಿದ್ದು, ಇಲ್ಲಿಯವರೆಗೆ 500ಕ್ಕೂ ಹೆಚ್ಚು ಜನ ಸದಸ್ಯತ್ವ ಪಡೆದಿದ್ದಾರೆ ಎಂದು ಜಿಲ್ಲಾ ಅಧ್ಯಕ್ಷ ವೆಂಕಟರಾವ ಕುಲಕರ್ಣಿ ಹುಮನಾಬಾದ್ ಅವರು ಹೇಳಿದರು.

ನಗರದ ಗುರು ರಾಘವೇಂದ್ರ ಮಠದಲ್ಲಿ ನಡೆದ ಜಿಲ್ಲಾ ಪಧಾಧಿಕಾರಿಗಳಿಗೆ ಸನ್ಮಾನ ಹಾಗೂ ಹೆಚ್ಚು ಸದಸ್ಯತ್ವ ಮಾಡಿಸಿದ ಪದಾಧಿಕಾರಿಗಳಿಗೆ ಸನ್ಮಾನಿಸಿ ಅಭಿನಂದಿಸಿ ಮಾತನಾಡಿದ ಅವರು, ಹೆಚ್ಚು ಹೆಚ್ಚು ಸದಸ್ಯತ್ವ ಮಾಡಿಸಬೇಕು. ತಾಲ್ಲೂಕು ಘಟಕದ ಅಧ್ಯಕ್ಷ ಮನೋಹರ್ ದಂಡೆ ಅವರು ಮಾತನಾಡಿ, ಜಿಲ್ಲೆಯಲ್ಲಿ ಸದಸ್ಯರ ಸಂಖ್ಯೆ 500 ದಾಟಿದ್ದು, ಅದರಲ್ಲಿ ಬೀದರ್ ತಾಲ್ಲೂಕಿನಲ್ಲಿ ಹೊಸ ಸದಸ್ಯರ ಸಂಖ್ಯೆ 300 ದಾಟಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರಾಗಲು ಸಹಕರಿಸಿದ ಸಮಾಜದ ಹಿರಿಯರಿಗೂ, ಸದಸ್ಯರಿಗೂ ಹಾಗೂ ನನ್ನ ಎಲ್ಲ ತಾಲ್ಲೂಕಾ ಘಟಕ ಎಲ್ಲ ಪದಾಧಿಕಾರಿಗಳಿಗೂ ಅಭಿನಂದನೆ ಸಲ್ಲಿಸುವೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಸದಸ್ಯರನ್ನು ಮಾಡಿ ಎಕೆಬಿಎಂಎಸ್ ಬಲಿಷ್ಠ ಮಾಡೋಣ ಎಂದರು.

ಇದೇ ಸಂದರ್ಭದಲ್ಲಿ ಬೀದರ್ ತಾಲ್ಲೂಕಿನಲ್ಲಿ ಹೆಚ್ಚು ಸದ್ಯಸ್ಯರನ್ನು ಮಾಡಿದ ವೆಂಕಟ ಕುಲಕರ್ಣಿ ಗುಂಪಾ, ಪ್ರವೀಣ ಜೋಷಿ ಹಾಗೂ ರೇಖಾ ಕುಲಕರ್ಣಿ ಅವರಿಗೆ ಜಿಲ್ಲಾ ಘಟಕದಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗುರುರಾಜ್ ಸೇವಾ ಸಂಘದ ಅಧ್ಯಕ್ಷ ಸುಧಾಕರ್ ಪಾಟೀಲ್, ರಘುನಾಥ ಕುಲಕರ್ಣಿ, ಮಿಲಿಂದ್ ಆಚಾರ್ಯ, ಜಿಲ್ಲಾ ಕಾರ್ಯದರ್ಶಿಗಳಾದ ಅನೀಲ್ ಚಿಕಮಣ್ಣೂರ್, ರಾಮರಾವ್ ಶೆಂಬೆಲ್ಲಿ, ಖಜಾಂಚಿ ದಿನಕರ್ ಕುಲಕರ್ಣಿ, ಜಿಲ್ಲಾ ಸಂಯೋಜಕರಾದ ರಾಜೇಶ್ ಕುಲಕರ್ಣಿ, ಸತೀಷ ಜೋಷಿ, ಉದಯಕುಮಾರ್ ಕಮಠಾಣಾ, ಸಂತೋಷ ದೇಶಪಾಂಡೆ ತಾಳಮಡಗಿ, ಸುನೀಲ್ ಕುಲಕರ್ಣಿ, ಪ್ರವೀಣ್ ಜೋಷಿ, ಪ್ರಭಾಕರ್ ಕುಲಕರ್ಣಿ, ಅನಂತ್ ಗೋರ್ಟಾ, ಮುರಳಿಧರ ರಾವ್, ಸಂಜು ಬಾವಗಿ ಮುಂತಾ ದವರು ಉಪಸ್ಥಿತರಿದ್ದರು.

# ಅಂತರರಾಷ್ಟ್ರೀಯ ವೇದಿಕೆಯಲ್ಲಿ ಹೈ.ಕ. ಶಿಕ್ಷಣ ಸಂಸ್ಥೆಯ ವೈದ್ಯರ ಸಂಶೋಧನಾ ಖ್ಯಾತಿ



**ಕಲಬುರಗಿ, ಜೂ. 12–** ಕಲ್ಯಾಣ ಕರ್ನಾಟಕದ ಹೆಮ್ಮೆಯ ಕಲಬುರಗಿ ವೈದ್ಯಕೀಯ ಕ್ಷೇತ್ರವು ಜಾಗತಿಕ ವೇದಿಕೆಯಲ್ಲಿ ತನ್ನದೆಯಾದ ವಿಶಿಷ್ಟ ಖ್ಯಾತಿ ಹೊಂದಿದ್ದು, ಇಲ್ಲಿನ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಸಂಸ್ಥೆಯ ಎಸ್. ನಿಜಲಿಂಗಪ್ಪ ದಂತ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಮ್ಯಾಕ್ಸಿಲೋಫೇಶಿಯಲ್ (ಬಾಯಿ ಮತ್ತು ಮುಖ) ಶಸ್ತ್ರಚಿಕಿತ್ಸಾ ವಿಭಾಗದ ಪ್ರಾಧ್ಯಾಪಕ ಹಾಗೂ ವಿಭಾಗಾಧ್ಯಕ್ಷರೂ ಆದ ಡಾ.ಉಡುಪಿಕೃಷ್ಣ ಜೋಶಿ ಅವರು, 2025ರ ಮೇ 22ರಿಂದ 25ರ ವರೆಗೆ ಸಿಂಗಾಪುರದಲ್ಲಿ ನಡೆದ 26ನೇ ಅಂತರರಾಷ್ಟ್ರೀಯ ಮ್ಯಾಕ್ಸಿಲೋಫೇಶಿಯಲ್ (ಬಾಯಿ ಮತ್ತು ಮುಖ) ಶಸ್ತ್ರಚಿಕಿತ್ಸಾ ಸಮ್ಮೇಳನದಲ್ಲಿ (ಐಕಾಮ್ಸ್ 2025) ಮೂರು ಸಂಶೋಧನಾ ಪ್ರಬಂಧಗಳನ್ನು ಯಶಸ್ವಿಯಾಗಿ ಮಂಡಿಸಿ, ಕಲಬುರಗಿಗೆ ಜಾಗತಿಕ ಮಟ್ಟದಲ್ಲಿ ಮನ್ನಣೆ ತಂದಿದ್ದಾರೆ. ಈ ಪ್ರಬಂಧಗಳು ಕಠಿಣವಾದ ಸಮೀಕ್ಷೆಗೆ ಒಳಪಟ್ಟು ಆಯ್ಕೆಯಾಗಿದ್ದು, ವಿಶ್ವದಾದ್ಯಂತ ಕೆಲವೇ ಆಯ್ದ ಸಂಶೋಧಕರಿಗೆ ಮಾತ್ರ ಲಭಿಸುವ ಪ್ರಬಂದ ಮಂಡನೆಯ ಅವಕಾಶವನ್ನು ಇವರು ಗಳಿಸಿದ್ದಾರೆ. ಕಲಬುರಗಿಯಿಂದ ದಂತ ವೈದ್ಯಕೀಯ ಕ್ಷೇತ್ರದಲ್ಲಿ ಇಂತಹ ಅಪರೂಪದ ಗೌರವಕ್ಕೆ ಡಾ. ಜೋಶಿ ಪಾತ್ರರಾಗಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಅವರು ಹೇಳಿದರು.

ಸಂಸ್ಥೆಯ ಕಚೇರಿ ಸಭಾಂಗಣದಲ್ಲಿ ಡಾ.ಉಡುಪಿ ಕೃಷ್ಣ ಜೋಶಿ ಅವರಿಗೆ ಸನ್ಮಾನಿಸಿದ ನಮೋಶಿ ಅವರು, ವಿಶ್ವದ 180 ದೇಶಗಳ ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಭಾಗವಹಿದ್ದರು. ಈ ಸಮ್ಮೇಳನವು ಡಾ. ಜೋಶಿ ಅವರಿಗೆ ಕಲಬುರ್ಗಿಯ ಅತ್ಯಾಧುನಿಕ ಸಂಶೋಧನೆಯನ್ನು ಜಾಗತಿಕ ಮಟ್ಟದಲ್ಲಿ ಬೆಳಕಿಗೆ ತರುವ ಅಪೂರ್ವ ಸಂದರ್ಭವನ್ನು ಒದಗಿಸಿತ್ತು. ಅವರ ಪ್ರಬಂಧಗಳು ಬಾಯಿ ಮತ್ತು ಮುಖ ಶಸ್ತ್ರಚಿಕಿತ್ಸೆಯ ವೈವಿಧ್ಯಮಯ ಕ್ಷೇತ್ರಗಳನ್ನು ಒಳಗೊಂಡಿದ್ದು, ಸಂಸ್ಥೆಯ ವೈದ್ಯಕೀಯ ವಿಜ್ಞಾನದ ಪ್ರಗತಿಗೆ ಇರುವ ದೃಢ ಸಂಕಲ್ಪವನ್ನು ಎತ್ತಿ ತೋರಿವೆ ಎಂದರು.

ಡಾ. ಜೋಶಿ ಅವರ ಸಂಶೋಧನಾ ಮಂಡಿಸಿದ ಪ್ರಬಂಧಗಳಲ್ಲಿ "ಪೋಸ್ಟ್ ಟ್ರಾಮ್ಯಾಟಿಕ್ ಟ್ರಿಸ್ಮಸ್ ಮ್ಯಾಟ್ರಿಕ್ಸ್ ರಿದಮ್ ಚಿಕಿತ್ಸೆಯ ಪರಿಣಾಮಕಾರಿತ್ವ" ಎಂಬ ಅಧ್ಯಯನವು ಅಂತರರಾಷ್ಟ್ರೀಯ ವೈದ್ಯಕೀಯ ಸಮುದಾಯದ ಗಮನವನ್ನು ಸೆಳೆಯಿತು. ಆಘಾತ ದಿಂದಾಗುವ ದವಡೆಯ ಚಲನೆಯ ಅಡಚಣೆಗಳಿಗೆ ಹೊಸ ಚಿಕಿತ್ಸಾ ಪದ್ಧತಿಗಳನ್ನು ಈ ಸಂಶೋಧನೆಯು ಪರಿಶೀಲಿಸಿದೆ. ಅವರ ಎರಡನೇ ಪ್ರಮುಖ ಪ್ರಬಂಧವಾದ "ಮುಖದ ಮಧ್ಯಭಾಗದ ಆಘಾತಕಾರಿ ವಿಘಟನೆಯ ನಿರ್ವಹಣೆ – ಒಂದು ಸವಾಲು" ಎಂಬುದು ಸಂಕೀರ್ಣ ಮುಖದ ಗಾಯಗಳ ಚಿಕಿತ್ಸೆಯಲ್ಲಿ ಅಳವಡಿಸ

# ಸಂಸದ–ಶಾಸಕರ ಮನೆಗಳ ಮೇಲೆ ಇ.ಡಿ ದಾಳಿ ಬಿಜೆಪಿ ಷಡ್ಯಂತ್ರ

**ಬಳ್ಳಾರಿ, ಜೂ.12–** ವಿರೋಧ ಪಕ್ಷದ ನಾಯಕರು ಮತ್ತು ಕಾಂಗ್ರೆಸ್ ಎಂ.ಪಿ ಎಂ ಎಲ್ ಎ ಮನೆಗಳ ಮೇಲೆ ಪದೇ ಪದೇ ರಾಜ್ಯ ಮತ್ತು ಇಡೀ ರಾಷ್ಟ್ರದಾದ್ಯಂತ ಬಿಜೆಪಿ ಪ್ರಾಯೋಜಿತ ಈ.ಡಿ ದಾಳಿ ನಡೆಯುತ್ತಿದೆ, ಇದು ವಿರೋಧ ಪಕ್ಷಗಳನ್ನು ಕುಗ್ಗಿಸುವ ಭಾರತೀಯ ಜನತಾ ಪಕ್ಷದ ಷಡ್ಯಂತರ ಮತ್ತು ಕುತಂತ್ರವಾಗಿದೆ ಎಂದು ರಾಜ್ಯಸಭಾ ಸದಸ್ಯ ಸೈಯದ್ ನಾಸಿರ್ ಹುಸೇನ್ ಆರೋಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ, ನಗರ ಶಾಸಕ ಭರತ್ ರೆಡ್ಡಿ, ಕಂಪ್ಲಿ ಶಾಸಕ ಗಣೇಶ್, ಕೂಡ್ಲಿಗಿ ಶಾಸಕ ಡಾಕ್ಟರ್ ಶ್ರೀನಿವಾಸ್ ಮತ್ತು ಅತ್ಯಂತ ಮುಖ್ಯವಾಗಿ ಬಳ್ಳಾರಿ ಸಂಸದ ಈ ತುಕಾರಾಂ ಅವರ ಮನೆ ಮೇಲೆ ದಾಳಿ ನಡೆಸಿ ರುವುದು ಬಿಜೆಪಿಯ ಕುತಂತ್ರ ಮತ್ತು ದುರುದ್ದೇಶದಿಂದ ಕೂಡಿದೆ, ಈ ಮೇಲ್ಕಂಡ ಎಲ್ಲಾ ಶಾಸಕರು ರಾಜಕೀಯ ಮತ್ತು ವ್ಯವಹಾರಗಳಲ್ಲಿ ಶುದ್ಧ ಹಕ್ತರಾಗಿದ್ದಾರೆ, ಇವರಿಂದ ಒಂದು ಪೇಪರ್ ಅಥವಾ ನಯಾ ಪೈಸೆಯನ್ನು ಸಹ ವಶಪಡಿಸಿಕೊಳ್ಳಲಾಗದೆ ಬಂದ ದಾರಿಗೆ ಸುಂಕವಿಲ್ಲ ಎಂಬಂತೆ ಇ.ಡಿ ಬರಿಗೈಯಲ್ಲಿ ವಾಪಸ್ ಹೋಗಿದೆ, ಲೋಕಸಭಾ ಚುನಾವಣೆಂ ುಲ್ಲಿ ಎಸ್‌ಟಿ ನಿಗಮದ ಹಣವನ್ನು ಬಳಸಲಾಗಿದೆ ಎಂದು ಸುಖ ಸುಮ್ಮನೆ ವಿರೋಧ ಪಕ್ಷಗಳು ಆರೋಪವನ್ನು ಮಾಡುತ್ತಿವೆ, ಆದರೆ ಎಸ್ಟಿ ನಿಗಮದಲ್ಲಿ ನಡೆದಿದೆ ಎನ್ನಲಾದ ಅಕ್ರಮದ ಹಣ ಈಗಾಗಲೇ ಶೇಕಡ 95 ರಷ್ಟು ವಾಪಸ್ ಆಗಿದೆ, ಇನ್ನು ಹೇಗೆ ಆ ಹಣವನ್ನು ಎಂಪಿ ಚುನಾವಣೆಯಲ್ಲಿ ಬಳಸಲು ಸಾಧ್ಯ ಎಂದು ಪ್ರಶ್ನಿಸಿದರು.

ಬಿಜೆಪಿ ಆಡಳಿತದಿಂದ ಇಲ್ಲಿಯವರೆಗೆ ಈಡಿ ದಾಳಿ ನಡೆಸಿರುವುದು ಇದನ್ನು ಗಮನಿಸಿದಲ್ಲಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ವಿರೋಧ ಪಕ್ಷವೇ ಇರಬಾರದು ಎಂಬಂತೆ ವರ್ತಿಸುತ್ತದೆ, ಇಡಿ ಮತ್ತು ಸಿ ಬಿ ಐ ಯನ್ನು ಬಳಸಿಕೊಂಡು ರಾಷ್ಟ್ರದಲ್ಲಿ ಇತರೆ ಪಕ್ಷಗಳ ಆಡಳಿತವನ್ನು ಹೈಜಾಕ್ ಮಾಡಿ ಆ ರಾಜ್ಯದಲ್ಲಿ ಹಿಂಭಾಗಲಿನ ಮೂಲಕ ಆಡಳಿತವನ್ನು ಹಿಡಿಯಲು ಬಿಜೆಪಿ ಸರ್ಕಾರ ಸಂಚುರೂಪಿಸುತ್ತದೆ, ಇದು ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ ಎಂದು ಬಿಜೆಪಿ ನಡೆಯನ್ನು ಖಂಡಿಸಿದರು.

# ಪರಿಶಿಷ್ಟ ಪಂಗಡ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಪಾಲಿಕೆ ಸದಸ್ಯ ಕೆ ಹನುಮಂತಪ್ಪ ಭೇಟಿ, ಪರಿಶೀಲನೆ



**ಬಳ್ಳಾರಿ, ಜೂ.12–** ನಗರದ 22ನೇ ವಾರ್ಡಿನ ಪರಿಶಿಷ್ಟ ವರ್ಗಗಳ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಇಂದು ಮುಂಜಾನೆ ಮಹಾನಗರ ಪಾಲಿಕೆ ಸದಸ್ಯ ಕೆ ಹನುಮಂತಪ್ಪ ದಿಶೀರ್ ಭೇಟಿ ನೀಡಿ ವ್ಯವಸ್ಥೆಯನ್ನು ಪರಿಶೀಲಿಸಿದರು.

ಅಲ್ಲಿನ ವಿದ್ಯಾರ್ಥಿನಿಯರು ಕಳಪೆ ಆಹಾರ ಸೇವಿಸಿ ಫುಡ್ ಪಾಯಿಸನ್ ಹಾಗೆ ವಿದ್ಯಾರ್ಥಿಗಳು ಅನಾರೋಗ್ಯದಿಂದ ವಿಮ್ಸ್ ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಅಡ್ಮಿಟ್ ಆಗಿದ್ದು ಕೆಲ ವಿದ್ಯಾರ್ಥಿನಿಯರು ತಮ್ಮ ತಮ್ಮ ಊರಿಗಳಿಗೆ ತೆರಳಿದ್ದು ಈ ಹಾಸ್ಟಲ್‌ನಲ್ಲಿ ತೊಂದರೆ ಅನುಭವಿಸುತ್ತಿರುವ ವಿದ್ಯಾರ್ಥಿನಿಯರು 22ನೇ ವಾರ್ಡಿನ ಮಹಾನಗರ ಪಾಲಿಕೆ ಸದಸ್ಯರಾದ ಹನುಮಂತಪ್ಪನವರ ಗಮನಕ್ಕೆ ತಂದಿದ್ದು ಇಂದು ಮುಂಜಾನೆ ವಿದ್ಯಾರ್ಥಿ ನಿಲಯದ ಎಲ್ಲಾ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆರಿಸಿ ಅಲ್ಲಿ ಕಳಪೆ ಆಹಾರ ಸ್ವಚ್ಛತೆ ಇಲ್ಲದಿರುವುದು ಶೌಚಾಲಗಳ ದುರ್ ಸ್ಥಿತಿ ಇವೆಲ್ಲವೂ ಮೇಲ್ನೋಟಕ್ಕೆ ಎದ್ದು ಕಾಣುತ್ತಿತ್ತು. ಕೂಡಲೇ ಜಿಲ್ಲಾ ಪರಿಶಿಷ್ಟ ಪಂಗಡಗಳ ಅಧಿಕಾರಿಯ ದಿವಾಕರ್ ಅವರಿಗೆ ತಾಲೂಕು ಪರಿಶಿಷ್ಟ ಪಂಗಡಗಳ ಅಧಿಕಾರಿಯಾಗ ಗಾದಿಲಿಂಗಪ್ಪ ಅವರಿಗೆ ದೂರವಾಣಿ ಮುಖಾಂತರ ವಿಷವನ್ನು ತಿಳಿಸಿ ಕೂಡಲೇ ಹಾಸ್ಟೆಲ್ ಹತ್ರ ಬರಬೇಕೆಂದು ಆಗ್ರಹಿಸಿ ತಕ್ಷಣ 30 ನಿಮಿಷ ಸಮಯದಲ್ಲಿ ಇಬ್ಬರು ಅಧಿಕಾರಿಗಳು ಹಾಸ್ಟೆಲ್ ಹತ್ರ ಬಂದು ವಿದ್ಯಾರ್ಥಿನಿಯರಿಗೆ ಆಗಿರ್ತಕಂತ ತೊಂದರೆಯನ್ನು ಆರಿಸಿ ಮುಂದಿನ ದಿನಗಳಲ್ಲಿ ಈ ತರ ಆಗಿದ ರೀತಿಯಲ್ಲಿ ನೋಡಿಕೊಳ್ಳುತ್ತೇವೆ ಎಂದು ಭರವಸೆಯನ್ನು ನೀಡಿದರು.

# ಅಮೆರಿಕ ಸೇನಾದಿನಾಚರಣೆಗೆ ಪಾಕ್ ಸೇನಾ ಮುಖ್ಯಸ್ಥ ಅತಿಥಿ

**ವಾಷಿಂಗ್ಟನ್, ಜೂ.12:** ಪಾಕಿಸ್ತಾನದ ಸೇನಾ ಮುಖ್ಯಸ್ಥ ಫೀಲ್ ಮಾರ್ಷಲ್ ಅಸಿಮ್ ಮುನೀರ್ ಅವರನ್ನು ಅಮೆರಿಕ ಸೇನಾ ದಿನಾಚರಣೆಗೆ ಆಹ್ವಾನ ನೀಡುವ ಮೂಲಕ ಅಮೆರಿಕ ಮತ್ತೆ ತನ್ನ ನರಿಬುದ್ಧಿ ಪ್ರದರ್ಶಿಸಿದೆ.

ಈ ವಾರ ವಾಷಿಂಗ್ಟನ್ ಡಿಸಿಯಲ್ಲಿ ನಡೆಯಲಿರುವ ಅಮೆರಿಕ ಸೇನೆಯ 250 ನೇ ವಾರ್ಷಿಕೋತ್ಸವದ ಆಚರಣೆಯಲ್ಲಿ ಭಾಗವಹಿಸಲು ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ವಾಷಿಂಗ್ಟನ್‌ನಿಂದ ಆಹ್ವಾನ ಬಂದ ನಂತರ, ಮುನೀರ್ ಶನಿವಾರ ಅಮೆರಿಕದ ರಾಜಧಾನಿಯಲ್ಲಿ ನಡೆಯಲಿರುವ ಮಿಲಿಟರಿ ಮೆರವಣಿಗೆಯಲ್ಲಿ ತಮ್ಮ ಉಪಸ್ಥಿತಿಯನ್ನು ದೃಢಪಡಿಸಿದ್ದಾರೆ, ಇದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ 79 ನೇ ಹುಟ್ಟುಹಬ್ಬವೂ ಆಗಿದೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಹೆಚ್ಚಿದ ಉದ್ವಿಗ್ನತೆಯ ನಡುವೆ ಅವರ ಭೇಟಿ ಬಂದಿದೆ. ಮೂಲಗಳ ಪ್ರಕಾರ, ಮುನೀರ್ ತಮ್ಮ ಭೇಟಿಯ ಸಮಯದಲ್ಲಿ ಅಮೆರಿಕ ವಿದೇಶಾಂಗ ಇಲಾಖೆ ಮತ್ತು ಪೆಂಟಗನ್‌ನ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಪಾಕಿಸ್ತಾನ ಅಥವಾ ಅಮೆರಿಕ ಎರಡೂ ಉನ್ನತ ಮಟ್ಟದ ಮಿಲಿಟರಿ ನಿಶ್ಚಿತಾರ್ಥವನ್ನು ದೃಢಪಡಿಸಿಲ್ಲ. ಮುನೀರ್ ಅವರನ್ನು ಅಮೆರಿಕದ ಉನ್ನತ ಜನರಲ್ ಹೊಗಳಿದ ಕೆಲವು ದಿನಗಳ ನಂತರ ಈ ಭೇಟಿ ಬಂದಿದೆ. ಈ ವಾರ ನಡೆದ ಕಾಂಗ್ರೆಸ್ ವಿಚಾರಣೆಯಲ್ಲಿ, ಯುಎಸ್ ಸೆಂಟ್ರಲ್ ಕಮಾಂಡ್ ಮುಖ್ಯಸ್ಥ ಜನರಲ್ ಮೈಕೆಲ್ ಕುರಿಲ್ಲಾ, ಪಾಕಿಸ್ತಾನವನ್ನು ಭಯೋತ್ಪಾದನಾ ನಿಗ್ರಹ ಜಗತ್ತಿನಲ್ಲಿ ಅದ್ಭುತ ಪಾಲುದಾರ ಎಂದು ಕರೆದರು ಮತ್ತು ಖೋರಾಸನ್ ವಿರುದ್ಧದ ಕಾರ್ಯಾಚರಣೆಗಳಿಗೆ ಇಸ್ಲಾಮಾಬಾದ್ ನೀಡಿದ ಕೊಡುಗೆಗಳನ್ನು ಒತ್ತಿ ಹೇಳಿದರು.



**ಇದು ಭಾರತಕ್ಕೆ ದೊಡ್ಡ ರಾಜತಾಂತ್ರಿಕ ಮತ್ತು ಕಾರ್ಯತಂತ್ರದ ಹಿನ್ನಡೆಯಾಗಿದೆ" ಎಂದು ರಮೇಶ್ ಹೇಳಿದ್ದಾರೆ ಮತ್ತು ಜನರಲ್ ಮುನೀರ್ ಆಹ್ವಾನವನ್ನು ಎತ್ತಿ ತೋರಿಸುತ್ತಾ ಅಮೆರಿಕದ ಉದ್ದೇಶವನ್ನು ಪ್ರಶ್ನಿಸಿದ್ದಾರೆ. "ಮೋದಿ ಸರ್ಕಾರ ಆಪರೇಷನ್ ಸಿಂಧೂರ್ ಇನ್ನೂ ನಡೆಯುತ್ತಿದೆ ಎಂದು ಹೇಳುತ್ತಿದೆ; ಅಂತಹ ಪರಿಸ್ಥಿತಿಯಲ್ಲಿ, ಅಮೆರಿಕ ಸೇನಾ ದಿನಾಚರಣೆಯಲ್ಲಿ ಪಾಕಿಸ್ತಾನಿ ಸೇನಾ ಮುಖ್ಯಸ್ಥರು ಅತಿಥಿಯಾಗಿ ಭಾಗವಹಿಸುವುದು ನಿಸ್ಸಂದೇಹವಾಗಿ ಗಂಭೀರ ಕಳವಳಕಾರಿ ವಿಷಯವಾಗಿದೆ" ಎಂದು ರಮೇಶ್ ಹೇಳಿದರು.**

# ಭಾರತ–ಬಾಂಗ್ಲಾ ಸಂಬಂಧ: ಆದರೆ ಏನೋ ಎಡವಟ್ಟಾಗುತ್ತದೆ; ಯೂನುಸ್ ಕಳವಳ



**ಲಂಡನ್, ಜೂ.12:** ಭಾರತದ ಜೊತೆಗೆ ಉತ್ತಮ ಬಾಂಧವ್ಯ ಹೊಂದಲು ಬಾಂಗ್ಲಾದೇಶ ಬಯಸುತ್ತದೆ, ಆದರೆ, ಯಾವಾಗಲೂ ಏನೋ ಎಡವಟ್ಟಾಗುತ್ತದೆ' ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನುಸ್ ತಿಳಿಸಿದರು.

ಲಂಡನ್‌ನಲ್ಲಿ ಛತಾಂ ಹೌಸ್ ಚಿಂತಕರ ಚಾವಡಿಯ ನಿರ್ದೇಶಕಿ ಬ್ರಾನ್‌ವೆನ್ ಮಡ್ಡಾಕ್ಸ್ ಜೊತೆಗೆ ನಡೆದ ಸಂವಾದದಲ್ಲಿ, ಭಾರತದೊಟ್ಟಿಗಿನ ದ್ವಿಪಕ್ಷೀಯ ಸಂಬಂಧ ಹಾಗೂ ದೇಶದಲ್ಲಿ ಪ್ರಜಾಪ್ರಭುತ್ವ ಮರಳಿ ಸ್ಥಾಪನೆ ಮಾಡುವ ಕುರಿತಂತೆಯೂ ಚರ್ಚೆ ನಡೆಸಿದರು.

ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ಮರಳಿ ದೇಶಕ್ಕೆ ಹಸ್ತಾಂತರಿಸುವ ಬಗ್ಗೆ ಭಾರತಕ್ಕೆ ನೀಡಲಾದ ಅನಾಪೌಚರಿಕ ರಾಜತಾಂತ್ರಿಕ ಮಾಹಿತಿಯ ಸಂಗತಿಯನ್ನು ಸಂವಾದದ ವೇಳೆ ಬ್ರಾನ್‌ವೆನ್ ಉಲ್ಲೇಖಿಸಿದರು. ಇದಕ್ಕೆ ಉತ್ತರಿಸಿದ ಯೂನೂಸ್, ಈ ಪ್ರಕ್ರಿಯೆ ಮುಂದುವರಿಯಲಿದೆ. ಇಡೀ ಪ್ರಕ್ರಿಯೆ ಕಾನೂನಾತ್ಮಕ ಹಾಗೂ ಸರಿಯಾದ ಮಾರ್ಗದಲ್ಲಿ ಸಾಗಬೇಕು ಎಂದು ನಾವು ಬಯಸುತ್ತೇವೆ. ಭಾರತದ ಜೊತೆಗೆ ಸದಾ ಅತ್ಯುತ್ತಮ ಸಂಬಂಧ ಬಯಸುತ್ತಿದ್ದೇವೆ. ಅವರು ನಮ್ಮ ನೆರೆಯ ರಾಷ್ಟ್ರವಾಗಿದ್ದು, ನಾವು ಅವರೊಂದಿಗೆ ಯಾವುದೇ ಮೂಲಭೂತ ಸಮಸ್ಯೆಯನ್ನು ಹೊಂದಲು ಬಯಸುವುದಿಲ್ಲ' ಎಂದು ತಿಳಿಸಿದರು. 'ಭಾರತದ ಮಾಧ್ಯಮಗಳಲ್ಲಿ ಸುಳ್ಳು ಸುದ್ದಿಗಳು ಪ್ರಕಟವಾಗುತ್ತಿದ್ರಂತಯೇ, ಪ್ರತಿ ಬಾರಿಯೂ ವಿಷಯಗಳನ್ನು ತಪ್ಪಾಗಿ ಅರ್ಥೈಸಲಾಗುತ್ತದೆ ಎಂದರು.

ಶೇಖ್ ಹಸೀನಾ ಕುರಿತು ಭಾರತದ ಅಸ್ಪಷ್ಟ ಪಾತ್ರದ ಕುರಿತಂತೆ ಸಭಿಕರ ಪ್ರಶ್ನೆಗೆ ಉತ್ತರಿಸಿದ ಅವರು, 'ಹಸೀನಾ ಅವರ ಮೇಲಿನ ಎಲ್ಲ ಸಿಟ್ಟು ಈಗ ಭಾರತದ ಕಡೆಗೆ ವರ್ಗಾವಣೆಯಾಗಿದೆ. ಏಕೆಂದರ, ಈಗ ಅವರು ಅಲ್ಲಿ ನೆಲಸಿದ್ದಾರೆ' ಎಂದರು.

# ಅಮೆರಿಕ–ಚೀನಾ ಒಪ್ಪಂದ: ಅಪರೂಪದ ಖನಿಜ ಸಂಪತ್ತು ನಿರ್ಣಾಯಕ

**ಗಾಂಜ್, ಜೂ.12:** ಅಮೆರಿಕ ಮತ್ತು ಚೀನಾ ನಡುವೆ ವಾಣಿಜ್ಯ ವ್ಯವಹಾರಗಳಿಗೆ ಸಂಬಂಧಿಸಿದಂತೆ ಏರ್ಪಟ್ಟ ಮರು ಒಪ್ಪಂದದಲ್ಲಿ ಚೀನಾ ಹೊಂದಿರುವ 'ಅಪರೂಪದ ಖನಿಜ ಸಂಪತ್ತು' ನಿರ್ಣಾಯಕ ಪಾತ್ರ ವಹಿಸಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಜಾಗತಿಕ ಮಟ್ಟದ ಎಲೆಕ್ಟ್ರಾನಿಕ್ಸ್, ಸೆಮಿಕಂಡಕ್ಟರ್, ತಯಾರಿಕಾ ಉದ್ಯಮ, ರಕ್ಷಣೆ, ಆರೋಗ್ಯ ವಲಯದ ಅನೇಕ ಕಂಪನಿಗಳು ಚೀನಾದಿಂದ ಪೂರೈಕೆಯಾಗುವ ಅಪರೂಪದ ಖನಿಜಗಳನ್ನು ಅವಲಂಬಿಸಿವೆ. ಚೀನಾದಿಂದ ಆಮದಾಗುವ ವಸ್ತುಗಳ ಮೇಲೆ ಅಮೆರಿಕ ಹೇರಿದ್ದ ಭಾರಿ ಪ್ರಮಾಣದ ಪ್ರತಿಸುಂಕದಿಂದಾಗಿ ಜಾಗತಿಕ ಮಾರುಕಟ್ಟೆಯಲ್ಲಿ ಖನಿಜಗಳ ಪೂರೈಕೆ ಸರಪಣಿ ಕಡಿತಗೊಂಡು ಅಸ್ಥಿರತೆ ಕಾಣಿಸಿಕೊಂಡಿತ್ತು. ಹಲವು ಕಂಪನಿಗಳು ಉಭಯ ದೇಶಗಳ



ನಡುವಿನ 'ಸುಂಕ ಸಮರ' ನಿಲ್ಲಿಸಿ. ವ್ಯಾಪಾರ ವಹಿವಾಟಿಗೆ ಅನುಕೂಲ ಮಾಡಿಕೊಡಬೇಕೆಂದು ಆಗ್ರಹಿಸಿದ್ದವು. 'ಅಪರೂಪದ ಖನಿಜ ಸಂಪತ್ತಿನ ಕೊರತೆಯಿಂದ ಕಂಪನಿಯ ಮಾನವ ರೊಬೊ ಕಾರ್ಯಾಚರಣೆಗೂ ತೊಂದರೆಯಾಗಿದೆ' ಎಂದು ಟೆಸ್ಲಾ ಸಿಇಒ ಇಲಾನ್ ಮಸ್ಕ್ ಹೇಳಿದ್ದರು. ಯುರೋಪ್‌ನ ವಾಹನಗಳ ಬಿಡಿಭಾಗಗಳ ತಯಾರಿಕೆಯ ಹಲವು ಕಂಪನಿಗಳು, ಖನಿಜ ಪೂರೈಕೆ ವಿಳಂಬದಿಂದ ಬಾಗಿಲು ಮುಚ್ಚಬೇಕಾಯಿತು ಎಂದು ಯೂರೋಪ್‌ನ ವಾಹನಗಳ ಬಿಡಿಭಾಗಗಳ ಪೂರೈಕೆದಾರದ ಒಕ್ಕೂಟ ಆರೋಪಿಸಿತ್ತು.

ವಾಣಿಜ್ಯ ವ್ಯವಹಾರ ಸುಗಮಗೊಳಿಸುವ ಉದ್ದೇಶದಿಂದ ಅಮೆರಿತದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾದ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರೊಂದಿಗೆ ಇತ್ತೀಚೆಗೆ ದೂರವಾಣಿಯಲ್ಲಿ ಮಾತುಕತೆ ನಡೆಸಿದ್ದರು. ಅದರ ಬೆನ್ನಲ್ಲೇ ಎರಡು ದೇಶಗಳ ನಡುವೆ ಒಪ್ಪಂದ ಏರ್ಪಟ್ಟಿದೆ. ಆದರೆ, ಈ ಒಪ್ಪಂದಕ್ಕೆ ಸಂಬಂಧಿಸಿದಂತೆ ಇನ್ನೂ ಅಧಿಕೃತ ಘೋಷಣೆ ಹೊರಬಿದ್ದಿಲ್ಲ. ಒಪ್ಪಂದಕ್ಕೆ ಪ್ರತಿಯಾಗಿ ಚೀನಾದ ವಿದ್ಯಾರ್ಥಿಗಳಿಗೆ ಅಮೆರಿಕದ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅಧ್ಯಯನ ಕೈಗೊಳ್ಳಲು ಅವಕಾಶ ನೀಡಲಾಗಿದೆ.

# ವಿಮಾನ ದುರಂತ: ನೆರವು ನೀಡಲು ಸಿದ್ಧ; ಬೋಯಿಂಗ್

**ವಾಷಿಂಗ್ಟನ್, ಜೂ.12:** ಲಂಡನ್‌ಗೆ ಹಾರುತ್ತಿದ್ದ ಏರ್‌ಇಂಡಿಯಾ ವಿಮಾನವು ಅಹಮದಾಬಾದ್‌ನಲ್ಲಿಯೇ ಪತನಗೊಂಡ ಬೆನ್ನಲ್ಲೇ, 'ಏರ್ ಇಂಡಿಯಾ ಸಂಸ್ಥೆಗೆ ಅಗತ್ಯ ನೆರವು ನೀಡಲು ಸಿದ್ಧ' ಎಂದು ಅಮೆರಿಕದ ವಿಮಾನ ತಯಾರಿಕಾ ಕಂಪನಿ ಬೋಯಿಂಗ್ ತಿಳಿಸಿದೆ 'ಬೋಯಿಂಗ್ 787–8 ಗ್ರೀಮ್‌ಲೈನರ್'ಗೆ ಸಂಬಂಧಿಸಿದಂತೆ, ನಾವು ಏರ್ ಇಂಡಿಯಾದ ಜೊತೆ ಸಂಪರ್ಕದಲ್ಲಿದ್ದು, ಅಗತ್ಯ ನೆರವು ನೀಡಲು ಸಿದ್ಧರಿದ್ದೇವೆ. ದುರಂತದಲ್ಲಿ ಮೃತಪಟ್ಟ ಪ್ರಯಾಣಿಕರು, ಸಿಬ್ಬಂದಿ ಕುಟುಂಬಸ್ಥರ ದುಃಖದಲ್ಲಿ ನಾವಿದ್ದೇವೆ' ಎಂದು ತಿಳಿಸಿದೆ. 'ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಸಂಗ್ರಹಿಸಲಾಗುತ್ತಿದೆ' ಎಂದು ಸಂಸ್ಥೆ ಈ ಹಿಂದೆ ಹೇಳಿಕೆ ನೀಡಿತ್ತು.

# ವಾರದೊಳಗೆ ಪ್ರತಿಸುಂಕ ನೀತಿ ಕುರಿತು ಪತ್ರ: ಟ್ರಂಪ್



**ವಾಷಿಂಗ್ಟನ್, ಜೂನ್ 12 :** ಪ್ರತಿಸುಂಕ ನಿರ್ಧಾರಕ್ಕೆ ಇನ್ನು ಒಂದು ಅಥವಾ ಎರಡು ವಾರಗಳು ಒಳಗೆ ತಮ್ಮ ವ್ಯಾಪಾರ ಪಾಲುದಾರ ರಾಷ್ಟ್ರಗಳಿಗೆ ಏಕಪಕ್ಷೀಯ ಪತ್ರ ಬರೆಯುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಭಾರತ ಸೇರಿದಂತೆ ವಿವಿಧ ರಾಷ್ಟ್ರಗಳ ಮೇಲೆ ಭಾರಿ ಪ್ರಮಾಣದ ಪ್ರತಿಸುಂಕ ವಿಧಿಸಿ, ಅದರ ಅನುಷ್ಠಾನಕ್ಕೆ ಜುಲೈ 9 ರವರೆಗೆ ಟ್ರಂಪ್ ಗಡುವು ನೀಡಿದ್ದರು. ಗಡುವು ಸಮೀಪಿಸುತ್ತಿರುವ ತಾವೇ ಏಕಪಕ್ಷೀಯವಾಗಿ ಪ್ರತಿಸುಂಕದ ಪ್ರಮಾಣದ ಒಪ್ಪಂದಕ್ಕೆ ಪತ್ರ ಬರೆಯಲಾಗಿದೆ ಕೆನಡಿ ಸೆಂಟರ್‌ನಲ್ಲಿ ನಡೆದ ಕಾರ್ಯಕ್ರಮವನ್ನು ಹೇಳಿದ್ದಾರೆ. ಪ್ರತಿಸುಂಕ ಪ್ರಸ್ತುತ ಯಾವ ರಾಷ್ಟ್ರಗಳೊಂದಿಗೆ ಸೌಹಾರ್ದಯುತ ಮಾತುಕತೆ ನಡೆದಿದೆಯೋ ಅಂಥ ರಾಷ್ಟ್ರಗಳಿಗೆ ಮತ್ತಷ್ಟು ಗಡುವು ವಿಸ್ತರಿಸುವ ಸಾಧ್ಯತೆ ಇದೆ ಎಂದು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಬುಧವಾರ ಹೇಳಿದ್ದಾರೆ. ಅದರ ಬೆನ್ನಲ್ಲೇ ಟ್ರಂಪ್ ಮೇಲ್ಕಂಡ ಹೇಳಿಕೆ.



**ಪಶ್ಚಿಮ ದಂಡೆಯ ಉತ್ತರದಲ್ಲಿರುವ ತುಲ್ಕರ್ಮ್ ನಿರಾಶ್ರಿತರ ಶಿಬಿರದಲ್ಲಿ ಇಸ್ರೇಲಿ ಕಾರ್ಯಾಚರಣೆಯ ಸಮಯದಲ್ಲಿ ಇಸ್ರೇಲಿ ಸೈನಿಕರು ಬೀದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದಾರೆ. ಈದ್ ಅಲ್–ಅಧಾ ರಜಾದಿನದೊಂದಿಗೆ ಶುಕ್ರವಾರದಿಂದ ತುಲ್ಕರ್ಮ್ ಮತ್ತು ನೂರ್ ಶಮ್ಸ್ ಶಿಬಿರಗಳಲ್ಲಿ ಇಸ್ರೇಲಿ ಕಾರ್ಯಾಚರಣೆಗಳು ತೀವ್ರಗೊಂಡಿವೆ ಎಂದು ಯುಎನ್ ಮಾನವೀಯ ವ್ಯವಹಾರಗಳ ಸಮನ್ವಯ ಕಚೇರಿ (ಒಸಿಎಚ್‌ಎ) ತಿಳಿಸಿದೆ. ಪಡೆಗಳು 58 ರಚನೆಗಳಿಗೆ ಧ್ವಂಸ ಆದೇಶಗಳನ್ನು ಜಾರಿಗೆ ತಂದವು. ಪ್ಯಾಲೆಸ್ಟೈನ್ ನಿರಾಶ್ರಿತರಿಗಾಗಿ ಯುಎನ್ ಪರಿಹಾರ ಸಂಸ್ಥೆ ಮೂರು ಡಜನ್‌ಗಿಂತಲೂ ಹೆಚ್ಚು ಕಟ್ಟಡಗಳನ್ನು ಕೆಡವಲಾಗಿದೆ ಎಂದು ವರದಿ ಮಾಡಿದೆ, ಜೂನ್ ಆರಂಭದಲ್ಲಿ ಘೋಷಿಸಲಾದ ಮೂಲ ಆದೇಶಗಳನ್ನು ಮೀರಿ ವಿನಾಶ ವಿಸ್ತರಿಸಿದೆ.**

# ವಲಸಿಗರ ವಿರುದ್ಧ ದಾಳಿ ಅಮೆರಿಕದಲ್ಲಿ ಭುಗಿಲೆದ್ದ ಪ್ರತಿಭಟನೆ

**ಆಸ್ಮಿನ್, ಅಮೆರಿಕ, ಜೂನ್ 12:** ವಲಸಿಗರ ವಿರುದ್ಧ ಅಧಿಕಾರಿಗಳು ಕೈಗೊಂಡಿರುವ ಶೋಧ ಕಾರ್ಯಾಚರಣೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ನ್ಯಾಷನಲ್ ಗಾರ್ಡ್ಸ್ ನಿಯೋಜಿಸಿರುವುದನ್ನು ಖಂಡಿಸಿ ವಾರಾಂತ್ಯದಲ್ಲಿ ದೇಶದಾದ್ಯಂತ ಬೃಹತ್ ಪ್ರತಿಭಟನೆ ನಡೆಸಲು ಸಿದ್ಧತೆಗಳು ನಡೆದಿವೆ. ಗುರುವಾರವೂ ಸಿಯಾಟಲ್, ನ್ಯೂಯಾರ್ಕ್, ಸ್ಯಾನ್ ಅಂಟೊನಿಯೊ, ಫಿಲಡೆಲ್ಫಿಯಾ, ಸ್ಯಾನ್ ಫ್ರಾನ್ಸಿಸ್ಕೋ. ಷಿಕಾಗೊ, ಡೆನ್ವೇರ್ ಸೇರಿದಂತೆ ದೇಶದ ವಿವಿಧೆಡೆ ಶಾಂತಿಯುತವಾಗಿ ಪ್ರತಿಭಟನೆ ನಡೆಸಿದ್ದು, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ನೂರಾರು ಪ್ರತಿಭಟನಕಾರರನ್ನು ಬಂಧಿಸಿದ ವೇಳೆ ಪೊಲೀಸರ ಜೊತೆ ಪ್ರತಿಭಟನಕಾರರು ವಾಗ್ವಾದ ನಡೆಸಿದರು. ಮುಂಬರುವ ದಿನಗಳಲ್ಲಿ ಇದಕ್ಕೂ ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ನಡೆಸಲು ಹೋರಾಟಗಾರರು ನಿರ್ಧರಿಸಿದ್ದಾರೆ. ಇದರ ಬೆನ್ನಲ್ಲೇ. ವಾಷಿಂಗ್ಟನ್‌ನಲ್ಲಿ ಶನಿವಾರ ಸೇನಾ ಪರೇಡ್ ಆಯೋಜಿಸಲು ಡೊನಾಲ್ಡ್ ಟ್ರಂಪ್ ಯೋಜನೆ ರೂಪಿಸಿದ್ದಾರೆ.'ವಲಸಿಗರ ಮೇಲಿನ ಶೋಧ ಹಾಗೂ ಗಡೀಪಾರು ಪ್ರಕ್ರಿಯೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ' ಎಂದು ಟ್ರಂಪ್ ಸರ್ಕಾರ ಸ್ಪಷ್ಟಪಡಿಸಿದೆ




**ಅಮೆರಿಕದ ಲಾಸ್ ಏಂಜಲೀಸ್‌ನಲ್ಲಿ ಪ್ರತಿಭಟನಾಕಾರರನ್ನು ಬಂಧಿಸಲಾಗುತ್ತಿರುವ ಚಿತ್ರಗಳಿವೆ. ಶನಿವಾರದಿಂದ ವಲಸೆ ಪ್ರತಿಭಟನೆಗಳಲ್ಲಿ ತೊಡಗಿರುವ ಸುಮಾರು 400 ಜನರನ್ನು ಲಾಸ್ ಏಂಜಲೀಸ್ ಪೊಲೀಸ್ ಇಲಾಖೆ ಬಂಧಿಸಿದೆ ಅಥವಾ ವಶಕ್ಕೆ ಪಡೆದಿದೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ. ಬಂಧಿಸಲ್ಪಟ್ಟ ಮತ್ತು ಬಂಧಿಸಲ್ಪಟ್ಟವರಲ್ಲಿ 330 ದಾಖಲೆರಹಿತ ವಲಸಿಗರು ಮತ್ತು ಹಲ್ಲೆ ಮತ್ತು ಅಡಚಣೆಗಾಗಿ ಬಂಧಿಸಲ್ಪಟ್ಟ 157 ಜನರು ಸೇರಿದ್ದಾರೆ ಎಂದು ಬಿಬಿಸಿ ನ್ಯೂಸ್ ಬಹಿರಂಗಪಡಿಸಿದೆ.**



# 50 ಮೀ ರೈಫಲ್ ಸ್ಪರ್ಧೆ: ಕೌರ್‌ಗೆ ಕಂಚಿನ ಪದಕ

**ಮ್ಯೂನಿಚ್, ಜೂನ್ 12:** ಗುರುವಾರ ಇಲ್ಲಿ ನಡೆದ ಐಎಸ್‌ಎಸ್‌ಎಫ್ ವಿಶ್ವಕಪ್ 2025 ರ ಮಹಿಳೆಯರ 50 ಮೀ ರೈಫಲ್ 3 ಪೊಸಿಷನ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದ ಭಾರತದ ರೈಫಲ್ ಶೂಟರ್ ಸಿಫ್ಟ್ ಕೌರ್ ಸಮ್ರಾ ಮತ್ತೊಂದು ಗರಿಯನ್ನು ತಮ್ಮ ಮುಡಿಗೆ ಸೇರಿಸಿಕೊಂಡರು. 2022 ರ ಏಷ್ಯನ್ ಕ್ರೀಡಾಕೂಟದಲ್ಲಿ ವಿಶ್ವ ದಾಖಲೆಯೊಂದಿಗೆ ಇತಿಹಾಸ ಬರೆದಿದ್ದ 23 ವರ್ಷದ ಈಕೆ, ಫೈನಲ್‌ನಲ್ಲಿ ಉಕ್ಕಿನ ನರಗಳನ್ನು ಪ್ರದರ್ಶಿಸಿದರು, ಎಂಟು ಮಹಿಳೆಯರ ನಡುವಿನ ಹೆಚ್ಚಿನ ಒತ್ತಡದ ಸ್ಪರ್ಧೆಯಲ್ಲಿ ಮೂರನೇ ಸ್ಥಾನ ಪಡೆಯಲು 453.1 ಅಂಕಗಳನ್ನು ಗಳಿಸಿದರು. ಮಂಡಿಯೂರಿ ಮತ್ತು ಪ್ರೋನ್ ಸುತ್ತುಗಳ ನಂತರ ಲೀಡರ್‌ಬೋರ್ಡ್‌ನ ಮಧ್ಯದಲ್ಲಿದ್ದರೂ, ಸಮ್ರಾ ಸ್ಟ್ಯಾಂಡಿಂಗ್ ಸರಣಿಯಲ್ಲಿ ಅಗಾಧವಾದ ಧೈರ್ಯ ಮತ್ತು ಸ್ಥಿರತೆಯನ್ನು ತೋರಿಸಿದರು. ಅವರ ಉತ್ತಮ ಸಮಯೋಚಿತ 10 ರ ಸರಣಿಯು ಅವರನ್ನು ಶ್ರೇಯಾಂಕದಲ್ಲಿ ಹೆಚ್ಚಿಸಿತು, ಅಂತಿಮವಾಗಿ ಬೆಳ್ಳಿ ಪದಕ ವಿಜೇತೆ ಸ್ವಿಟ್ಜರ್‌ಲ್ಯಾಂಡ್‌ನ ಎಮೆಲಿ ಜೇಗ್ಗಿ (464.8) ಗಿಂತ ಕೇವಲ 0.9 ಅಂಕಗಳಿಂದ ಹಿಂದಿತ್ತು. ಎರಡು ಬಾರಿಯ



ಒಲಿಂಪಿಯನ್ ನಾರ್ವೆಯ ಜೀನೆಟ್ ಹೆಗ್ ಡ್ಯುಸ್ಟಾಡ್ ಅವರು 466.9 ಅಂಕಗಳೊಂದಿಗೆ ಚಿನ್ನದ ಪದಕವನ್ನು ಗೆದ್ದರು. ಈ ವರ್ಷ



**ಇಂಡಿಯಾನಾ ಪೇಸರ್ಸ್‌ನ ಆಂಡ್ರ್ಯೂ ನೆಂಬಾರ್ಡ್ (ಸಿ) ಅವರು ಯುನೈಟೆಡ್ ಸ್ಟೇಟ್ಸ್‌ನ ಇಂಡಿಯಾನಾಪೊಲಿಸ್‌ನಲ್ಲಿ ಒಕ್ಲಹೋಮ ಸಿಟಿ ಥಂಡರ್ ಮತ್ತು ಇಂಡಿಯಾನಾ ಪೇಸರ್ಸ್ ನಡುವಿನ ಬ್ಯಾಸ್ಕೆಟ್ ಬಾಲ್ ಪಂದ್ಯದ ರೋಚಕ ಸನ್ನಿವೇಶ.**

# ಲಾರ್ಡ್ಸ್‌ನಲ್ಲಿ ನಡೆದ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್: ಫೈನಲ್‌ನಲ್ಲಿ ಕಮ್ಮಿನ್ಸ್‌ಗೆ 300ನೇ ವಿಕೆಟ್ ಗಳಿಕೆ

**ಲಂಡನ್, ಜೂನ್ 12 :** ಲಾರ್ಡ್ಸ್‌ನಲ್ಲಿ ನಡೆದ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ (ಡಬ್ಲ್ಯುಟಿಸಿ) ಫೈನಲ್‌ನ ಎರಡನೇ ದಿನದಂದು ದಕ್ಷಿಣ ಆಫ್ರಿಕಾ ವಿರುದ್ಧ ವಿನಾಶಕಾರಿ ಬೌಲಿಂಗ್ ಪ್ರದರ್ಶನ ನೀಡುವ ಮೂಲಕ ಆಸ್ಟ್ರೇಲಿಯಾದ ನಾಯಕ ಪ್ಯಾಟ್ ಕಮ್ಮಿನ್ಸ್ ಗುರುವಾರ 300 ಟೆಸ್ಟ್ ವಿಕೆಟ್ ಪಡೆದ ಎಂಟನೇ ಆಸ್ಟ್ರೇಲಿಯಾ ಮತ್ತು ಒಟ್ಟಾರೆ 22ನೇ ಬೌಲರ್ ಎನಿಸಿಕೊಂಡಿದ್ದಾರೆ. ಲಾರ್ಡ್ಸ್‌ನಲ್ಲಿ ನಡೆದ ಟೆಸ್ಟ್ ನಾಯಕರೊಬ್ಬರ ಅತ್ಯುತ್ತಮ ಬೌಲಿಂಗ್ ಅಂಕಿಅಂಶಗಳಾದ ಕಮ್ಮಿನ್ಸ್ 28 ರನ್‌ಗಳಿಗೆ 6 ವಿಕೆಟ್ ಪಡೆದಿದ್ದು, ದಕ್ಷಿಣ ಆಫ್ರಿಕಾದ ಬ್ಯಾಟಿಂಗ್ ಕ್ರಮಾಂಕವನ್ನು ಕೆಡವಿತು ಮತ್ತು ಆಸ್ಟ್ರೇಲಿಯಾಕ್ಕೆ ಮೊದಲ ಇನ್ನಿಂಗ್ಸ್ ಮುನ್ನಡೆಯನ್ನು ನೀಡಿತು. ಗಮನಾರ್ಹ ಅಂಕಿಅಂಶಗಳ ಮೈಲಿಗಲ್ಲು ಇದಾಗಿದ್ದು, ಕಮ್ಮಿನ್ಸ್ ಮಿಚೆಲ್ ಸ್ಟಾರ್ಕ್ ಮತ್ತು ನಾಥನ್ ಲಿಯಾನ್ ಅವರೊಂದಿಗೆ 300 ಅಥವಾ ಅದಕ್ಕಿಂತ ಹೆಚ್ಚು ವಿಕೆಟ್‌ಗಳನ್ನು ಪಡೆದ ಮೂವರು ಆಟಗಾರರನ್ನು ಒಳಗೊಂಡ ಮೊದಲ ಟೆಸ್ಟ್ ಬೌಲಿಂಗ್ ದಾಳಿಯನ್ನು ರೂಪಿಸುವ ಮೂಲಕ ಇತಿಹಾಸವನ್ನು ಸೃಷ್ಟಿಸಿದರು. ಜೋಶ್ ಹ್ಯಾಜಲ್‌ವುಡ್ 280 ರನ್ ಗಳಿಸಿ ಗುರಿ ತಲುಪಲಿಲ್ಲ. ಇನ್ನಿಂಗ್ಸ್ ವಿರಾಮದ ಸಮಯದಲ್ಲಿ ಆತಿಥೇಯ ಪ್ರಸಾರಕರೊಂದಿಗೆ ಮಾತನಾಡಿದ ಕಮ್ಮಿನ್ಸ್, "ಇದು ಅದ್ಭುತವಾಗಿದೆ, ಮತ್ತು ನನಗೆ ಇಲ್ಲಿ ಕೆಲವು ಕುಟುಂಬವಿದೆ, ಅದು ಒಳ್ಳೆಯದು. ಅವರು ಚೆನ್ನಾಗಿ



ಬ್ಯಾಟಿಂಗ್ ಮಾಡುತ್ತಿದ್ದರು, ಈ ಮೊದಲ ಇನ್ನಿಂಗ್ಸ್‌ನಲ್ಲಿ ನಮಗೆ ಉತ್ತಮ ಮುನ್ನಡೆ ಸಿಕ್ಕಿದ್ದಕ್ಕೆ ತುಂಬಾ ಸಂತೋಷವಾಗಿದೆ. ಯಾವುದೇ ವೇಗದ ಬೌಲರ್‌ಗೆ 300 ರನ್‌ಗಳು ದೊಡ್ಡ ಸಂಖ್ಯೆಯಾಗಿದೆ, ಅಂದರೆ ನೀವು ಕೆಲವು ಗಾಯಗಳು ಮತ್ತು ತೊಂದರೆಗಳ ವಿರುದ್ಧ ಹೋರಾಡಿದ್ದೀರಿ, ಅದನ್ನು ದಾಟಿದ್ದೀರಿ ಮತ್ತು ವಿಭಿನ್ನ ಪರಿಸ್ಥಿತಿಗಳಲ್ಲಿ ಉತ್ತಮವಾಗಿ ಆಡಿದ್ದೀರಿ." ಮೊದಲ ಸಂಜೆ ವಿಯಾನ್ ಮುಲ್ಡರ್ ಅವರನ್ನು ಔಟ್ ಮಾಡುವ ಮೂಲಕ ಹೊಡೆತ ನೀಡಿದ ಕಮ್ಮಿನ್ಸ್ ಗುರುವಾರ ಮತ್ತೆ ಐದು ವಿಕೆಟ್‌ಗಳನ್ನು ಕಬಳಿಸಿದರು. ಬೆಳಿಗ್ಗೆ ಟೆಂಬಾ ಬವುಮಾ ಅವರನ್ನು ಔಟ್ ಮಾಡುವ ಮೂಲಕ ಪ್ರತಿರೋಧವನ್ನು ಮುರಿದರು ಮತ್ತು ನಂತರ ಊಟದ ನಂತರ 4.1–4–4 ರನ್‌ಗಳ ಉಜ್ವಲ ಪ್ರದರ್ಶನ ನೀಡಿದರು, ದಕ್ಷಿಣ ಆಫ್ರಿಕಾದ ಕೆಳ ಕ್ರಮಾಂಕದ ಮೂಲಕ ಓಡಿದರು. ಅವರ ಬಲಿಪಶುಗಳಲ್ಲಿ ಕೈಲ್ ವೆರ್ರೆನ್ (ಎಲ್ಬಿಡಬ್ಲ್ಯೂ), ಮಾರ್ಕೊ ಜಾನ್ಸೆನ್ (ಮುಂದಿನ ಅಂಚಿನಲ್ಲಿ ಕ್ಯಾಚ್), ಡೇವಿಡ್ ಬೆಡಿಂಗ್ಹ್ಯಾಮ್ (ಔಟ್ಸೈಡ್ ಎಡ್ಜ್) ಮತ್ತು ಅಂತಿಮವಾಗಿ ಕಗಿಸೊ ರಬಾಡ – ಡೀಪ್ ಸ್ಕ್ವೇರ್ ಲೆಗ್‌ನಲ್ಲಿ ಅದ್ಭುತ ಕ್ಯಾಚ್ – ಇದು ಅವರ 300 ನೇ ವಿಕೆಟ್‌ಗೆ ಕಾರಣವಾಯಿತು. ಈ ಸಾಧನೆಯೊಂದಿಗೆ, ಕಮ್ಮಿನ್ಸ್ ಈಗ 300 ಕ್ಕೂ ಹೆಚ್ಚು ಟೆಸ್ಟ್ ವಿಕೆಟ್‌ಗಳನ್ನು ಹೊಂದಿರುವ ಬೌಲರ್‌ಗಳಲ್ಲಿ ನಾಲ್ಕನೇ ಅತ್ಯುತ್ತಮ ಸ್ಟ್ರೈಕ್ ರೇಟ್ ಅನ್ನು ಹೊಂದಿದ್ದಾರೆ, ಕಗಿಸೊ ರಬಾಡ, ಡೇಲ್ ಸ್ಟೇನ್ ಮತ್ತು ವಕಾರ್ ಯೂನಿಸ್‌ಗಿಂತ ಹಿಂದುಳಿದಿದ್ದಾರೆ. ಅವರು ಈಗ ಈ ಡಬ್ಲ್ಯೂಟಿಸಿ ಸೈಕಲ್‌ನಲ್ಲಿ 23.03 ಸರಾಸರಿಯಲ್ಲಿ 79 ವಿಕೆಟ್‌ಗಳನ್ನು ಪಡೆದಿದ್ದಾರೆ.